ರಾಯಚೂರು, ಕೊಪ್ಪಳ, ಯಾದಗಿರಿ, ಕಲಬುರ್ಗಿ, ಬಳ್ಳಾರಿ, ವಿಜಯನಗರ, ಬೀದರ, ಏಕಕಾಲಕ್ಕೆ ಪ್ರಕಟಣೆ
Raichur, Koppal, Yadagiri, Kalburgi, Ballary, Vijaya Nagar, Bidar

ಕನ್ನಡ ಮಾತೃಭೂಮಿ
ಕನ್ನಡದಿನ ಪತ್ರಿಕೆ
ರಾಯಚೂರಿನಿಂದ ರಾಜ್ಯದವರೆಗೆ

ಸಂಪಾದಕರು : ಶ್ಯಾಮ್ ಸುಂದರ್.ಎಲ್
EDITOR : SHYAM SUNDER L

KANNADA MATHRUBHOOMI
KANNADA DAILY PAPER

mathrubhoomircr@gmail.com
Call : 9886635117

ಸಂಪುಟ : Volume : 03 | ಸಂಚಿಕೆ Issuse : 167 | ದಿನಾಂಕ : 17-04-2026 Date : 17-04-2026 | ಶುಕ್ರವಾರ Friday | RNI: Karkan/2023/89199 Post Reg No.: RCR/L/RNP/98/2025-2027 | ರಾಯಚೂರು Raichur | ಪುಟ : Pages : 04 | ರೂ Rs. 2

## ಹಿರೇರಾಯಕುಂಪಿ ಬಳಿ ಕೃಷ್ಣಾ ನದಿಯಲ್ಲಿ ಕುರಿಗಾಹಿ ಮೇಲೆ ಮೊಸಳೆ ದಾಳಿ

■ ಕನ್ನಡ ಮಾತೃ ಭೂಮಿ ವಾರ್ತೆ

**ದೇವದುರ್ಗ,ಏ.16-** ತಾಲೂಕಿನ ಹಿರೇರಾಯಕುಂಪಿ ಬಳಿ ಕೃಷ್ಣಾ ನದಿಯಲ್ಲಿ ಕುರಿಗಾಹಿ ಮೇಲೆ ಮೊಸಳೆ ದಾಳಿ ನಡೆದಿದ್ದು, ಬಲಗೈ ತುಂಡಾಗಿದೆ. ಮೊಸಳೆ ದಾಳಿಯಿಂದ ಕೈ ಕಳೆದುಕೊಂಡ ಕುರಿಗಾಹಿ ಹೊನ್ನಗುಡೆಪ್ಪ ಪ್ರಾಣಾಪಾಯದಿಂದ ಪಾರಾಗಿದ್ದು, ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಕೃಷ್ಣಾ ನದಿಯಲ್ಲಿ ಕುರಿಗಳಿಗೆ ನೀರು ತರಲು ಹೋದಾಗ ಮೊಸಳೆ ದಾಳಿ ನಡೆದಿದೆ. ಏಕಾಏಕಿ ದಾಳಿ ಮಾಡಿ ಕೈ ಕಚ್ಚಿ ನದಿಯಲ್ಲಿ ಎಳೆದುಕೊಂಡು ಹೋಗಿದ್ದ ಮೊಸಳೆ ಹೊನ್ನಗುಡೆಪ್ಪನನ್ನ ನೀರಿನಲ್ಲಿ ಮುಳುಗಿಸಿದೆ. ನೀರಿನಲ್ಲಿ ಎಳೆದೊಯ್ದರು ಹೋರಾಡಿ ಹೊರಗೆ ಬಂದ ಹೊನ್ನಗುಂಡಪ್ಪ ಮೊಸಳೆಯಿಂದ ತಪ್ಪಿಸಿಕೊಳ್ಳಲು ಕೈ ಎಳೆದುಕೊಂಡಾಗ ಬಲಗೈ ತುಂಡಾಗಿದೆ.

ರಾಯಚೂರಿನ ಒಪೆಕ್ ಆಸ್ಪತ್ರೆಗೆ ಗಾಯಾಳು ದಾಖಲಾಗಿದ್ದು, ಚಿಕಿತ್ಸೆ ಮುಂದುವರೆದಿದೆ. ಕೃಷ್ಣಾ ನದಿ ಪಾತ್ರದಲ್ಲಿ ಮೊಸಳೆಗಳ ಸಂಖ್ಯೆ ಹೆಚ್ಚಾಗಿದ್ದು, ಸ್ವಲ್ಪ ಮೈಮರೆತರು ಮೊಸಳೆ ದಾಳಿಗೆ ಒಳಗಾಗುವ ಸಾಧ್ಯತೆಗಳು ಹೆಚ್ಚಾಗಿವೆ. ಹೀಗಾಗಿ ಅರಣ್ಯ ಇಲಾಖೆ ಮೊಸಳೆಗಳ ನಿಯಂತ್ರಣ ಮಾಡಬೇಕು ಹಾಗೂ ದಾಳಿಗೊಳಗಾದ ಕುರಿಗಾಹಿಗೆ ಸರ್ಕಾರದಿಂದ ಸೂಕ್ತ ಪರಿಹಾರ ನೀಡಬೇಕು ಎಂದು ಗ್ರಾಮಸ್ಥರು ಒತ್ತಾಯಿಸಿದ್ದಾರೆ.

## ಹರಿಜನವಾಡದಲ್ಲಿ ಅಂಬೇಡ್ಕರ್ ಹಾಗೂ ಬಾಬು ಜಗಜೀವನರಾಮ ಜಯಂತಿ ಅಭೂತಪೂರ್ವ ಯಶಸ್ವಿ-ಪಿ.ಪವನಕುಮಾರ

**ರಾಯಚೂರು,ಏ.16-**ನಗರದ ಹರಿಜನವಾಡ ಬಡಾವಣೆಯಲ್ಲಿ ಹರಿಜನವಾಡ ಯುವಕರ ಸಮಿತಿ ವತಿಯಿಂದ ಮೊನ್ನೆ ನಡೆದ ಸಂವಿಧಾನ ಶಿಲ್ಪಿ ಭಾರತ ರತ್ನ ಡಾ. ಬಿ. ಆರ್. ಅಂಬೇಡ್ಕರ್ ರವರ 135ನೇ ಹಾಗೂ ಹಸಿರು ಕ್ರಾಂತಿಯ ಹರಿಕಾರ ಡಾ. ಬಾಬು ಜಗಜೀವನ್ ರಾಮ್ ರವರ 119ನೇ ಜಯಂತೋತ್ಸವ ಭಾವಚಿತ್ರ ಮೆರವಣಿಗೆ ಯಶಸ್ವಿಗೊಳಿಸಿದ ಜನರಿಗೆ ಚಿರ ಋಣಿಯಾಗಿರುವೆ ಎಂದು ಹರಿಜನವಾಡ ಯುವಕರ ಸಮಿತಿ ಅಧ್ಯಕ್ಷ ಪಿ.ಪವನ್‌ಕುಮಾರ ತಿಳಿಸಿದ್ದಾರೆ.

ಹರಿಜನವಾಡದ ಎಲ್ಲಾ, ರಾಜಿಕೀಯ ಮುಖಂಡರು ಹಾಗೂ ಸಂಘ -ಸಂಸ್ಥೆ ಪಧಾಧಿಕಾರಿಗಳು ಹಾಗೂ

## ಜನನ ಮರಣ ಪ್ರಮಾಣ ಪತ್ರ ಶುಲ್ಕ ಹೆಚ್ಚಳ ವಿರೋಧಿಸಿ ಸ್ವಾಭಿಮಾನಿ ರಕ್ಷಣಾವೇದಿಕೆ ಪ್ರತಿಭಟನೆ

**ರಾಯಚೂರು,ಏ.16-**ಮಹಾನಗರ ಪಾಲಿಕೆಯ ಜನನ ಮತ್ತು ಮರಣ ನೋಂದಣಿ ವಿಭಾಗದಲ್ಲಿ ನಡೆಯುತ್ತಿರುವ ಅವ್ಯವಸ್ಥೆ, ಸಾರ್ವಜನಿಕರಿಗೆ ಆಗುತ್ತಿರುವ ತೊಂದರೆ ಹಾಗೂ ಅಧಿಕ ಶುಲ್ಕ ವಸೂಲಿ ಆರೋಪಗಳ ವಿರುದ್ಧ ಕರ್ನಾಟಕ ರಕ್ಷಣಾ ವೇದಿಕೆ (ಸ್ವಾಭಿಮಾನಿ ಬಣ) ರಾಯಚೂರು ಜಿಲ್ಲಾ ಘಟಕದಿಂದ ಜಿಲ್ಲಾಡಳಿತ ಭವನದ ಎದುರು ಇಂದು ಜಿಲ್ಲಾಧಿಕಾರಿ ಕಚೇರಿಯ ಸ್ಥಳೀಯ ಅಧಿಕಾರಿಗೆ ಮನವಿ ಪತ್ರ ಸಲ್ಲಿಸಲಾಯಿತು.

ಸಾರ್ವಜನಿಕರು ದಿನನಿತ್ಯ ಜನನ ಹಾಗೂ ಮರಣ ಪ್ರಮಾಣಪತ್ರ ಪಡೆಯಲು ಅಗತ್ಯ ದಾಖಲೆಗಳನ್ನು ಸಲ್ಲಿಸಿದರೂ ಸಹ ಸಂಬಂಧಪಟ್ಟ ಸಿಬ್ಬಂದಿಗಳು ಸರಿಯಾಗಿ ಪರಿಶೀಲನೆ ಮಾಡದೇ ನಿರ್ಲಕ್ಷ್ಯ ತೋರಿಸುತ್ತಿದ್ದಾರೆ. ಇದರಿಂದ ಜನರು ಅನೇಕ ಬಾರಿ ಕಚೇರಿಗೆ ಸುತ್ತಾಡುವ ಪರಿಸ್ಥಿತಿ ನಿರ್ಮಾಣವಾಗಿದ್ದು, ಸಮಯ ಮತ್ತು ಹಣ ಎರಡೂ ವ್ಯರ್ಥವಾಗುತ್ತಿದೆ ಎಂದು ತಿಳಿಸಿದರು. ➘4

### ಮಂತ್ರಾಲಯ : ಗೂಡ್ಸ್ ವಾಹನ - ಲಾರಿ ಡಿಕ್ಕಿ

# ದೇವರ ದರ್ಶನಕ್ಕೆ ತೆರಳುತ್ತಿದ್ದ ಕರ್ನಾಟಕದ 8 ಜನ ಸಾವು

■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು/ಕರ್ನೂಲ್,ಏ.16-**ಮಂತ್ರಾಲಯಕ್ಕೆ ತೆರಳುತ್ತಿದ್ದ ಅಶೋಕ್ ಲೇಲ್ಯಾಂಡ್ ದೋಸ್ತ್ ಗೂಡ್ಸ್ ವಾಹನ ಹಾಗೂ ಫ್ಲೈಆಶ್ ಲಾರಿ ನಡುವೆ ಸಂಭವಿಸಿದ ಭೀಕರ ಅಪಘಾತದಲ್ಲಿ ರಾಜ್ಯದ 8 ಮಂದಿ ಸಾವನ್ನಪ್ಪಿ, ಹಲವರು ಗಾಯಗೊಂಡಿದ್ದಾರೆ. ಆಂಧ್ರಪ್ರದೇಶದ ಕರ್ನೂಲ್ ಜಿಲ್ಲೆಯ ಮಂತ್ರಾಲಯ ಹತ್ತಿರದ ಚಿಲಕನಡೋನ ಗ್ರಾಮದ ಬಳಿ ಗುರುವಾರ ಬೆಳಗಿನ ಜಾವ ಘಟನೆ ನಡೆದಿದೆ.

ಮಂತ್ರಾಲಯದ ರಾಯರ ದರ್ಶನಕ್ಕಾಗಿ ಚಿಕ್ಕಮಗಳೂರಿನಿಂದ ಮಂತ್ರಾಲಯಕ್ಕೆ ಬರುತ್ತಿದ್ದ ಗೂಡ್ಸ್ ವಾಹನ ಹಾಗೂ ಬೀದರ್ ನಿಂದ ತುಮಕೂರಿಗೆ ತೆರಳುತ್ತಿದ್ದ ಲಾರಿ ನಡುವೆ ಡಿಕ್ಕಿ ಸಂಭವಿಸಿದೆ. ಬೆಳಗಿನ ಜಾವ ಸುಮಾರು 4 ಗಂಟೆ ವೇಳೆಗೆ ಅಪಘಾತ ನಡೆದಿದೆ ಎಂದು ತಿಳಿದುಬಂದಿದೆ.

ಘಟನೆಯಲ್ಲಿ ಕುಮಾರ್ (50), ದೀಪಿಕಾ (42), ಸುನಿಲ್ (40), ಯಶೋಧಮ್ಮ (60), ಪುಟ್ಟಮ್ಮ (55), ಬೆಳ್ಳಿ (3), ಲೋಲಾಕ್ಷಿ ಹಾಗೂ ಮೀನಾಕ್ಷಿ ಎಂಬವರು ಮೃತಪಟ್ಟಿದ್ದಾರೆ ಎಂದು ಗುರುತಿಸಲಾಗಿದೆ. ಮೃತರಲ್ಲಿ ಐವರು ಮಹಿಳೆಯರು, ಇಬ್ಬರು ಪುರುಷರು ಹಾಗೂ ಮೂರು ವರ್ಷದ ಮಗು ಸೇರಿದೆ. 7 ಮಂದಿ ತೀವ್ರ ಗಾಯಗೊಂಡಿದ್ದು, ಅವರನ್ನು ಕರ್ನೂಲ್ ಆಸ್ಪತ್ರೆಗೆ ದಾಖಲಿಸಲಾಗಿದೆ. ಉಳಿದ ನಾಲ್ವರು ಎಮ್ಮಿಗನೂರು





ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ.

ಹಾಸನ ಹಾಗೂ ಚಿಕ್ಕಮಗಳೂರು ಮೂಲದ ಒಟ್ಟು 23 ಮಂದಿ ಗೂಡ್ಸ್ ವಾಹನದಲ್ಲಿ ಪ್ರಯಾಣಿಸುತ್ತಿದ್ದರು ಎಂಬ ಮಾಹಿತಿ ಲಭ್ಯವಾಗಿದೆ. ಅಪಘಾತದ ರಭಸಕ್ಕೆ ಜನರಿದ್ದ ಗೂಡ್ಸ್ ವಾಹನದ ಎದುರುಗಡೆ ಸಂಪೂರ್ಣ ನಜ್ಜುಗುಜ್ಜಾಗಿದೆ. ಅಲ್ಲದೇ, ಲಾರಿ ನಿಯಂತ್ರಣ ಕಳೆದುಕೊಂಡು ರಸ್ತೆ ಪಕ್ಕದ ಜಾಗದಲ್ಲಿ ಪಲ್ಟಿಯಾಗಿದೆ.

ಮಾಹಿತಿ ತಿಳಿದು ಘಟನಾ ಸ್ಥಳಕ್ಕೆ ಎಮ್ಮಿಗನೂರು ಡಿವೈಎಸ್‌ಪಿ ಭಾರ್ಗವಿ, ಇತರ ಅಧಿಕಾರಿಗಳು ಭೇಟಿ ನೀಡಿ ಪರಿಶೀಲಿಸಿದರು. ಮಂತ್ರಾಲಯ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ತನಿಖೆ ಮುಂದುವರೆದಿದೆ.

ಘಟನೆ ಬಗ್ಗೆ ಸುದ್ದಿಗಾರರೊಂದಿಗೆ ಮಾತನಾಡಿದ ಡಿವೈಎಸ್‌ಪಿ ಭಾರ್ಗವಿ, ಎಮ್ಮಿಗನೂರು ಸಬ್ ಡಿವಿಷನ್ ವ್ಯಾಪ್ತಿಯ ಧರ್ಮಪುರಂ ಟೋಲ್ ಪ್ಲಾಜಾ ದಾಟಿದ ನಂತರ, ಅಂದಾಜು 10-12 ಕಿಲೋಮೀಟರ್ ದೂರದ ಚಿಲಕಲಡೋನ ಗ್ರಾಮದ ಬಳಿ ರಾಷ್ಟ್ರೀಯ ಹೆದ್ದಾರಿ 167ರಲ್ಲಿ ಭೀಕರ ರಸ್ತೆ ಅಪಘಾತ ಸಂಭವಿಸಿದೆ. ಬೀದರ್‌ನಿಂದ ತುಮಕೂರಿಗೆ ತೆರಳುತ್ತಿದ್ದ ಫ್ಲೈಆಶ್ (ಊಷ್ಟಿ -ಚಠಜ) ಲಾರಿ ಹಾಗೂ ಎದುರು ದಿಕ್ಕಿನಿಂದ ಮಂತ್ರಾಲಯದ ಕಡೆಗೆ ಬರುತ್ತಿದ್ದ ಅಶೋಕ್ ಲೇಲ್ಯಾಂಡ್ ದೋಸ್ತ್ ವಾಹನನ ನಡುವೆ ಡಿಕ್ಕಿಯಾಗಿದೆ. ಈ ಅಪಘಾತದಲ್ಲಿ ಒಟ್ಟು 8 ಜನರು ಸಾವನ್ನಪ್ಪಿದ್ದಾರೆ. ಇನ್ನುಳಿದ ಏಳು ಜನರನ್ನು ಹೆಚ್ಚಿನ ಚಿಕಿತ್ಸೆಗಾಗಿ ಕರ್ನೂಲ್ ಆಸ್ಪತ್ರೆಗೆ ದಾಖಲಿಸಲಾಗಿದೆ. ಜೊತೆಗೆ, ಇತರ ನಾಲ್ವರು ಎಮ್ಮಿಗನೂರು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ ಹಾಗೂ ಒಬ್ಬರು ಸುರಕ್ಷಿತವಾಗಿದ್ದಾರೆ. ಘಟನೆಗೆ ಸಂಬಂಧಿಸಿದ ಹೆಚ್ಚಿನ ವಿವರಗಳು ತನಿಖೆಯ ಬಳಿಕ ತಿಳಿಯಲಿದೆ'' ಎಂದು ಮಾಹಿತಿ ನೀಡಿದರು.

## ಗ್ರಾಮ ಪಂಚಾಯ್ತಿ ನೌಕರರ ಬೇಡಿಕೆಗಳಿಗೆ ಸ್ಪಂದಿಸದ ಸರ್ಕಾರ: ಪಂಚಾಯ್ತಿ ನೌಕರರಿಂದ ಪ್ರತಿಭಟನೆ

■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,ಏ.16-**ಗ್ರಾಮ ಪಂಚಾಯತ ನೌಕರರ ವೇತನ ಹೆಚ್ಚಳ, ಇಡಿಗಂಟು ಸೇರಿ ವಿವಿಧ ಬೇಡಿಕೆಗಳಿಗಾಗಿ ಒತ್ತಾಯಿಸಿ ನಗರದ ಟಿಪ್ಪು ಸುಲ್ತಾನ್ ಉದ್ಯಾನವನದಲ್ಲಿ ಪ್ರತಿಭಟನೆ ನಡೆಸಲಾಯಿತು.

2025ರ ಡಿ.21ರಂದು ಧರಣಿ ಸತ್ಯಾಗ್ರಹದ ಸ್ಥಳಕ್ಕೆ ಅಧಿಕಾರಿಗಳು ಬಂದು ಪಂಚಾಯತ ನೌಕರರ ಬೇಡಿಕೆಗಳ ಕುರಿತು ಮಾತನಾಡಿ, ಡಿ.22ರಂದು ಸಂಘಟನೆಯ ಮುಖಂಡರನ್ನು ಸಭೆ ಕರೆದು ಮೂರು ಗಂಟೆಗಳ ಕಾಲ ಸುದೀರ್ಘವಾಗಿ ಒಂದೊಂದೆ ಬೇಡಿಕೆಗಳ ಕುರಿತು ಚರ್ಚೆ ನಡೆಸಿದ್ದೀರಿ. ಇದರಲ್ಲಿ ಸರ್ಕಾರದ ಹಂತದಲ್ಲಿರುವ (ಪಾಲಿಸಿ ಮ್ಯಾಟರ್) ಬೇಡಿಕೆಗಳನ್ನು



ಸಚಿವರ ಜೊತೆ ಸಭೆಯನ್ನು ನಡೆಸಿ ಅವರಿಗೆ ಮನವರಿಕೆ ಮಾಡಿಕೊಡಲಾಗುವುದು, ಉಳಿದ ನಮ್ಮ ಹಂತದಲ್ಲಿರುವ ಪ್ರಮುಖ ಬೇಡಿಕೆಗಳನ್ನು ಕೂಡಲೆ ಇತ್ಯರ್ಥಪಡಿಸಿ ಆದೇಶವನ್ನು ನೀಡಲಾಗುವುದೆಂದು ಚರ್ಚೆ ಮಾಡಿ ನಂತರ ಧರಣಿ ನಿರತ ಸ್ಥಳಕ್ಕೆ ಬಂದು ಭರವಸೆಯನ್ನು ಕೊಟ್ಟಿದ್ದರಿಂದ ಆ ಭರವಸೆ ಮೇರೆಗೆ ನಮ್ಮ ಧರಣಿ ವಾಪಸ್ ಪಡೆದುಕೊಂಡಿದ್ದು ಆದರೆ ಈವರೆಗೆ ಪ್ರಮುಖ ಬೇಡಿಕೆಗಳು ಈಡೇರಿಲ್ಲ ಎಂದರು.

ಭರವಸೆ ಕೊಟ್ಟು 3 ತಿಂಗಳು ಗತಿಸಿದರೂ ಈ 3 ತಿಂಗಳಲ್ಲಿ 2-3 ಬಾರಿ ಮಾತುಕತೆ ನಡೆಸಿದ್ದರೂ 19 ಬೇಡಿಕೆಗಳಲ್ಲಿ ಸರ್ಕಾರದ ಹಂತದಲ್ಲಿರುವ ಬೇಡಿಕೆಗಳನ್ನು ಹೊರತುಪಡಿಸಿ ಪ್ರಮುಖವಾಗಿರುವ 7 ಬೇಡಿಕೆಗಳನ್ನು ಈಡೇರಿಸಿ ಆದೇಶ ➘4

## ಬಿಎಸ್‌ಎಸ್‌ಎಲ್ ನಿವೃತ್ತ ನೌಕರರಿಂದ ವಿವಿಧ ಬೇಡಿಕೆಗಳಿಗೆ ಆಗ್ರಹಿಸಿ ಕಚೇರಿ ಮುಂದೆ ಪ್ರತಿಭಟನೆ




■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,ಏ.16-**ಬಿಎಸ್‌ಎನ್‌ಎಲ್, ಎಂಟಿಎನ್‌ಎಲ್ ಸಂಸ್ಥೆಗಳಿಂದ ನಿವೃತ್ತರಾದ ಪಿಂಚಣಿದಾರರಿಗೆ ತುಟ್ಟಿ ಪರಿಹಾರ ನೀಡುವಲ್ಲಿ ವಿಳಂಬವಾಗಿರುವುದನ್ನು ಖಂಡಿಸಿ ಅಖಿಲ ಭಾರತ ಬಿಎಸ್‌ಎನ್‌ಎಲ್ ಪಿಂಚಣಿದಾರರ ಕ್ಷೇಮಾಭಿವೃದ್ಧಿ ಸಂಘದಿಂದ ಇಂದು ಪ್ರತಿಭಟನೆ ನಡೆಸಲಾಯಿತು.

ನಗರದಲ್ಲಿ ಪ್ರತಿಭಟನೆ ನಡೆಸಿದ ಪಿಂಚಣಿದಾರರು, ಫೆ.27ರಂದು ಹೊರಡಿಸಲಾದ ಡಿಪಿಇ ಆದೇಶವನ್ನು ತಕ್ಷಣ ಜಾರಿಗೆ ತರಬೇಕೆಂದು. ಗ್ರಾಹಕ ಬೆಲೆ ಸೂಚ್ಯಂಕ ಆಧರಿಸಿ ಪ್ರತಿ ತ್ರೈಮಾಸಿಕದಲ್ಲಿ ಕೈಗಾರಿಕಾ ತುಟ್ಟಿ ಭತ್ಯೆ ಪರಿಷ್ಕರಣೆ ಮಾಡುವ ಸ್ಥಾಪಿತ ಪದ್ಧತಿ ಇದ್ದರೂ, ಈ ಬಾರಿ ಅನಗತ್ಯ ವಿಳಂಬವಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

1997, 2007 ಹಾಗೂ 2017 ವೇತನ ಮಾಪಕಗಳ ಅಡಿಯಲ್ಲಿ ಸಿಪಿಎಸ್‌ಇ ಉದ್ಯೋಗಿಗಳಿಗೆ ಜ.1ರಿಂದ ➘4

## ಹೆಚ್ಚುತ್ತಿರುವ ಬಿಸಿಲು: ಸಿಂಗ್ನಲ್‌ಗಳಲ್ಲಿ ನೆರಳಿನ ವ್ಯವಸ್ಥೆಗೆ ಎಐಡಿವೈಓ ಒತ್ತಾಯ




■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,ಏ.16-**ನಗರದಲ್ಲಿ ದಿನೇ ದಿನೇ ಬಿಸಿಲಿನ ತೀವ್ರತೆ ಹೆಚ್ಚಾಗುತ್ತಿದ್ದು, 43 ಡಿಗ್ರಿ ಸೆಲ್ಸಿಯಸ್ ತಾಪಮಾನ ದಾಖಲಾಗಿರುವ ವರದಿ ನಾಗರಿಕರಲ್ಲಿ ಆತಂಕ ಮೂಡಿಸಿದೆ. ಬೆಳಿಗ್ಗೆ 10 ಗಂಟೆಯಿಂದಲೇ ಹೊರಗೆ ಬರಲು ಜನರು ಹಿಂಜರಿಯುತ್ತಿರುವ ಸ್ಥಿತಿ ನಿರ್ಮಾಣವಾಗಿದೆ ಆದ್ದರಿಂದ ನಗರದ ಟ್ರಾಫಿಕ್ ಸಿಗ್ನಲ್‌ಗಳಲ್ಲಿ ನೆರಳಿನ ವ್ಯವಸ್ಥೆ ಮಾಡುವಂತೆ ಆಲ್ ಇಂಡಿಯಾ ಡೆಮೋಕ್ರೆಟಿಕ್ ಯೂತ್ ಆರ್ಗನೈಸೇಷನ್ ವತಿಯಿಂದ ನಗರದ ಮಹಾನಗರ ಪಾಲಿಕೆಯ ಸ್ಥಾನಿಕ ಅಧಿಕಾರಿಗೆ ಮನವಿ ಸಲ್ಲಿಸಲಾಯಿತು..

ನಗರದ ಮಹಾನಗರ ಪಾಲಿಕೆಯ ಆಯುಕ್ತರ ಕಚೇರಿ ಎದುರು ಮನವಿ ಸಲ್ಲಿಸಿದ ಅವರು, ಬಿಸಿಲಿನ ಜಳ ಮತ್ತು ಬಿಸಿಗಾಳಿ ಯಿಂದ ಜನರು ಹೈರಾಣಾಗಿ ➘4

## ಕೇಂದ್ರ ಸರ್ಕಾರದಿಂದ ನಾರಿಶಕ್ತಿವಂದನಾ ಕಾಯ್ದೆ ಮಹಿಳಾ ಸಬಲೀಕರಣಕ್ಕೆ ನರೇಂದ್ರ ಮೋದಿಯವರ ದಿಟ್ಟ ಹೆಜ್ಜೆ-ಸುಗುಣಾ




■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,ಏ.16-**ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ ನಾರಿಶಕ್ತಿ ವಂದನ ಕಾಯ್ದೆ ಜಾರಿಗೊಳಿಸಲು ಮುಂದಾಗಿರುವದು ಮಹತ್ವದ ಹೆಜ್ಜೆಯಾಗಿದ್ದು ದೇಶದ ನಾರಿಯರಿಗೆ ನೀಡಿದ ಕೊಡುಗೆಯಾಗಿದೆ ಎಂದು ರಾಜ್ಯಮಹಿಳಾ ಮೋರ್ಚಾ ಕಾರ್ಯದರ್ಶಿ ಸುಗುಣಾ ಹೇಳಿದರು.

ಅವರಿಂದು ಮಾಧ್ಯಮಗೋಷ್ಟಿ ಉದ್ದೇಶಿಸಿ ಮಾತನಾಡಿ,ಕಳೆದ ಹತ್ತಾರು ವರ್ಷಗಳಿಂದ ಮಹಿಳೆಯರಿಗೆ ಶೇ.33 ರಷ್ಟು ಮೀಸಲಾತಿ ನೀಡಬೇಕೆನ್ನುವ ಪ್ರಯತ್ನ ಸಾಕಾರವಾಗದೇ ಹೋಗಿತ್ತು. ಪ್ರಧಾನಿ ನರೇಂದ್ರ ಮೋದಿಯವರು ಮಹಿಳೆಯರಿಗೆ ರಾಜಕೀಯ ಪ್ರಾತಿನಿಧ್ಯ ನೀಡುವ ಮೂಲಕ ಸಮಾನ ಅವಕಾಶ ಗಳನು ನೀಡಲು ನಾರಿಶಕ್ತಿ ವಂದನ ಕಾಯ್ದೆ ರೂಪಿಸಿ ವಿಶೇಷ ಅಧಿವೇಶನದಲ್ಲಿ ಅನುಮೋದನೆ ಪಡೆಯಲು ಮುಂದಾಗಿದ್ದಾರೆ. ಎಲ್ಲಾ ರಾಜಕೀಯ ಪಕ್ಷಗಳು ಬೆಂಬಲಿಸಿ ಮಹಿಳೆಯರಿಗೆ ರಾಜಕೀಯ ಸ್ಥಾನ ಒದಗಸ ಲು ಬೆಂಬಲಿಸಬೇಕೆಂದರು. ಕೇಂದ್ರ ಸರ್ಕಾರ ಅಧಿಕಾರಕ್ಕೆ ಬಂದಾಗಿನಿಂದ ಮಹಿಳೆಯರ ರಕ್ಷಣೆ, ಅವಕಾಶ ನೀಡಲು ಅನೇಕ ಯೋಜನೆಗಳನ್ನು ಜಾರಿಗೊಳಿಸಲಾಗಿದೆ. ➘4


### ವಿಜೆ ಪಾಲಿಕ್ಲಿನಿಕ್‌ನಲ್ಲಿ ಅಪರೂಪದ ಚಿಕಿತ್ಸೆ

## ಹೃದಯಾಪಘಾತವಾದ ರೋಗಿಗೆ ಮರು ಜೀವ : ಯಶೋಧ ಆಸ್ಪತ್ರೆ ಸಹಯೋಗದಲ್ಲಿ ಯಶಸ್ವಿ ಚಿಕಿತ್ಸೆ-ಡಾ.ಅಜಿತ್‌ಕುಲ್ಕರ್ಣಿ

■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,ಏ.16-**ಹೃದಯಾಪಘಾತವಾದ ವ್ಯಕ್ತಿಗೆ ಹೈದ್ರಾಬಾದ ಯಶೋಧಾ ಆಸ್ಪತ್ರೆಯ ಸಹಯೋಗದಲ್ಲಿ ಕಲ್ಯಾಣ ಕರ್ನಾಟಕ ಭಾಗದಲ್ಲಿ ಮೊದಲಬಾರಿಗೆ ಯಕ್ಮೋ ಚಿಕಿತ್ಸೆಯ ಮೂಲಕ ಜೀವ ರಕ್ಷಿಸುವ ಪ್ರಯತ್ನ ಮಾಡಿ ಯಶಸ್ವಿಯಾಗಿರುವದಾಗಿ ವಿಜಯ ಪಾಲಿಕ್ಲಿನಿಕ್ ಹೃದಯ ತಜ್ಞ ಡಾ. ಅಜಿತ್ ಕುಲ್ಕರ್ಣಿ ಹೇಳಿದರು.

ಅವರಿಂದು ಮಾಧ್ಯಮಗೋಷ್ಟಿ ಉದ್ದೇಶಿಸಿ ಮಾತನಾಡಿ, ನಗರದ ಸುರೇಂದ್ರ, ವೈ ಎಂಬುವವರು ಆಸ್ಪತ್ರೆಗೆ ದಾಖಲಾಗಿ ಪರೀಕ್ಷೆಗಳನ್ನು ನಡೆಸಿದಾಗ ಗಂಬೀರ ಸಮಸ್ಯೆಗಳಿರುವದು ಪತ್ತೆಯಾಗಿತ್ತು. ಹೆಚ್ಚಿನ ಚಿಕಿತ್ಸೆಗೆ ಹೈದ್ರಾಬಾದ ರವಾನಿಸುವ ಬದಲು ಯಶೋಧಾ ಆಸ್ಪತ್ರೆಗೆ ಸಂಪರ್ಕಿಸಿ ಯಕ್ಮೋ ಚಿಕಿತ್ಸೆ ಸಂಪರ್ಕಿಸಿದಾಗ ಯಶೋಧಾ ಆಸ್ಪತ್ರೆಯ




ತುರ್ತು ಚಿಕಿತ್ಸಾ ತಂಡ ಆಗಮಿಸಿ ಯಕ್ಮೋ ಚಿಕಿತ್ಸೆ ಪ್ರಾರಂಭಿಸಲಾಯಿತು. ಚಿಕಿತ್ಸೆಗೆ ಸ್ಪಂದಿಸಿದ್ದರಿಂದ ಹೆಚ್ಚಿನ ಚಿಕಿತ್ಸೆಗೆ ಹೈದ್ರಾಬಾದ ಯಶೋಧಾ ಆಸ್ಪತ್ರೆಗೆ ದಾಖಲಿಸಿ ಚಿಕಿತೆ ಒದಗಸಿದ್ದರಿಂದ ಗುಣಮುಖವಾಗಲು ಸಾಧ್ಯವಾಗಿದೆ. ದೊಡ್ಡ ನಗರಗಳಿಗೆ ಮಾತ್ರ ಸೀಮಿತವಾದ ಯಕ್ಮೋ ಚಿಕಿತ್ಸೆ ಜಿಲ್ಲಾ ಮಟ್ಟದಲ್ಲಿಯೂ ದೊರೆಯುವಂತಾಗಿರುವದು ಬಹುವಿಧ ಆರೋಗ್ಯ ಸಮಸ್ಯೆ ಎದುರಿಸುವ ರೋಗಿಗಳಿಗೆ ದೊರೆತರೆ ಪ್ರಾಣ ರಕ್ಷಿಸಲು ಸಾಧ್ಯವಾಗಲಿದೆ. ಯಶೋಧಾ ಆಸ್ಪತ್ರೆನುರಿತ ತಂಡ ಆಗಮಿಸಿ ➘4

## ಈ ಬಾರಿ ಮುಂಗಾರು ಕೊರತೆ ಭೀತಿ, ವಾಡಿಕೆಗಿಂತ ಹೆಚ್ಚು ಬಿಸಿಗಾಳಿ

# ಮುಂಜಾಗ್ರತಾ ಕ್ರಮಗಳಿಗೆ ಸಿಎಂ ಸೂಚನೆ



**ಬೆಂಗಳೂರು,ಏ.16**-ರಾಜ್ಯದ ಐದು ಜಿಲ್ಲೆಗಳನ್ನು ಹೊರತುಪಡಿಸಿ ಬೇರೆ ಎಲ್ಲಾ ಜಿಲ್ಲೆಗಳಲ್ಲಿ ಈ ಬಾರಿ ಮುಂಗಾರು ಕೊರತೆ ನಿರೀಕ್ಷಿಸಲಾಗಿದ್ದು, ಕುಡಿಯುವ ನೀರಿಗೆ ತೊಂದರೆಯಾಗದಂತೆ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಲು ಜಿಲ್ಲಾಧಿಕಾರಿಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸೂಚನೆ ನೀಡಿದ್ದಾರೆ.

ಸಿಎಂ ಅಧ್ಯಕ್ಷತೆಯಲ್ಲಿ ಇಂದು ವಿಧಾನಸೌಧ ಸಭಾಂಗಣದಲ್ಲಿ ಗ್ರಾಮೀಣ ಹಾಗೂ ಪಟ್ಟಣ ಪ್ರದೇಶಗಳಲ್ಲಿನ ಕುಡಿಯುವ ನೀರು ಪೂರೈಕೆ ಕುರಿತಾಗಿ ಜಿಲ್ಲಾ ಉಸ್ತುವಾರಿ ಸಚಿವರು, ಜಿಲ್ಲಾಧಿಕಾರಿಗಳು, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳ ಸಭೆ ನಡೆಯಿತು.

ಈ ವರ್ಷ ಮುಂಗಾರಿನಲ್ಲಿ ವಾಡಿಕೆಗಿಂತ ಕಡಿಮೆ ಮಳೆಯಾಗುವ ಸಾಧ್ಯತೆಯಿದೆ ಎಂದು ಕೇಂದ್ರ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಆಗಸ್ಟ್ ತಿಂಗಳಲ್ಲಿ ವಾಡಿಕೆ ಮಳೆಯಾಗುವ ಸಾಧ್ಯತೆ ಇದ್ದು, ಸೆಪ್ಟೆಂಬರ್ ತಿಂಗಳಲ್ಲಿ ಮಳೆ ಕಡಿಮೆ ನಿರೀಕ್ಷಿಸಲಾಗಿದೆ ಎಂದು ಅಧಿಕಾರಿಗಳು ವಿವರಿಸಿದರು.

ಕುಡಿಯುವ ನೀರಿಗೆ ತೊಂದರೆಯಾದರೆ ಡಿಸಿಗಳೇ ಹೊಣೆ: ಕುಡಿಯುವ ನೀರಿಗೆ ತೊಂದರೆಯಾದರೆ ಆಯಾ ಜಿಲ್ಲಾಧಿಕಾರಿಗಳೇ ಇದಕ್ಕೆ ಹೊಣೆಯಾಗುತ್ತಾರೆ. ಕಂದಾಯ ಇಲಾಖೆ, ಪಂಚಾಯತ್ ರಾಜ್ ಇಲಾಖೆ ಹಾಗೂ ನಗರಾಭಿವೃದ್ಧಿ ಇಲಾಖೆಗಳು ಪರಸ್ಪರ ಸಮನ್ವಯದೊಂದಿಗೆ ಕಾರ್ಯ ನಿರ್ವಹಿಸಬೇಕು ಎಂದು ಮುಖ್ಯಮಂತ್ರಿ ನಿರ್ದೇಶನ ನೀಡಿದರು.

ಏಪ್ರಿಲ್-ಜೂನ್ ಅವಧಿಯಲ್ಲಿ ಉತ್ತರ ಒಳನಾಡಿನ ಬಹುತೇಕ ಜಿಲ್ಲೆಗಳಲ್ಲಿ ವಾಡಿಕೆಗಿಂತ ಹೆಚ್ಚು ಬಿಸಿಗಾಳಿ ದಿನಗಳು ಕಂಡುಬರುವ ಸಾಧ್ಯತೆಯಿದೆ. ಇಂತಹ ಸಂದರ್ಭದಲ್ಲಿ ಯಾವ ರೀತಿಯ ಮುಂಜಾಗರೂಕತಾ ಕ್ರಮಗಳನ್ನು ಕೈಗೊಳ್ಳಬೇಕು. ಹವಾಮಾನ ಇಲಾಖೆಯ ಮುನ್ಸೂಚನೆಗಳನ್ನು ಗಂಭೀರವಾಗಿ ಪರಿಗಣಿಸಬೇಕು ಎಂಬ ಬಗ್ಗೆ ಎಲ್ಲಾ ಜಿಲ್ಲಾಧಿಕಾರಿಗಳು ಸೂಚನೆಗಳನ್ನು ನೀಡಬೇಕು ಎಂದರು.

ಕುಡಿಯುವ ನೀರಿಗೆ ಅನುದಾನದ ಕೊರತೆಯಿಲ್ಲ: ಸಾರ್ವಜನಿಕರಿಗೆ ನೆರಳಿನ ವ್ಯವಸ್ಥೆ, ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಬೇಕು. ಕುಡಿಯುವ ನೀರು ಪೂರೈಕೆಯನ್ನು ಖಾತ್ರಿಪಡಿಸಲು ಯಾವುದೇ ಅನುದಾನದ ಕೊರತೆಯಿಲ್ಲ. ಜಿಲ್ಲಾಧಿಕಾರಿಗಳ ವರದಿ ಆಧಾರದಲ್ಲಿ ಅಗತ್ಯ ಅನುದಾನವನ್ನು ಒದಗಿಸಲು ಹಣಕಾಸು ಇಲಾಖೆಗೆ ಈಗಾಗಲೇ ಸೂಚನೆ ನೀಡಲಾಗಿದೆ ಎಂದು ತಿಳಿಸಿದರು.

114 ತಾಲೂಕುಗಳ 598 ಗ್ರಾಮ ಪಂಚಾಯತ್‌ಗಳಲ್ಲಿ ಕುಡಿಯುವ ನೀರಿನ ಸಮಸ್ಯೆ: ರಾಜ್ಯದಲ್ಲಿ ಬೇಸಿಗೆಯಲ್ಲಿ ಕುಡಿಯುವ ನೀರಿನ ಸಮಸ್ಯೆಯನ್ನು ಎದುರಿಸಬಹುದಾದ 213 ತಾಲೂಕುಗಳನ್ನು ಹಾಗೂ 2410 ಗ್ರಾಮ ಪಂಚಾಯತ್‌ಗಳನ್ನು ಗುರುತಿಸಲಾಗಿದೆ. ಪ್ರಸ್ತುತ 114 ತಾಲೂಕುಗಳ 598 ಗ್ರಾಮ ಪಂಚಾಯತ್‌ಗಳಲ್ಲಿ ಕುಡಿಯುವ ನೀರಿನ ಸಮಸ್ಯೆಯಿದೆ. 137 ಗ್ರಾಮಗಳಿಗೆ ಒಟ್ಟು 129 ಟ್ಯಾಂಕರ್‌ಗಳ ಮೂಲಕ ಕುಡಿಯುವ ನೀರು ಸರಬರಾಜು ಮಾಡಲಾಗುತ್ತಿದೆ. 585 ಖಾಸಗಿ ಬೋರ್‌ವೆಲ್ಗಳನ್ನು ಬಾಡಿಗೆಗೆ ಪಡೆಯಲಾಗಿದ್ದು, ಇದರ ಮೂಲಕ 515 ಗ್ರಾಮಗಳಿಗೆ ನೀರು ಪೂರೈಕೆ ಮಾಡಲಾಗುತ್ತಿರುವ ಬಗ್ಗೆ ಮುಖ್ಯಮಂತ್ರಿಗಳು ಮಾಹಿತಿ ಪಡೆದರು.

ಕುಡಿಯುವ ನೀರಿನ ಸಮಸ್ಯೆ ಎದುರಿಸುವ ಗ್ರಾಮಗಳ ಗುರುತಿಸುವಿಕೆ: ಕಲಬುರಗಿ ಜಿಲ್ಲೆಯ 147 ಗ್ರಾಮ ಪಂಚಾಯತ್, ಬಾಗಲಕೋಟೆ 114, ಬೆಳಗಾವಿಯ 127, ಚಿಕ್ಕಮಗಳೂರಿನ 115, ಹಾವೇರಿಯ 138, ಮಂಡ್ಯ 130, ತುಮಕೂರಿನ 141 ಹಾಗೂ ಉತ್ತರಕನ್ನಡ ಜಿಲ್ಲೆಯ 125 ಗ್ರಾಮ ಪಂಚಾಯತ್‌ಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಎದುರಾಗಬಹುದೆಂದು ಗುರುತಿಸಲಾಗಿದೆ ಎಂದು ಸಭೆಯಲ್ಲಿ ತಿಳಿಸಲಾಯಿತು. 22 ಕೊಳವೆ ಬಾವಿಗಳು ಬಾಡಿಗೆಗೆ: ಪ್ರಸ್ತುತ 27 ನಗರ ಸ್ಥಳೀಯ ಸಂಸ್ಥೆಗಳಲ್ಲಿ ಕುಡಿಯುವ ನೀರಿನ ಸಮಸ್ಯೆಯಿದ್ದು, 95 ನಗರ ಸ್ಥಳೀಯ ಸಂಸ್ಥೆಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಎದುರಾಗಬಹುದು ಎಂದು ಗುರುತಿಸಲಾಗಿದೆ. ಒಟ್ಟು 145 ವಾರ್ಡ್‌ಗಳಿಗೆ 57 ಟ್ಯಾಂಕರ್‌ಗಳ ಮೂಲಕ ಕುಡಿಯುವ ನೀರು ಪೂರೈಕೆ ಮಾಡಲಾಗುತ್ತಿದ್ದು, ಬಾಡಿಗೆಗೆ 22 ಕೊಳವೆ ಬಾವಿಗಳನ್ನು ಪಡೆಯಲಾಗಿದೆ ಎಂದು ಸಭೆಯಲ್ಲಿ ತಿಳಿಸಲಾಯಿತು.

ಅಗತ್ಯ ಸಂದರ್ಭದಲ್ಲಿ ಕೊಳವೆ ಬಾವಿ ಕೊರೆಯಬಹುದು: ಅನಿವಾರ್ಯ ಸಂದರ್ಭಗಳಲ್ಲಿ ಮಾತ್ರ ಟ್ಯಾಂಕರ್ ನೀರು ಪೂರೈಕೆ ಮಾಡಬೇಕು. ಖಾಸಗಿ ಬೋರ್‌ವೆಲ್‌ಗಳನ್ನು ಬಾಡಿಗೆ ಪಡೆಯುವುದಕ್ಕೆ ಆದ್ಯತೆ ನೀಡಬೇಕು. ಅಗತ್ಯ ಸಂದರ್ಭದಲ್ಲಿ ಕೊಳವೆ ಬಾವಿ ಕೊರೆಯಬಹುದಾಗಿದೆ ಎಂದು ಮುಖ್ಯಮಂತ್ರಿಗಳು ತಿಳಿಸಿದರು.

ರಾಜ್ಯದ ಪ್ರಮುಖ 14 ಜಲಾಶಯಗಳಲ್ಲಿ ಪ್ರಸ್ತುತ 321.93 ಟಿಎಂಸಿ ನೀರು ಲಭ್ಯವಿದ್ದು, ಇದು ಒಟ್ಟು ಸಾಮರ್ಥ್ಯದ ಶೇ.36ರಷ್ಟಿದೆ. ಕಳೆದ ವರ್ಷ ಇದೇ ಅವಧಿಯಲ್ಲಿ 330.35 ಟಿಎಂಸಿ ನೀರು ಲಭ್ಯವಿತ್ತು. ಪ್ರಸುತ ಕುಡಿಯುವ ನೀರಿಗೆ ಸಾಕಷ್ಟು ನೀರು ಜಲಾಶಯಗಳಲ್ಲಿ ಲಭ್ಯವಿದೆ.

ಜಲಾಶಯಗಳಲ್ಲಿ ನೀರಿನ ಲಭ್ಯತೆಯನ್ನು ಖಾತ್ರಿಪಡಿಸಿ: ಮಳೆಗಾಲ ವಿಳಂಬವಾಗಿ ಆರಂಭವಾಗುವ ಸಾಧ್ಯತೆಯಿರುವುದರಿಂದ ಜುಲೈ ಮಧ್ಯದವರೆಗೂ ಕುಡಿಯುವ ನೀರಿಗಾಗಿ ಜಲಾಶಯಗಳಲ್ಲಿ ನೀರಿನ ಲಭ್ಯತೆ ಖಾತ್ರಿಪಡಿಸಬೇಕು. ನೀರಾವರಿಗಿಂತ ಕುಡಿಯುವ ನೀರಿನ ಪೂರೈಕೆಗೆ ಹೆಚ್ಚಿನ ಆದ್ಯತೆ ನೀಡಬೇಕು. ಜಲಾಶಯಗಳಲ್ಲಿ ನೀರಿನ ಸೋರಿಕೆಯನ್ನು ಗುರುತಿಸಿ ದುರಸ್ತಿಗೆ ಕ್ರಮ ಕೈಗೊಳ್ಳಬೇಕು ಎಂದು ಮುಖ್ಯಮಂತ್ರಿ ಸೂಚನೆ ನೀಡಿದರು.

ಸಾರ್ವಜನಿಕರ ಅಹವಾಲುಗಳಿಗೆ ತುರ್ತಾಗಿ ಸ್ಪಂದಿಸಿ: ಕುಡಿಯುವ ನೀರಿನ ಕುರಿತಾಗಿ ಸಾರ್ವಜನಿಕರ ಅಹವಾಲುಗಳಿಗೆ ತುರ್ತಾಗಿ ಸ್ಪಂದಿಸಬೇಕು. ಇದಕ್ಕಾಗಿ ತಾಲೂಕು ಹಾಗೂ ವಾರ್ಡ್ ಮಟ್ಟದಲ್ಲಿ ನಿಯಂತ್ರಣ ಕೊಠಡಿಗಳನ್ನು ಸ್ಥಾಪಿಸಬೇಕು. ಜಿಲ್ಲಾ ಮಟ್ಟದ ಕಾರ್ಯಪಡೆ ಸಕ್ರಿಯವಾಗಿ ಕಾರ್ಯ ನಿರ್ವಹಿಸಬೇಕು ಎಂದು ಮುಖ್ಯಮಂತ್ರಿಗಳು ತಿಳಿಸಿದರು. ಎಲ್ಲಾ ಆರ್ ಒ ಘಟಕಗಳು 24/7 ನಿರಂತರ ವಿದ್ಯುತ್ ಸರಬರಾಜಿನೊಂದಿಗೆ ಕಾರ್ಯ ನಿರ್ವಹಿಸುವುದನ್ನು ಖಾತ್ರಿಪಡಿ ಸಬೇಕು. ಆರ್ ಒ ಘಟಕಗಳ ತಕ್ಷಣದ ದುರಸ್ತಿ ಮತ್ತು ಕುಡಿಯುವ ನೀರಿನ ಪೂರೈಕೆಯಲ್ಲಿನ ಸಮಸ್ಯೆಗಳನ್ನು ಬಗೆಹರಿಸಲು ತಾಲೂಕು ಮಟ್ಟದಲ್ಲಿ ತಂಡಗಳನ್ನು ನಿಯೋಜಿಸಬೇಕು ಎಂದು ಸೂಚನೆ ನೀಡಿದರು.

ರಸಗೊಬ್ಬರ ಲಭ್ಯತೆ ಖಾತ್ರಿಪಡಿಸಿ: ಮಧ್ಯಪ್ರಾಚ್ಯದಲ್ಲಿನ ಯುದ್ಧದ ಪರಿಸ್ಥಿತಿಯಿಂದಾಗಿ ಈ ಬಾರಿ ರಸಗೊಬ್ಬರ ಪೂರೈಕೆಯಲ್ಲಿ ಅಡಚಣೆ ಉಂಟಾಗುವ ಸಾಧ್ಯತೆಯಿದೆ. ವ್ಯಾಪಾರಿಗಳು ರಸಗೊಬ್ಬರವನ್ನು ಹೆಚ್ಚಿನ ಪ್ರಮಾಣದಲ್ಲಿ ಖರೀದಿಸಿ ದಾಸ್ತಾನು ಇರಿಸುವುದನ್ನು ತಪ್ಪಿಸಲು ಕ್ರಮ ಕೈಗೊಳ್ಳಬೇಕು. ರೈತರಿಗೆ ಸೂಕ್ತ ಸಮಯದಲ್ಲಿ ರಸಗೊಬ್ಬರ ಲಭ್ಯತೆಯನ್ನು ಖಾತ್ರಿಪಡಿಸಲು ಕ್ರಮ ಕೈಗೊಳ್ಳಬೇಕು. ಯೂರಿಯಾ, ಡಿಎಪಿ ಸರಿಯಾಗಿ ವಿತರಣೆಯಾಗುವಂತೆ ನೋಡಿಕೊಳ್ಳಬೇಕು. ಬೇರೆ ರಾಜ್ಯಗಳಿಗೆ ರಸಗೊಬ್ಬರ ಸಾಗಾಟ ಮಾಡುವುದನ್ನು ನಿಯಂತ್ರಿಸಬೇಕು. ಇದಕ್ಕಾಗಿ ಚೆಕ್ ಪೋಸ್ಟ್ ಗಳಲ್ಲಿ ತಪಾಸಣೆಯನ್ನು ಬಿಗಿಗೊಳಿಸಬೇಕು ಎಂದು ಮುಖ್ಯಮಂತ್ರಿ ಸೂಚನೆ ನೀಡಿದರು.

ಮೇವಿನ ಕೊರತೆ ಸದ್ಯಕ್ಕಿಲ್ಲ: ಕಳೆದ ಎರಡು ವರ್ಷಗಳಲ್ಲಿ ಉತ್ತಮ ಮಳೆಯಾಗಿರುವುದರಿಂದ ಮೇವಿನ ಕೊರತೆ ಸದ್ಯಕ್ಕೆ ಇರುವುದಿಲ್ಲ. ಆದರೆ ಈ ಕುರಿತು ನಿರ್ಲಕ್ಷ್ಯ ವಹಿಸದೆ ಮೇವಿನ ಲಭ್ಯತೆಯನ್ನು ಖಾತ್ರಿಪಡಿಸಬೇಕು. ಎಲ್ಲಾ ತಾಲೂಕುಗಳಲ್ಲಿ ಕುಡಿಯುವ ನೀರಿನ ಕುರಿತಾದ ಟಾಸ್ಕ್ ಫೋರ್ಸ್ ಸಭೆ ನಡೆಸಿ ವರದಿ ಸಲ್ಲಿಸಬೇಕು ಎಂದು ತಿಳಿಸಿದರು.

ಕಲುಷಿತ ನೀರು ಪೂರೈಕೆಯಾಗದಂತೆ ಕ್ರಮ ವಹಿಸಿ: ಕಲುಷಿತ ನೀರು ಪೂರೈಕೆಯಾಗಿ ಆರೋಗ್ಯ ಸಮಸ್ಯೆಯಾಗದಂತೆ ಎಲ್ಲಾ ಜಿಲ್ಲೆಗಳಲ್ಲಿ ಮುಂಜಾಗರೂಕತಾ ಕ್ರಮಗಳನ್ನು ಕೈಗೊಳ್ಳಬೇಕು. ಈ ಕುರಿತು ಈಗಾಗಲೇ ಮಾರ್ಗಸೂಚಿಗಳನ್ನು ಜಾರಿಗೊಳಿಸಲಾಗಿದ್ದು, ಯಾವುದೇ ಕಾರಣಕ್ಕೂ ಕಲುಷಿತ ನೀರಿನಿಂದ ಸಮಸ್ಯೆಯಾಗದಂತೆ ನೋಡಿಕೊಳ್ಳುವುದು ಜಿಲ್ಲಾಧಿಕಾರಿಗಳ ಜವಾಬ್ದಾರಿ ಎಂದು ಸ್ಪಷ್ಟಪಡಿಸಿದರು.

ರಸಗೊಬ್ಬರ ಮಾರಾಟದ ಮೇಲೆ ನಿರಂತರ ನಿಗಾ ವಹಿಸಿ: ಅರ್ಹ ರೈತರಿಗೆ ರಸಗೊಬ್ಬರ ಕೊರತೆಯಾಗದಂತೆ ಎಚ್ಚರಿಕೆ ವಹಿಸಿ. ಹಾವೇರಿ ಸೇರಿದಂತೆ ಕೆಲವು ಜಿಲ್ಲೆಗಳಲ್ಲಿ ಈಗಾಗಲೇ ಕಳೆದ ವರ್ಷಕ್ಕಿಂತ ಹೆಚ್ಚಿನ ಪ್ರಮಾಣದ ರಸಗೊಬ್ಬರ ಮಾರಾಟವಾಗಿದ್ದು, ಇದಕ್ಕೆ ಕಾರಣವೇನು? ರಸಗೊಬ್ಬರ ಮಾರಾಟದ ಮೇಲೆ ನಿರಂತರ ನಿಗಾ ವಹಿಸಿ, ಅರ್ಹ ರೈತರಿಗೆ ರಸಗೊಬ್ಬರ ಕೊರತೆಯಾಗದಂತೆ ಎಚ್ಚರಿಕೆ ವಹಿಸಬೇಕು ಎಂದು ಸೂಚಿಸಿದರು.

ಕುಡಿಯುವ ನೀರಿನ ಯೋಜನೆಗಳಿಗೆ ವಿದ್ಯುತ್ ಸಂಪರ್ಕ ಒದಗಿಸಲು ಆದ್ಯತೆ ನೀಡಿ: ಕುಡಿಯುವ ನೀರಿನ ಯೋಜನೆಗಳಿಗೆ ವಿದ್ಯುತ್ ಸಂಪರ್ಕ ಒದಗಿಸಲು ಆದ್ಯತೆ ನೀಡಬೇಕು. ಪಂಚಾಯತ್ ರಾಜ್ ಮತ್ತು ಇಂಧನ ಇಲಾಖೆ ಸಮನ್ವಯದಿಂದ ಕಾರ್ಯ ನಿರ್ವಹಿಸಬೇಕು. ವಿದ್ಯುತ್ ಸಂಪರ್ಕ ಕಲ್ಪಿಸಲು ಠೇವಣಿಗಾಗಿ ಕಾಯಬಾರದು ಎಂದು ಸಿಎಂ ತಿಳಿಸಿದರು.

---

## ಪಾರ್ಶ್ವವಾಯುಪೀಡಿತ ತಾಯಿಯನ್ನು ಮನೆಯ 4ನೇ ಮಹಡಿಗೆ ಎತ್ತಿಕೊಂಡು ಹೋಗಿ ತಳ್ಳಿ ಕೊಲೆಗೈದ ದುಷ್ಟ ಮಗ!

**ಬೆಂಗಳೂರು,ಏ.16-** ಪಾರ್ಶ್ವವಾಯುವಿನಿಂದ (ಸ್ಟ್ರೋಕ್) ಬಳಲುತ್ತಿದ್ದ ಹೆತ್ತ ತಾಯಿಯನ್ನು ಮನೆಯ 4ನೇ ಮಹಡಿಯಿಂದ ತಳ್ಳಿ ಹತ್ಯೆಗೈದ ದುಷ್ಟ ಮಗನನ್ನು ಆರ್.ಆರ್.ನಗರ ಪೊಲೀಸರು ಬಂಧಿಸಿದ್ದಾರೆ.

ಬಿಇಎಂಎಲ್ ಬಡಾವಣೆಯ 3ನೇ ಹಂತದಲ್ಲಿರುವ ಮನೆಯೊಂದರಲ್ಲಿ ನಿನ್ನೆ(ಬುಧವಾರ) ಮಧ್ಯಾಹ್ನ ಘಟನೆ ನಡೆದಿದೆ. ದುಷ್ಕೃತ್ಯ ಸಂಬಂಧ ಆರೋಪಿಯನ್ನು ಬಂಧಿಸಿ ಹೆಚ್ಚಿನ ವಿಚಾರಣೆಗೆ ಒಳಪಡಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ವೆಂಕಟೇಶ್ ಬಿಇಎಂಎಲ್ ಬಡಾವಣೆಯಲ್ಲಿ 2ನೇ ಮಹಡಿಯಲ್ಲಿ ತಾಯಿ ಹಾಗೂ ಪತ್ನಿ-ಮಕ್ಕಳೊಂದಿಗೆ ವಾಸವಾಗಿದ್ದರು. ಆರೋಪಿ ಶೋ ರೂಮ್‌ವೊಂದರಲ್ಲಿ ಮಾರಾಟ ಪ್ರತಿನಿಧಿಯಾಗಿ ಕೆಲಸ ಮಾಡುತ್ತಿದ್ದರೆ, ಪತ್ನಿ ಗೃಹಿಣಿ. ಸಾವಿತ್ರಮ್ಮ ಕಳೆದ ನಾಲ್ಕು ವರ್ಷಗಳಿಂದ ಪಾರ್ಶ್ವವಾಯುಪೀಡಿತರಾಗಿ ಅಂಗಾಂಗಗಳ ಸ್ವಾಧೀನ ಕಳೆದುಕೊಂಡಿದ್ದರು. ಚಿಕಿತ್ಸೆ ನೀಡಿದರೂ ಗುಣಮುಖರಾಗಿರಲಿಲ್ಲ. ಆರೈಕೆ ಮಾಡುವುದೇ ಕಷ್ಟವಾಗಿತ್ತು. ಬುಧವಾರ ಮಧ್ಯಾಹ್ನ ಮನೆಗೆ ಬಂದ ಆರೋಪಿಯು ತಾಯಿ ಬಳಲುತ್ತಿರುವುದು ನೋಡಿ ಕಂಗಾಲಾಗಿದ್ದ. ಮಲಗಿದ್ದ ತಾಯಿಯನ್ನು ನಾಲ್ಕನೇ ಮಹಡಿಗೆ ಎತ್ತುಕೊಂಡು ಹೋಗಿ ಸುತ್ತಮುತ್ತ ಯಾರೂ ಇಲ್ಲದಿರುವುದನ್ನು ಕಂಡು ಮೇಲಿನಿಂದ ಕೆಳಗೆ ತಳ್ಳಿ ಹತ್ಯೆ ಮಾಡಿದ್ದಾನೆ ಎಂದು ಪೊಲೀಸರು ಹೇಳಿದ್ದಾರೆ.

ಮನೆ ಮಾಲೀಕ ವಿಕ್ರಮ್ ನೀಡಿದ ದೂರು ಆಧರಿಸಿ ಭಾರತೀಯ ನ್ಯಾಯ ಸಂಹಿತೆ (ಬಿಎನ್‌ಎಸ್) ಸೆಕ್ಷನ್ 103 (ಕೊಲೆ) ಪ್ರಕರಣ ದಾಖಲಿಸಿ ಆರೋಪಿಯನ್ನು ಬಂಧಿಸಲಾಗಿದೆ.

ಆರ್.ಆರ್.ನಗರದಲ್ಲಿ ವೃದ್ಧೆ ಸಾವನ್ನಪ್ಪಿರುವ ಮಾಹಿತಿ ಆಧರಿಸಿ ಸ್ಥಳಕ್ಕೆ ಹೋಗಿ ಪರಿಶೀಲನೆ ನಡೆಸಲಾಗಿತ್ತು. ಈ ವೇಳೆ ಮಗನಿಂದಲೇ ತಾಯಿ ಕೊಲೆಯಾಗಿರುವುದು ತಿಳಿದುಬಂದಿತ್ತು. ನಾಲ್ಕು ವರ್ಷಗಳಿಂದ ತಾಯಿ ಅನಾರೋಗ್ಯದಿಂದ ಬಳಲುತ್ತಿದ್ದರು. ಈ ಹಿನ್ನೆಲೆಯಲ್ಲಿ ಮನೆಯ ನಾಲ್ಕನೇ ಮಹಡಿಗೆ ತಾಯಿಯನ್ನು ಎತ್ತಿಕೊಂಡ ಹೋಗಿ ಮೇಲಿಂದ ತಳ್ಳಿ ಕೊಲೆ ಮಾಡಿದ್ದಾನೆ. ಸದ್ಯ ಆರೋಪಿಯನ್ನು ಬಂಧಿಸಿ ಹೆಚ್ಚಿನ ವಿಚಾರಣೆ ನಡೆಸಲಾಗುತ್ತಿದೆ ಎಂದು ಪಶ್ಚಿಮ ವಿಭಾಗದ ಡಿಸಿಪಿ ಯತೀಶ್ ಮಾಹಿತಿ ನೀಡಿದ್ದಾರೆ.

---

## ಬಳ್ಳಾರಿ ಕೆಐಎಡಿಬಿ ಬಹುಕೋಟಿ ವಂಚನೆ ಪ್ರಕರಣ: ಆರೋಪಿ ವಶಕ್ಕೆ

**ಬಳ್ಳಾರಿ,ಏ.16**-ನಗರದ ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ (ಕೆಐಎಡಿಬಿ) ಕಚೇರಿಯ ಲ್ಲಿ ನಡೆದಿದೆ ಎನ್ನಲಾದ 16 ಕೋಟಿ ರೂಪಾಯಿಗಳ ವಂಚನೆ ಪ್ರಕರಣಕ್ಕೆ ಸಂಬಂಧಿಸಿದಂತೆ, ಪ್ರಮುಖ ಆರೋಪಿಯನ್ನು ಎಪಿಎಂಸಿ ಪೊಲೀಸರು ವಶಕ್ಕೆ ಪಡೆದಿದ್ದಾರೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸುಮನ್ ಡಿ.ಪೆನ್ನೇಕರ್ ತಿಳಿಸಿದ್ದಾರೆ.

ಈ ಬಗ್ಗೆ ಪ್ರಕಟಣೆ ಹೊರಡಿಸಿರುವ ಎಸ್‌ಪಿ, ಆರೋಪಿ ಸಂತೋಷ್ ಕುಮಾರ್ (33) ಎಂಬಾತನನ್ನು ವಶಕ್ಕೆ ಪಡೆಯಲಾಗಿದೆ. ಕಳೆದ ಮೂರ್‌ನಾಲ್ಕು ವರ್ಷಗಳಿಂದಲೂ ಅಂದರೆ, 2022ರಿಂದ 2026ರ ಮಾರ್ಚ್‌ವರೆಗಿನ ಅವಧಿಯಲ್ಲಿ (ಮೂವರು ಕಾರ್ಯಪಾಲಕ ಅಭಿಯಂತರರ ಅವಧಿಯಲ್ಲಿ) ಈ ವಂಚನೆ ನಡೆದಿರುವ ಆರೋಪ ಕೇಳಿಬಂದಿದೆ. ಕೆಐಎಡಿಬಿ ಬಳ್ಳಾರಿ ವಲಯ ಕಚೇರಿಯ ಗುತ್ತಿಗೆ ನೌಕರ ಹಾಗೂ ಖಾಯಂ ನೌಕರರು ಮತ್ತು ಬ್ಯಾಂಕ್ ಸಿಬ್ಬಂದಿಯವರು ಸೇರಿಕೊಂಡು, ನಕಲಿ ಸಹಿ ಬಳಸಿ, ಮಂಡಳಿಯ ಖಾತೆಯಿಂದ 16.17 ಕೋಟಿ ರೂ. ಹಣವನ್ನು, ಮಂಡಳಿಗೆ ಸಂಬಂಧವಿಲ್ಲದವರ ಖಾತೆಗಳಿಗೆ ವರ್ಗಾವಣೆ ಮಾಡಿರುವ ಆರೋಪ ಇದಾಗಿದೆ ಎಂದು ಹೇಳಿದ್ದಾರೆ.

ಈ ಕುರಿತಂತೆ, ಬಳ್ಳಾರಿಯ ಎಪಿಎಂಸಿ ಪೊಲೀಸ್ ಠಾಣೆಯಲ್ಲಿ ಕಳೆದ ತಿಂಗಳ ಮಾರ್ಚ್ 19ರಂದು, ಅಪರಾಧ ಸಂಖ್ಯೆ 65/2026 ಕಲಂ 316(2), 316(4), 316 (5), 318 (4), 336 (2), 336 (3), 340 (2), 3(5), ಬಿಎನ್‌ಎಸ್ ಕಾಯಿದೆ ಅಡಿಯಲ್ಲಿ ಕೇಸ್ ದಾಖಲಾಗಿತ್ತು. ಪ್ರಕರಣದ ತನಿಖೆಯನ್ನು ಎಪಿಎಂಸಿ ಠಾಣೆ ಪೊಲೀಸರು ನಡೆಸುತ್ತಿದ್ದಾರೆ.

ಪ್ರಕರಣದಲ್ಲಿ ತಲೆಮರೆಸಿಕೊಂಡಿದ್ದ ಆರೋಪಿ ಸಂತೋಷ್ ಎಂಬಾತನನ್ನು ಪೊಲೀಸರು ವಶಕ್ಕೆ ಪಡೆದು, ತನಿಖೆ ಮುಂದುವರೆಸಿದ್ದಾರೆ ಎಂದು ಎಸ್‌ಪಿ ಸುಮನ್ ಡಿ.ಪೆನ್ನೇಕರ್ ಮಾಹಿತಿ ನೀಡಿದ್ದಾರೆ.

ಎಪಿಎಂಸಿ ಠಾಣೆ ಪೊಲೀಸ್ ಇನ್ಸ್‌ಪೆಕ್ಟರ್ ಮಹಮ್ಮದ್ ರಫಿ, ಎಎಸ್‌ಐಗಳಾದ ಕೃಷ್ಣ, ಆನಂದ್‌ರೆಡ್ಡಿ ಹಾಗೂ ಸಿಬ್ಬಂದಿ ವರ್ಗದವರಾದ ಅದ್ದಿಗೇರಿ ಗೋರಂಟಿ, ಬಸವ ರಾಜ, ಕುರುಬರ ಕೋನಪ್ಪ, ದೀಪೇಂದ್ರ ಪಾಟೀಲ್, ಮಹೇಶ್ವರಗೌಡ ಅವರನ್ನೊಳಗೊಂಡ ಪೊಲೀಸರ ತಂಡವು ಆರೋ ಪಿಯನ್ನು ಬಂಧಿಸಿದೆ. ಮುಂದಿನ ಕಾನೂನಾತ್ಮಕ ಕ್ರಮ ಕೈಗೊಂಡಿದ್ದಾರೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

---

## ಕ್ಷೇತ್ರಗಳ ಪುನರ್‌ವಿಂಗಡನೆಯಿಂದ ಜನಪ್ರತಿನಿಧಿಗಳಿಗೆ ಜನಸಂಪರ್ಕ ಸುಲಭ, ಅಭಿವೃದ್ಧಿಗೆ ಪೂರಕ ನಿರ್ಧಾರ

**ಚಿಕ್ಕೋಡಿ,ಏ.16**-ದೇಶಾದ್ಯಂತ ಭಾರೀ ಕುತೂಹಲ ಕೆರಳಿಸಿರುವ ಲೋಕಸಭಾ ಕ್ಷೇತ್ರಗಳ ಮರುವಿಂಗಡಣೆ ಮಸೂದೆ ಅಂಗೀಕಾರವಾಗಿರುವ ಕುರಿತು ಅಥಣಿ ಕಾಂಗ್ರೆಸ್ ಶಾಸಕ ಲಕ್ಷ್ಮಣ ಸವದಿ ಪ್ರತಿಕ್ರಿಯಿಸಿದ್ದು, ಕ್ಷೇತ್ರಗಳ ಪುನರ್‌ವಿಂಗಡನೆಯಿಂದ ಜನಪ್ರತಿನಿಧಿಗಳಿಗೆ ಜನಸಂಪರ್ಕ ಸುಲಭವಾಗಲಿದ್ದು, ಅಭಿವೃದ್ಧಿ ದೃಷ್ಟಿಯಿಂದ ಪೂರಕವಾದ ನಿರ್ಧಾರ ಎಂದು ಹೇಳಿದರು.





ಬೆಳಗಾವಿ ಜಿಲ್ಲೆಯ ಅಥಣಿ ಪಟ್ಟಣದಲ್ಲಿಂದು ಮಾಧ್ಯಮ ಜೊತೆ ಮಾತನಾಡುತ್ತಾ, ಪ್ರಸ್ತುತ ಲೋಕಸಭಾ ಕ್ಷೇತ್ರಗಳು ಭೌಗೋಳಿಕವಾಗಿ ಅತ್ಯಂತ ದೊಡ್ಡದಾಗಿವೆ. ಇದರಿಂ ದ ಮತದಾರರನ್ನು ತಲುಪುವುದು ಜನಪ್ರತಿನಿಧಿಗಳಿಗೆ ಸವಾಲಿನ ಕೆಲಸವಾಗಿದೆ. ಹೊಸ ನಿಯಮದಂತೆ ಒಂದು ವಿಧಾನಸಭಾ ಕ್ಷೇತ್ರಕ್ಕೆ ಸುಮಾರು 2 ಲಕ್ಷ ಮತದಾರರು ಹಾಗೂ ಒಂದು ಲೋಕಸಭಾ ಕ್ಷೇತ್ರಕ್ಕೆ 8 ವಿಧಾನಸಭಾ ಕ್ಷೇತ್ರಗಳಂತೆ ಒಟ್ಟು 16 ಲಕ್ಷ ಮತದಾರರಿಗೆ ಸೀಮಿತಗೊಳಿಸುವ ಚಿಂತನೆ ನಡೆದಿದೆ. ಇದು ಜಾರಿಯಾದಲ್ಲಿ ಜನಸಂಪರ್ಕಕ್ಕೆ ಹೆಚ್ಚು ಅನುಕೂಲವಾಗುತ್ತದೆ ಎಂದು ತಿಳಿಸಿದರು. ಮಸೂದೆ ಮಹಿಳಾ ಮೀಸಲಾತಿಯೊಂದಿಗೆ ತಳುಕು ಹಾಕಿಕೊಂಡಿದೆ. ಶೇ.33ರಷ್ಟು ಮಹಿಳಾ ಮೀಸಲಾತಿ ಅನ್ವಯವಾಗುವುದರಿಂದ ಸಹಜವಾಗಿಯೇ ಲೋಕಸಭಾ ಕ್ಷೇತ್ರಗಳ ಸಂಖ್ಯೆಯೂ ಹೆಚ್ಚಾಗಲಿದೆ. ಇದು ಮೇಲ್ನೋಟಕ್ಕೆ ಉತ್ತಮ ಬೆಳವಣಿಗೆ ಎಂದರು.

ಮಸೂದೆ 2028ರ ಕರ್ನಾಟಕ ವಿಧಾನಸಭಾ ಚುನಾವಣೆ ಅಥವಾ 2029ರ ಲೋಕಸಭಾ ಚುನಾವಣೆ ವೇಳೆಗೆ ಜಾರಿಗೆ ಬರುವ ಸಾಧ್ಯತೆ ಇದೆ. ಕೇಂದ್ರ ಸರ್ಕಾರ ಈ ಬಗ್ಗೆ 31 ರಾಜ್ಯಗಳ ಅಭಿಪ್ರಾಯವನ್ನು ಸಂಗ್ರಹಿಸಲಿದ್ದು, ಮುಂದಿನ ದಿನಗಳಲ್ಲಿ ಸ್ಪಷ್ಟ ಚಿತ್ರಣ ಸಿಗಲಿದೆ ಎಂದು ತಿಳಿಸಿದರು. ಮಸೂದೆಗೆ ವೇಣುಗೋಪಾಲ್ ಆಕ್ಷೇಪದ ಕುರಿತು ಕೇಳಲಾದ ಪ್ರಶ್ನೆಗೆ, ಪ್ರಜಾಪ್ರಭುತ್ವದಲ್ಲಿ ಭಿನ್ನಾಭಿಪ್ರಾಯ ಸಹಜ. ಆದರೆ ಮಸೂದೆ ಈಗಾಗಲೇ ಪಾಸ್ ಆಗಿದ್ದು, ಅನುಷ್ಠಾನದ ಹಂತದಲ್ಲಿ ರಾಜ್ಯಗಳ ಅಭಿಪ್ರಾಯಕ್ಕೆ ಮನ್ನಣೆ ಸಿಗಲಿದೆ ಎಂದರು.

ಇದೇ ವೇಳೆ, ಧಾರವಾಡ ಶಾಸಕ ವಿನಯ್ ಕುಲಕರ್ಣಿ ಪ್ರಕರಣದಲ್ಲಿ ಜನಪ್ರತಿನಿಧಿಗಳ ನ್ಯಾಯಾಲಯ ನೀಡಿರುವ ತೀರ್ಪಿನ ಬಗ್ಗೆ ಪ್ರತಿಕ್ರಿಯಿಸಿ, ಕಾನೂನು ಎಲ್ಲರಿಗೂ ಒಂದೇ. ಸಣ್ಣವರಿಗೂ ದೊಡ್ಡವರಿಗೂ ನ್ಯಾಯಾಲಯದ ಕಾನೂನುಗಳು ಅನ್ವಯವಾಗುತ್ತವೆ. ನ್ಯಾಯಾಲಯದ ತೀರ್ಪಿಗೆ ನಾವೆಲ್ಲರೂ ತಲೆಬಾಗಲೇಬೇಕು. ಅದರ ಬಗ್ಗೆ ಚರ್ಚೆ ಸೂಕ್ತವಲ್ಲ ಎಂದು ನುಡಿದರು.

---

## ಬೆಂಗಳೂರಿನಲ್ಲಿ ಭಾರೀ ಅಗ್ನಿ ಅವಘಡ: ತಿಂಗಳ ಹಿಂದಷ್ಟೇ ಆರಂಭವಾಗಿದ್ದ ಶುದ್ಧ ತಿಂಡಿ ಹೋಟೆಲ್ ಸುಟ್ಟು ಭಸ್ಮ




**ಬೆಂಗಳೂರು,ಏ.16**-ಬೆಂಗಳೂರಿನಲ್ಲಿ ಗುರುವಾರ ಭಾರೀ ಅಗ್ನಿ ಅವಘಡ ಸಂಭವಿಸಿದ್ದು, ಇತ್ತೀಚಿಗಷ್ಟೇ ಆರಂಭವಾಗಿದ್ದ ಶುದ್ಧ ತಿಂಡಿ ಎಂಬ ಹೊಸ ಹೋಟೆಲ್ ಸಂಪೂರ್ಣ ಸುಟ್ಟು ಭಸ್ಮವಾಗಿದೆ.

ಇಂದು ಮಧ್ಯಾಹ್ನ ಬೆಂಗಳೂರಿನ ನೈಸ್ ರಸ್ತೆಯ ಸೋಂಪುರ ಸರ್ಕಲ್ ಸಮೀಪ ಕಳೆದ ತಿಂಗಳು ಆರಂಭವಾಗಿದ್ದ ಶುದ್ಧ ತಿಂಡಿ ಹೋಟೆಲ್‌ನಲ್ಲಿ ಬೆಂಕಿ ಕಾಣಿಸಿಕೊಂಡಿದ್ದು, ನೋಡುನೋಡುತ್ತಿದ್ದಂತೆಯೇ ಹೊತ್ತಿ ಉರಿದಿದೆ.

ಕಳೆದ ಮಾರ್ಚ್ ನಲ್ಲಿ ಅಷ್ಟೇ ಈ ಶುದ್ಧ ತಿಂಡಿ ಹೋಟೆಲ್ ಹೊಸದಾಗಿ ಆರಂಭವಾಗಿತ್ತು.

ಆದರೆ ಇಂದು ಇಡ್ಲಿ ಸ್ಟೀಮರ್ ಶಾರ್ಟ್ ಸರ್ಕ್ಯೂಟ್ ನಿಂದಾಗಿ ಬೆಂಕಿ ಹೊತ್ತಿಕೊಂಡಿದ್ದು, ಕ್ಷಣಮಾತ್ರದಲ್ಲಿ ಇಡೀ ಹೋಟೆಲ್ ಸುಟ್ಟು ಭಸ್ಮವಾಗಿದೆ.

ಅದೃಷ್ಟವಶಾತ್ ಘಟನೆಯಲ್ಲಿ ಯಾವುದೇ ಪ್ರಾಣ ಹಾನಿಯಾಗಿಲ್ಲ, ಒಳಗಡೆ ಇದ್ದ ಸಿಬ್ಬಂದಿ ಬಚಾವ್ ಆಗಿದ್ದಾರೆ.

---

## ಮಹಿಳಾ ಮೀಸಲಾತಿ ಮಸೂದೆ ವಿರೋಧಿಸುವವರು ಭಾರಿ ಬೆಲೆ ತೆರಬೇಕಾಗುತ್ತದೆ-ವಿಪಕ್ಷಗಳಿಗೆ ಪ್ರಧಾನಿ ಮೋದಿ ವಾರ್ನಿಂಗ್!



**ನವದೆಹಲಿ,ಏ.16**-ಲೋಕಸಭೆಯಲ್ಲಿ ಗುರುವಾರ ಸಂಸತ್ತಿನ ವಿಶೇಷ ಅಧಿವೇಶನದಲ್ಲಿ ಪಾಲ್ಗೊಂಡು ಮಾತನಾಡಿದ ಪ್ರಧಾನಿ ನರೇಂದ್ರ ಮೋದಿ, ಮಹಿಳಾ ಮೀಸಲಾತಿಯನ್ನು ವಿರೋಧಿಸುವವರನ್ನು ದೇಶಾದ್ಯಂತ ಮಹಿಳೆಯರು ಕ್ಷಮಿಸುವುದಿಲ್ಲ ಅವರು ದೀರ್ಘಕಾಲದವರೆಗೆ ಬೆಲೆ ತೆರಬೇಕಾಗುತ್ತದೆ ಎಂದು ಪ್ರತಿಪಕ್ಷಗಳಿಗೆ ಎಚ್ಚರಿಕೆ ನೀಡಿದರು.

ಮಹಿಳಾ ಮೀಸಲಾತಿ ಮತ್ತು ಕ್ಷೇತ್ರ ಪುನರ್ ವಿಂಗಡಣೆ ಮಸೂದೆಗಳ ಕುರಿತು ಮಾತನಾಡಿದ ಪ್ರಧಾನಿ ಮೋದಿ, ಮಹತ್ವದ ಮಸೂದೆಗಳ ಕುರಿತು ಬೆಳಗ್ಗೆಯಿಂದ ಚರ್ಚೆ ನಡೆದಿದೆ. ಹಲವು ಸದಸ್ಯರು ಬೇರೆ ಬೇರೆ ವಿಷಯ ಎತ್ತಿದ್ದಾರೆ. ಸದನಕ್ಕೆ ನಿಖರವಾದ ಮಾಹಿತಿ ಒದಗಿಸುತ್ತೇವೆ ಎಂದು ತಿಳಿಸಿದರು.

25-30 ವರ್ಷಗಳ ಹಿಂದೆಯೇ ಮಹಿಳಾ ಮೀಸಲಾತಿಯನ್ನು ಜಾರಿಗೆ ತರಬೇಕಾಗಿತ್ತು. ಈಗ ಅದನ್ನು ಹೆಚ್ಚು ಪ್ರಬುದ್ಧ ಹಂತಕ್ಕೆ ತರಲಾಗಿದೆ. ಅಗತ್ಯಗಳಿಗೆ ಅನುಗುಣವಾಗಿ ಕಾಲಾನಂತರದಲ್ಲಿ ಇದನ್ನು ಪರಿಷ್ಕರಿಸಲಾಗುವುದು ಎಂದು ಹೇಳಿದರು.

ಅಗತ್ಯಕ್ಕೆ ಅನುಗುಣವಾಗಿ ಕಾಲಕಾಲಕ್ಕೆ ಇದನ್ನು ಪರಿಷ್ಕರಿಸಲಾಗುತ್ತದೆ. ಇದು ಪ್ರಜಾಪ್ರಭುತ್ವದ ಸೌಂದರ್ಯ. ನಮ್ಮದು ಪ್ರಜಾಪ್ರಭುತ್ವದ ತಾಯಿ. ನಮ್ಮ ಪ್ರಜಾಪ್ರಭುತ್ವ ಸಾವಿರಾರು ವರ್ಷಗಳಿಂದ ಅಭಿವೃದ್ಧಿ ಪ್ರಯಾಣವಾಗಿದೆ. ಈ ಸದನದಲ್ಲಿರುವ ನಾವೆಲ್ಲರೂ ಈ ಅಭಿವೃದ್ಧಿ ಪ್ರಯಾಣಕ್ಕೆ ಹೊಸ ಆಯಾಮವನ್ನು ಸೇರಿಸುವ ಶುಭ ಅವಕಾಶವಿದೆ ಎಂದರು. ನಾನು ಅತ್ಯಂತ ಹಿಂದುಳಿದ ಸಮುದಾಯದಿಂದ ಬಂದಿದ್ದೇನೆ ಆದರೆ ಎಲ್ಲರನ್ನೂ ಜೊತೆಗೆ ಕರೆದೊಯ್ಯುವುದು ನನ್ನ ಜವಾಬ್ದಾರಿಯಾಗಿದೆ. ಮಹಿಳಾ ಮೀಸಲಾತಿ ಮಸೂದೆಯನ್ನು ವಿರೋಧಿಸುವವರು ದೀರ್ಘಕಾಲದವರೆಗೆ ಬೆಲೆ ತೆರಬೇಕಾಗುತ್ತದೆ. ಮಹಿಳೆಯರಿಗೆ ಮೀಸಲಾತಿ ನೀಡುವ ಈ ಮಹತ್ವದ ಅವಕಾಶವನ್ನು ನಾವೆಲ್ಲರೂ ಕಳೆದುಕೊಳ್ಳಬಾರದು ಎಂದು ಹೇಳಿದರು.

**ನಮಗೆ ಯಾವುದೇ ಕ್ರೆಡಿಟ್ ಬೇಕಾಗಿಲ್ಲ:** ದೇಶದ ಅಭಿವೃದ್ಧಿಯಲ್ಲಿ ಮಹಿಳೆಯರ ಪಾತ್ರ ಮಹತ್ವದ್ದಾಗಿದೆ. ನಾವು ಅವರ ಹಕ್ಕುಗಳನ್ನು ನೀಡುತ್ತಿದ್ದೇವೆ. ನಮಗೆ ಯಾವುದೇ ಕ್ರೆಡಿಟ್ ಬೇಕಾಗಿಲ್ಲ, ಬೇಕಾದ್ರೆ ನೀವೆ ತಗೊಳ್ಳಿ. ಈ ವಿಚಾರದಲ್ಲಿ ರಾಜಕೀಯ ಮಾಡಬಾರದು. ಮಸೂದೆ ಬೆಂಬಲಿಸುವ ಮೂಲಕ ನಾವೆಲ್ಲರೂ ಈ ಐತಿಹಾಸಿಕ ಕ್ಷಣಕ್ಕೆ ಸಾಕ್ಷಿಯಾಗಬೇಕಾಗಿದೆ ಎಂದು ಪ್ರತಿಪಕ್ಷಗಳಿಗೆ ಪ್ರಧಾನಿ ಮನವಿ ಮಾಡಿದರು. ರಾಜಕೀಯವಾಗಿ ಮಾತ್ರ ಯೋಚಿಸುವವರಿಗೆ ನಾನು ಸಲಹೆ ನೀಡಲು ಬಯಸುತ್ತೇನೆ. ನಮ್ಮ ದೇಶದಲ್ಲಿ ಮಹಿಳಾ ಮೀಸಲಾತಿ ಬಗ್ಗೆ ಚರ್ಚೆ ಪ್ರಾರಂಭವಾದಾಗಿನಿಂದ ಮತ್ತು ನಂತರದ ಪ್ರತಿಯೊಂದು ಚುನಾವಣೆಯಲ್ಲೂ ಮಹಿಳೆಯರ ಈ ಹಕ್ಕನ್ನು ವಿರೋಧಿಸಿದವರು ಯಾರೇ ಆಗಿರಲಿ, ದೇಶದ ಮಹಿಳೆಯರು ಅವರನ್ನು ಕ್ಷಮಿಸಿಲ್ಲ ಎಂದರು.

**ಒಂದು ಪಕ್ಷ ಹೊರತುಪಡಿಸಿ ಬೇರೆ ಯಾರು ವಿರೋಧಿಸಿಲ್ಲ:** ನಾವು ಈಗಾಗಲೇ ಅದನ್ನು ವಿಳಂಬ ಮಾಡಿದ್ದೇವೆ. ಕಾರಣಗಳು ಏನೇ ಇರಲಿ, ಯಾರೇ ಜವಾಬ್ದಾರರಾಗಿದ್ದರೂ, ನಾವು ಈ ವಾಸ್ತವವನ್ನು ಒಪ್ಪಿಕೊಳ್ಳಬೇಕು. ಈ ಪ್ರಕ್ರಿಯೆ ನಡೆಯುತ್ತಿರುವಾಗ, ಎಲ್ಲಾ ಪಕ್ಷಗಳೊಂದಿಗೆ ಸಮಾಲೋಚನೆ ನಡೆಸಲಾಗುತ್ತಿತ್ತು ಎಂದು ನನಗೆ ತಿಳಿದಿದೆ. ಒಂದು ಪಕ್ಷವನ್ನು ಹೊರತುಪಡಿಸಿ, ನಾವು ಭೇಟಿಯಾದ ಪ್ರತಿಯೊಬ್ಬರೂ ಯಾವುದೇ ತಾತ್ವಿಕ ವಿರೋಧವನ್ನು ವ್ಯಕ್ತಪಡಿಸಲಿಲ್ಲ. ನಂತರ ಏನೇ ಆದರೂ ಅದು ರಾಜಕೀಯ ದಿಕ್ಕನ್ನು ತೆಗೆದುಕೊಳ್ಳುತ್ತಿದೆ ಎಂದು ಹೇಳಿದರು.21 ನೇ ಶತಮಾನದಲ್ಲಿ ಭಾರತವು ಹೊಸ ಆತ್ಮವಿಶ್ವಾಸದೊಂದಿಗೆ ಮುಂದುವರಿಯುತ್ತಿದೆ. ಇಂದು ಜಗತ್ತಿನಲ್ಲಿ ಭಾರತದ ಸ್ವೀಕಾರವನ್ನು ನಾವೆಲ್ಲರೂ ನೋಡುತ್ತಿದ್ದೇವೆ. ಇದು ನಮಗೆಲ್ಲರಿಗೂ ಹೆಮ್ಮೆಯ ಕ್ಷಣ. ಟವಿಕಸಿತ ಭಾರತಟ ಎಂದರೆ ರೈಲ್ವೆಗಳು, ರಸ್ತೆಗಳು, ಮೂಲಸೌಕರ್ಯ ಅಥವಾ ಆರ್ಥಿಕ ಅಥವಾ ಪ್ರಗತಿಯ ವ್ಯಕ್ತಿಗಳು ಮಾತ್ರವಲ್ಲ ಎಂದು ನಾನು ನಂಬುತ್ತೇನೆ ಎಂದರು.

**ದೇಶದ ಜನಸಂಖ್ಯೆಯ ಶೇ. 50 ರಷ್ಟು ಮಹಿಳೆಯರು ನೀತಿ ನಿರೂಪಣೆಯಲ್ಲಿ ಭಾಗಿ :** ನಾವು ಟವಿಕಸಿತ ಭಾರತಟದ ಸೀಮಿತ ದೃಷ್ಟಿಕೋನ ಹೊಂದಿರುವ ಜನರಲ್ಲ. ನಮ್ಮ ವಿಕಸಿತ ಭಾರತ ನೀತಿ ನಿರೂಪಣೆಯು ನಿಜವಾಗಿಯೂ ಟಸಬ್ ಕಾ ಸಾಥ್, ಸಬ್ ಕಾ ವಿಕಾಸ್‌ಟ ಎಂಬ ಮಂತ್ರವನ್ನು ಸಾಕಾರಗೊಳಿಸುತ್ತದೆ. ದೇಶದ ಜನಸಂಖ್ಯೆಯ ಶೇ. 50 ರಷ್ಟು ನೀತಿ ನಿರೂಪಣೆಯ ಭಾಗವಾಗುವುದು ಕಾಲದ ಬೇಡಿಕೆಯಾಗಿದೆ ಎಂದರು.

# ಶರಾವತಿ ಪಂಪ್ಡ್ ಸ್ಟೋರೇಜ್ ಯೋಜನೆ ಸ್ಥಗಿತಗೊಳಿಸುವಂತೆ ಒತ್ತಾಯಿಸಲು ಪ್ರಧಾನಿಯನ್ನು ಭೇಟಿ ಮಾಡುತ್ತೇವೆ: ಈಶ್ವರಪ್ಪ

**ಶಿವಮೊಗ್ಗ,ಏ.16-** ಪಶ್ಚಿಮ ಘಟ್ಟಕ್ಕೆ ಮಾರಕವಾಗಿರುವ ಶರಾವತಿ ಪಂಪ್ಡ್ ಸ್ಟೋರೇಜ್ ಯೋಜನೆಯನ್ನು ಸ್ಥಗಿತಗೊಳಿಸಬೇಕೆಂದು ಒತ್ತಾಯಿಸಲು ಪ್ರಧಾನಮಂತ್ರಿ ನರೇಂದ್ರ ಮೋದಿ ಅವರನ್ನು ಭೇಟಿ ಮಾಡುತ್ತೇವೆ ಎಂದು ಮಾಜಿ ಡಿಸಿಎಂ ಕೆ.ಎಸ್. ಈಶ್ವರಪ್ಪ ತಿಳಿಸಿದರು.

ಯೋಜನೆ ವಿರೋಧಿಸಿ ಇಂದು ರಾಷ್ಟ್ರಭಕ್ತ ಬಳಗ ಹಾಗೂ ಪರಿಸರಕ್ಕಾಗಿ ನಾವು ಸೇರಿದಂತೆ ವಿವಿಧ ಸಂಘಟನೆಗಳ ಸಹಯೋಗದಲ್ಲಿ ನಡೆದ ಬೃಹತ್ ಸೈಕಲ್ ಹಾಗೂ ಬೈಕ್ ರ್‍ಯಾಲಿಯಲ್ಲಿ ಭಾಗಿಯಾಗಿ ಅವರು ಮಾತನಾಡಿದರು.

ಶಿವಮೊಗ್ಗ ನಗರದ ಜನರಿಗೆ ಶರಾವತಿ ಪಂಪ್ಡ್ ಸ್ಟೋರೇಜ್ ಕುರಿತು ಜಾಗೃತಿ ಮೂಡಿಸಬೇಕೆಂದು ನಾವು ರ್‍ಯಾಲಿ ನಡೆಸಿದ್ದೇವೆ. ಸರ್ಕಾರ ಗಮನ ಹರಿಸದೆ ಹೋದ್ರೆ, ದೊಡ್ಡ ಹೋರಾಟ ಮಾಡಬೇಕಾಗುತ್ತದೆ ಎಂದು ಈಶ್ವರಪ್ಪ ಎಚ್ಚರಿಕೆ ನೀಡಿದರು.

ಇದು ಆರಂಭ ಅಷ್ಟೇ. ನಾವು ಯಾರಿಗೂ ತೊಂದ್ರೆ ಕೊಡುತ್ತಿಲ್ಲ. ಮಂತ್ರಿಗಳು ಶಿವಮೊಗ್ಗಕ್ಕೆ ಬಂದಾಗ ಮುತ್ತಿಗೆ ಹಾಕಬೇಕಾಗುತ್ತದೆ ಎಂದರು.

ಈಗಾಗಲೇ ಉರಿ ಬಿಸಿಲೇರುತ್ತಿದೆ. ಇಂತಹ ಸಂದರ್ಭದಲ್ಲಿ ಯೋಜನೆಗೆ 17 ಸಾವಿರ ಮರಗಳನ್ನು ಕಡಿದರೆ, ಬಿಸಿಲು ಜಾಸ್ತಿ ಆಗುತ್ತದೆ. ಮಳೆ ನಿಂತು ಹೋಗುತ್ತದೆ. ಮುಂದಿನ ದಿನಗಳಲ್ಲಿ ಇನ್ನಷ್ಟು ಜಾಗೃತಿ ಉಂಟುಮಾಡುವ ಕುರಿತು ತೀರ್ಮಾನ ಮಾಡಲಾಗುತ್ತದೆ. ನಮ್ಮ ಮುಂದಿನ ಹೋರಾಟಕ್ಕೆ



ನೀವೆಲ್ಲ ಸಿದ್ದವೇ? ಎಂದು ಜನರನ್ನು ಪ್ರಶ್ನಿಸಿದರು.

ಈ ಯೋಜನೆಗೆ ಸಿಎಂ ಸಿದ್ದರಾಮಯ್ಯ ಅವರನ್ನು ಯಾರು ದಾರಿ ತಪ್ಪಿಸಿದ್ದಾರೋ ಗೊತ್ತಿಲ್ಲ. ಯೋಜನೆಯ ಬಗ್ಗೆ ತಿಳಿದುಕೊಂಡು ಅವರು ಪ್ರಧಾನಮಂತ್ರಿಗೆ ಪತ್ರ ಬರೆಯಬೇಕಿತ್ತು. ಅನೇಕ ಹಿರಿಯರು ವಿರೋಧ ವ್ಯಕ್ತಪಡಿಸಿದ್ದಾರೆ. ನಾವು ಶೃಂಗೇರಿ ಶ್ರೀಗಳು, ಸ್ವರ್ಣವಲ್ಲಿ ಶ್ರೀಗಳು ಹಾಗೂ ಪೇಜಾವರ ಶ್ರೀಗಳನ್ನು ಭೇಟಿ ಮಾಡಿ, ಪ್ರಧಾನಮಂತ್ರಿಯನ್ನು ಭೇಟಿ ಮಾಡುತ್ತೇವೆ ಎಂದರು.

ಮಾಜಿ ಜಿಲ್ಲಾ ಪಂಚಾಯತ್ ಸದಸ್ಯ ಕೆ.ಈ.ಕಾಂತೇಶ್ ಸೇರಿದಂತೆ ವಿವಿಧ ಪರಿಸರ ಸಂಘಟನೆಯವರು ಪ್ರತಿಭಟನೆಯಲ್ಲಿ ಭಾಗಿಯಾಗಿದ್ದರು.

ನಗರದಾದ್ಯಂತ ಸೈಕಲ್, ಬೈಕ್ ರ್‍ಯಾಲಿ: ನಗರದ ಅಲ್ಲಮಪ್ರಭು ಮೈದಾನದಿಂದ ಪ್ರಾರಂಭವಾದ ಸೈಕಲ್-ಬೈಕ್ ರ್‍ಯಾಲಿಗೆ ಎನ್ಇಎಸ್‌ನ ಕಾರ್ಯದರ್ಶಿ ನಾಗರಾಜ್ ಅವರು ಹಸಿರು ಬಾವುಟ ತೋರುವ ಮೂಲಕ ಚಾಲನೆ ನೀಡಿದರು. ರ್‍ಯಾಲಿ ಅಲ್ಲಮಪ್ರಭು ಮೈದಾನದಿಂದ ವಿನೋಬನಗರ ಪೊಲೀಸ್ ಚೌಕಿ, ಆಲ್ಕೊಳ ವೃತ್ತ, ಸಾಗರ ರಸ್ತೆ, ಬಸ್ ನಿಲ್ದಾಣ, ಬಿ.ಹೆಚ್.ರಸ್ತೆಯ ಮೂಲಕ ಗಾಂಧಿ ಬಜಾರ್‌ಗೆ ಸಾಗಿ ಅಲ್ಲಿಂದ ಮಹಾವೀರ ವೃತ್ತಕ್ಕೆ ಬಂದು ಸೇರಿತು. ನೂರಾರು ಸಂಖ್ಯೆಯಲ್ಲಿ ಪರಿಸರಪ್ರೇಮಿಗಳು ಭಾಗಿಯಾಗಿದ್ದರು.

# ಅಲ್ಲೂರು (ಬಿ) ಗ್ರಾಮದ 2,877 ಎಕರೆ ಅರಣ್ಯ ಸಂರಕ್ಷಿತ ಮೀಸಲು: ವನ್ಯಜೀವಿ ಮಂಡಳಿ ಸಭೆ ನಿರ್ಧಾರ

**ಬೆಂಗಳೂರು,ಏ.16-**ಅರಣ್ಯ ಸಚಿವ ಈಶ್ವರ್ ಖಂಡ್ರೆ ಅವರ ನೇತೃತ್ವದಲ್ಲಿ ಇಂದು ನಡೆದ ಕರ್ನಾಟಕ ವನ್ಯಜೀವಿ ಮಂಡಳಿಯ 6ನೇ ಸಭೆಯಲ್ಲಿ ಕಲ್ಬುರ್ಗಿ ಜಿಲ್ಲೆಯ ಚಿತ್ತಾಪೂರ ತಾಲೂಕಿನ ಅಲ್ಲೂರು (ಬಿ) ಗ್ರಾಮದ 2877 ಎಕರೆ ಅರಣ್ಯವನ್ನು ಸಂರಕ್ಷಿತ ಮೀಸಲು ಎಂದು ಘೋಷಿಸಲು ನಿರ್ಧರಿಸಲಾಗಿದೆ.

ಬೆಟ್ಟಗುಡ್ಡಗಳಿಂದ ಕೂಡಿದ, ಹಚ್ಚಹಸಿರಿನ ರಮಣೀಯವಾದ ಈ ಅರಣ್ಯ ಪ್ರದೇಶ ಚಿರತೆ, ಕಾಡುಹಂದಿ, ಜಿಂಕೆ, ಕಾಡುಕುರಿ, ಕಾಡುಬೆಕ್ಕು, ಚಿಪ್ಪುಹಂದಿ, ನರಿ ಮೊದಲಾದ ವನ್ಯಜೀವಿಗಳ ಆವಾಸಸ್ಥಾನವಾಗಿದ್ದು, ಈ ಪ್ರದೇಶವನ್ನು ಸಂರಕ್ಷಿತ ಮೀಸಲು ಎಂದು ಘೋಷಿಸಲು ಯೋಗ್ಯವಾಗಿದೆ ಎಂದು ಸಭೆ ತೀರ್ಮಾನಿಸಿತು.

ಇದಕ್ಕೂ ಮುನ್ನ, ವನ್ಯಜೀವಿ ಸಂರಕ್ಷಣಾ ಕಾಯಿದೆ-1972ರ ಕಲಂ 36 ಎ ರೀತ್ಯ ಸ್ಥಳೀಯ ಗ್ರಾಮ ಪಂಚಾಯ್ತಿಯ ವಿಶೇಷ ಗ್ರಾಮಸಭೆಯಲ್ಲಿಯೂ ಈ ಬಗ್ಗೆ ಚರ್ಚಿಸಿ, ಸಂರಕ್ಷಿತ ಮೀಸಲು ಎಂದು ಘೋಷಿಸಲು ಸಮ್ಮತಿ ಪಡೆಯಲಾಗಿದೆ ಎಂದು ಸಭೆಗೆ ತಿಳಿಸಲಾಯಿತು.

ಉಳಿದಂತೆ, ಬನ್ನೇರುಘಟ್ಟ ರಾಷ್ಟ್ರೀಯ ಉದ್ಯಾನ ಪರಿಸರ ಸೂಕ್ಷ್ಮ ವಲಯದಲ್ಲಿ ಇಂಡಿಯನ್ ಇನ್‌ಸ್ಟಿಟ್ಯೂಟ್ ಆಫ್ ಮ್ಯಾನೇಜ್‌ಮೆಂಟ್ ವತಿಯಿಂದ ಹಂತ 1 ಪದವಿ ಕಾಲೇಜು



ಆವರಣ ನಿರ್ಮಾಣ ಸೇರಿದಂತೆ ವಿವಿಧ ಯೋಜನೆಗಳಿಗೆ ಅನುಮೋದನೆ ನೀಡಲಾಯಿತು.

ಆಯ್ದ ವನ್ಯಜೀವಿಗಳ ಸಂತಾನ ಹರಣಕ್ಕೆ ಚಿಂತನೆ- ಸಚಿವ ಖಂಡ್ರೆ: ಮಾನವ-ವನ್ಯಜೀವಿ ಸಂಘರ್ಷ ದಿನದಿಂದ ದಿನಕ್ಕೆ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಆಯ್ದ ವನ್ಯಜೀವಿಗಳ ಸಂತಾನಶಕ್ತಿಹರಣ ಅಥವಾ ಚುಚ್ಚುಮದ್ದು ನೀಡುವ ಬಗ್ಗೆ ಚಿಂತಿಸುವ ಅಗತ್ಯವಿದ್ದು, ಈ ಬಗ್ಗೆ ಸಾರ್ವಜನಿಕವಾಗಿ ಚರ್ಚೆಯೂ ನಡೆಯಬೇಕು ಎಂದು ಅರಣ್ಯ ಸಚಿವ ಈಶ್ವರ ಬಿ.ಖಂಡ್ರೆ ಇತ್ತೀಚಿಗೆ ಅಭಿಪ್ರಾಯಪಟ್ಟಿದ್ದರು.

ಬೆಂಗಳೂರಿನಲ್ಲಿ ಮಾತನಾಡಿದ್ದ ಅವರು, ಕೆಲವು ಆಯ್ದ ವನ್ಯಜೀವಿಗಳ ಸಂಖ್ಯೆಯಲ್ಲಿ ಭಾರಿ ಹೆಚ್ಚಳವಾಗುತ್ತಿದೆ. ಇವುಗಳ ಸಂಖ್ಯೆಗೆ ಕಡಿವಾಣ ಹಾಕುವ ಅಗತ್ಯವೂ ಕಂಡುಬರುತ್ತಿದೆ. ವನ್ಯಜೀವಿಗಳ ಸಂರಕ್ಷಣೆಯೂ ಆಗಬೇಕು. ಅಮೂಲ್ಯವಾದ ಜೀವಹಾನಿಯೂ ತಪ್ಪಬೇಕು. ಮಾನವರ ಜೀವ ಉಳಿಸುವ ಕೆಲಸವೂ ಆಗಬೇಕಿದೆ ಎಂದಿದ್ದರು. ಇದು ನಿರ್ಧಾರವಲ್ಲ, ಒಂದು ಚಿಂತನೆ ಮಾತ್ರ. ಈ ಬಗ್ಗೆ ಸಾರ್ವಜನಿಕ ವಲಯದಲ್ಲಿ ಚರ್ಚೆ ಆಗುವ ಅಗತ್ಯವಿದೆ. ಜೊತೆಗೆ ತತ್ಸಂಬಂಧವಾದ ಪ್ರಕರಣ ಸರ್ವೋಚ್ಚ ನ್ಯಾಯಾಲಯದಲ್ಲಿದ್ದು, ತಜ್ಞರು, ಕಾನೂನು ಪಂಡಿತರೊಂದಿಗೆ ಚರ್ಚಿಸಿ ನ್ಯಾಯಾಲಯಕ್ಕೆ ಪ್ರಸ್ತಾವನೆ ಸಲ್ಲಿಸುವ ಬಗ್ಗೆಯೂ ಹಿರಿಯ ಅಧಿಕಾರಿಗಳೊಂದಿಗೆ ಸಭೆ ನಡೆಸಬೇಕಾಗುತ್ತದೆ ಎಂದು ತಿಳಿಸಿದ್ದರು.

ಜೀವನವೂ ಇರಬೇಕು, ಜೀವನೋಪಾಯವೂ ಇರಬೇಕು ಎಂದಿದ್ದ ಅವರು, ಯಾವ ಭಾಗದಲ್ಲಿ ಯಾವ ವನ್ಯಜೀವಿಗಳ ಸಂಖ್ಯೆಯಲ್ಲಿ ಭಾರಿ ಹೆಚ್ಚಳವಾಗುತ್ತದೋ ಅಲ್ಲಿ ಒಂದೆರಡು ವರ್ಷ ನಿಯಂತ್ರಿಸುವ ಬಗ್ಗೆ ಚಿಂತನೆ ನಡೆಯುತ್ತಿದೆ. ಬೇರೆ ಬೇರೆ ರಾಜ್ಯಗಳಲ್ಲೂ ಇಂತಹ ಆಲೋಚನೆ, ಚಿಂತನೆ ಇದೆ. ಈ ಬಗ್ಗೆ ಸಾರ್ವಜನಿಕ ಚರ್ಚೆ ನಡೆಯುವ ಅಗತ್ಯವಿದೆ ಎಂದು ಹೇಳಿದ್ದರು.

# ಬಳ್ಳಾರಿಯಲ್ಲಿ 10 ಕೋಟಿ ರೂ. ವೆಚ್ಚದಲ್ಲಿ ಅಂಬೇಡ್ಕರ್ ಸುಸಜ್ಜಿತ ಗ್ರಂಥಾಲಯ ನಿರ್ಮಿಸಲು ನಿರ್ಧಾರ

■ ಕನ್ನಡ ಮಾತೃ ಭೂಮಿ ವಾರ್ತೆ

**ಬಳ್ಳಾರಿ,ಏ.14-**ಅಂಬೇಡ್ಕರ್ ಅವರ ಆಶಯಗಳನ್ನು ಉಳಿಸಲು ಪ್ರತಿಯೊಂದು ಮನೆಯಲ್ಲೂ ಒಬ್ಬರು ಐಎಎಸ್, ಐಪಿಎಸ್, ಇಂಜಿನಿ ಯರ್, ಡಾಕ್ಟರ್, ಒಟ್ಟಿನಲ್ಲಿ ಉನ್ನತ ವ್ಯಾಸಂಗ ಪಡೆದ ವಿದ್ಯಾವಂತರು ಇರ ಬೇಕು. ಇದೇ ಉದ್ದೇಶದಿಂದ ಬಳ್ಳಾರಿ ನಗರದಲ್ಲಿ ಅಂಬೇಡ್ಕರ್ ಅವರ ಹೆಸರಿ ನಲ್ಲಿ ರೂ.10 ಕೋಟಿ ವೆಚ್ಚದಲ್ಲಿ ಸುಸ ಜ್ಜಿತ ಗ್ರಂಥಾಲಯ ನಿರ್ಮಿಸಲು ನಿರ್ಧ ರಿಸಲಾಗಿದೆ ಎಂದು ಬಳ್ಳಾರಿ ನಗರ ಶಾಸಕ ನಾರಾ ಭರತ್ ರೆಡ್ಡಿ ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಾನಗರ ಪಾಲಿಕೆ ಹಾಗೂ ಸಮಾಜ ಕಲ್ಯಾಣ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ನಗರದ ಡಾ.ರಾಜ್ ಕುಮಾರ್ ರಸ್ತೆಯ ಮುನಿಸಿಪಲ್ ಕಾಲೇಜು ಮೈದಾನದಲ್ಲಿ ಮಂಗಳವಾರ ಏರ್ಪ ಡಿಸಿದ್ದ ಭಾರತ ರತ್ನ, ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಅವರ 135ನೇ ಜನ್ಮದಿನಾಚರಣೆ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು.

ಮೈಸೂರು ಭಾಗದ ದಲಿತರು ಶಿಕ್ಷಣ ದಲ್ಲಿ ಮುಂದಿರುವುದರಿಅದ ತಮ್ಮ ಹಕ್ಕುಗಳಿಗಾಗಿ ಸಮರ್ಥವಾಗಿ ಹೋರಾ ಡುತ್ತಿದ್ದಾರೆ, ಆದರೆ ನಮ್ಮ ಭಾಗದಲ್ಲಿ ಶಿಕ್ಷಣದ ಕೊರತೆ ಇರುವುದರಿಂದ ಜನ ರು ಇನ್ನೂ ಮುಗ್ಧರಾಗಿದ್ದಾರೆ. ಹಾಗಾಗಿ ಈ ಗ್ರಂಥಾಲಯದ ಮೂಲಕ

ಬಳ್ಳಾ ರಿಯ ಮಕ್ಕಳು ಓದಿ ಐಎಎಸ್ ಮತ್ತು ಐಪಿಎಸ್ ಅಧಿಕಾರಿಗಳಾಗಿ, ಇಂಜಿನಿ ಯರ್, ಡಾಕ್ಟರ್ ಗಳಾಗಿ ಹೊರಹೊಮ್ಮಬೇಕು. ಈ ಯೋಜನೆಯ ಕುರಿತು ಜಿಲ್ಲಾಧಿಕಾರಿಯವರೊಂದಿಗೆ ಈಗಾಗಲೇ ಮೌಖಿಕವಾಗಿ ಚರ್ಚಿಸಲಾಗಿದೆ ಎಂದು ತಿಳಿಸಿದರು.

ಅಸ್ಪೃಶ್ಯತೆ ಕೇವಲ ದೈಹಿಕವಾಗಿ ನಿರ್ಮೂಲನೆಯಾದರೆ ಸಾಲದು. ಅದು ಇಂದಿಗೂ ಜನರ ಮನಸ್ಸಿನಲ್ಲಿ ಬೇರೂ ರಿದೆ ಎಂದು ವಿಷಾದ ವ್ಯಕ್ತಪಡಿಸಿದ ಶಾಸಕರು, ಅಂಬೇಡ್ಕರ್ ಅವರು ಮೀಸ ಲಾತಿಯನ್ನು ನೀಡಿದ್ದು ಕೇವಲ ಮೀ ಸಲು ಕ್ಷೇತ್ರಗಳಿಗೆ ಸೀಮಿತವಾಗಲು ಅಲ್ಲ; ಬದಲಾಗಿ ದಲಿತರು ಸಾಮಾನ್ಯ ಕ್ಷೇತ್ರಗಳಲ್ಲೂ ಸ್ಪರ್ಧಿಸಿ ಮುಂಚೂಣಿಗೆ ಬರಬೇಕು ಎಂಬುದು ಅವರ ಆಶಯ ವಾಗಿತ್ತು ಎಂದು ತಿಳಿಸಿದರು.

ಅಂಬೇಡ್ಕರ್ ಅವರು ನೀಡಿದ ಸಂವಿ ಧಾನವೇ ನಮಗೆ



ದೊಡ್ಡ ಆಯುಧ ವಾಗಿದ್ದು, ಅದನ್ನು ಗೌರವಿಸಿ ದೇಶ ವನ್ನು ಅಭಿವೃದ್ಧಿಯತ್ತ ಕೊಂಡೊ ಯ್ಯೋಣ. ದಲಿತರಿಗೆ ಮೀಸಲಾತಿ ಎಂಬುದು ಸಂವಿಧಾನಬದ್ಧ ಹಕ್ಕು. ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಸರ್ಕಾರ ದಲಿತರಿಗೆ ಎಂದಿಗೂ ಅನ್ಯಾಯ ಮಾಡುವುದಿಲ್ಲ ಎಂದು ಅಭಿಮತ ವ್ಯಕ್ತಪಡಿಸಿದರು.

ಡಾ.ಬಾಬು ಜಗಜೀವನರಾಮ್ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷ ಮುಂಡರಗಿ ನಾಗ ರಾಜ ಅವರು ಮಾತನಾಡಿ, ಹಿಂದೂಗ ಳಿಗೆ ಭಗವದ್ಗೀತೆ, ಮುಸ್ಲಿಮರಿಗೆ ಕುರಾನ್, ಕ್ರೈಬಸ್ತರಿಗೆ ಬೈಬಲ್ ಇರು ವಂತೆ, ಭಾರತೀಯರೆಲ್ಲರೂ ಒಂದೇ ಸೂರಿನಡಿ ಸಾಗಲು ಸಂವಿಧಾನ'ವೇ ಪರಮ ಶ್ರೇಷ್ಠ ಗ್ರಂಥವಾಗಿದೆ ಎಂದು ಅಭಿಪ್ರಾಯಪಟ್ಟರು.

ಅಂಬೇಡ್ಕರ್ ಅವರು ಎಲ್ಲ ಜಾತಿ, ಧರ್ಮದ 18 ವರ್ಷ ತುಂಬಿದ ಪ್ರತಿ ಯೊಬ್ಬರಿಗೂ ಸಮಾನ ಮತದಾನದ ಹಕ್ಕನ್ನು ತಂದುಕೊಟ್ಟವರು. ಅಂಬೇಡ್ಕರ್ ಅವರು ಬರೆದ ದ ಪ್ರಾಬ್ಲಮ್ ಆಫ್ ದಿ ರೂಪಿ' ಪ್ರಬಂಧದ ಆಧಾರದ ಮೇಲೆ ಭಾರತೀಯ ರಿಸರ್ವ್ ಬ್ಯಾಂಕ್ ಸ್ಥಾಪನೆ ಯಾಯಿತು. ಅವರ ಆರ್ಥಿಕ ಚಿಂತನೆಗಳ ಫಲವಾಗಿಯೇ ಇಂದು ಬ್ಯಾಂಕು ಗಳು ಸಾಮಾನ್ಯ ಜನರ ಮನೆಬಾಗಿಲಿಗೆ ತಲುಪಿವೆ ಮತ್ತು ರಾಷ್ಟ್ರೀಕರಣಗೊಂಡಿವೆ ಎಂದು ಬ್ಯಾಂಕಿಅಗ್ ಕ್ಷೇತ್ರದಲ್ಲಿ ಅವರ ಕೊಡುಗೆಯನ್ನು ಶ್ಲಾಘಿಸಿದರು.

ಮಹಿಳೆಯರಿಗೆ ಸಮಾನ ಹಕ್ಕು ಮತ್ತು ಆಸ್ತಿಯಲ್ಲಿ ಪಾಲು ನೀಡುವ ಹಿಂದೂ ಕೋಡ್ ಬಿಲ್' ಅನ್ನು ಸಂಸತ್ತಿನಲ್ಲಿ ಮಂಡಿಸಿದರು. ಮಹಿಳೆಯರಿಗೆ ಸಮಾನತೆ ಸಿಗಬೇಕೆಂಬ ಉದ್ದೇಶದಿಂದ ಅವರು ತಮ್ಮ ಮಂತ್ರಿ ಪದವಿಗೇ ರಾಜೀ ನಾಮೆ ನೀಡಿದ ಘಟನೆಯನ್ನು ಮೆಲುಕು ಹಾಕಿದ ಅವರು, ಮಹಿಳೆಯರ ಉದ್ಧಾರಕ್ಕಾಗಿ ಅಂಬೇಡ್ಕರ್ ಮತ್ತು ಸಾವಿತ್ರಿಬಾಯಿ ಫುಲೆ ಅವರ ಕೊಡುಗೆ ಗಳನ್ನು ಸ್ಮರಿಸಿದರು.

ಮಹಾನಗರ ಪಾಲಿಕೆಯ ಮಹಾಪೌ ರರಾದ ಪಿ.ಗಾದೆಪ್ಪ ಅವರು ಮಾತ ನಾಡಿ, ಸಮಾಜದ ಶೋಷಿತ ಮತ್ತು ಅನ್ಯಾಯಕ್ಕೊಳಗಾದ ವರ್ಗದ ಪರವಾಗಿ ಅಂದಿನ ಕಾಲದಲ್ಲಿ ಧ್ವನಿ ಎತ್ತಿದ ಮಹಾ ನ್ ಚೇತನ ಡಾ.ಬಿ.ಆರ್. ಅಂಬೇಡ್ಕರ್. ಅಂದಿನ ದಿನಗಳಲ್ಲಿ ಊಟ, ವಸತಿ ಮತ್ತು ಮನೆ ಇಲ್ಲದೇ ಕಷ್ಟದ ಪರಿಸ್ಥಿತಿ ಯಲ್ಲೂ ಹೋರಾಡಿ ಇಡೀ ಸಮಾಜಕ್ಕೆ ಸ್ವಾತಂತ್ರ್ಯ ಮತ್ತು ಹಕ್ಕುಗಳನ್ನು ತಂದು ಕೊಟ್ಟ ಮಹಾನ್ ವ್ಯಕ್ತಿ ಅಂಬೇಡ್ಕರ್ ಅವರು ಎಂದು ಬಣ್ಣಿಸಿದರು.

ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್. ಕೆ ಅವರು ಮಾತನಾಡಿ, ಅಂಬೇಡ್ಕರ್ ಅವರು ವಿವಿಧ ರಂಗಗಳಲ್ಲಿ ಸರ್ವಶ್ರೇಷ್ಠ ರಾಗಿ ಹೊರಹೊಮ್ಮಲು ಅವರು ಶಿಕ್ಷಣದ ಮೂಲಕ ಪಡೆದ ಜ್ಞಾನವೇ ಮೂಲ ಕಾರಣ. ಅವರು ಕೇವಲ ಪತ್ರಕರ್ತರ ಲ್ಲದೆ, ರಾಜಕೀಯ ಧುರೀಣ, ಸಾಮಾ ಜಿಕ ಪರಿವರ್ತನಾಕಾರ, ವಿಶ್ವದ ಶ್ರೇಷ್ಠ ತತ್ವಜ್ಞಾನಿ ಮತ್ತು ಅರ್ಥಶಾಸ್ತ್ರಜ್ಞರಾಗಿ ದ್ದರು. ಸರ್ಕಾರ ಜಾರಿಗೆ ತರುವ ಯೋಜನೆಗಳನ್ನು ಅಧಿಕಾರಿಗಳು ಪರಿಣಾಮ ಕಾರಿಯಾಗಿ ಜಾರಿಗೊಳಿಸಿ ದಾಗ ಮಾತ್ರ ಅಂಬೇಡ್ಕರ್ ಅವರ ಕನಸು ನನಸಾಗಲು ಸಾಧ್ಯ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

ಬಾಬಾ ಸಾಹೇಬ್ ಅಂಬೇಡ್ಕರ್ ಅವರು ಸಂವಿಧಾನದ ಮೂಲಕ ಕೇವಲ ಪರಿಶಿಷ್ಟ ಜಾತಿ ಮತ್ತು ಪಂಗಡಗಳಿಗೆ ಮಾತ್ರವಲ್ಲದೆ, ಸಮಾಜದ ಎಲ್ಲಾ ವರ್ಗ ದವರಿಗೂ ಸಮಾನತೆ ಮತ್ತು ಅವಕಾ ಶಗಳ ಅಧಿಕಾರ ನೀಡಿದ್ದಾರೆ.

ಅಂಬೇ ಡ್ಕರ್ ಅವರು ಹಾಕಿಕೊಟ್ಟ ಮಾರ್ಗದಲ್ಲಿ ನಡೆಯುವ ಮೂಲಕ ಮತ್ತು ಸಂವಿಧಾನದ ಆಶಯಗಳನ್ನು ಪಾಲಿಸುವ ಮೂಲಕ ಅವರ ಕನಸನ್ನು ನನಸು ಮಾಡೋಣ ಎಂದು ಕರೆ ನೀಡಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಸುಮನ್ ಡಿ.ಪನ್ನೇಕರ್ ಅವರು ಮಾತನಾಡಿ, ಅಂಬೇಡ್ಕರ್ ಅವರ ಬಗ್ಗೆ ಇತರರು ಮಾಡಿರುವ ವಿಶ್ಲೇಷಣೆ ಅಥವಾ ವ್ಯಾಖ್ಯಾನಗಳನ್ನು ಓದುವುದಕ್ಕಿಂತ, ಸ್ವತಃ ಅಂಬೇಡ್ಕರ್ ಅವರೇ ಬರೆದಿರುವ ಪ್ರಬಂಧಗಳು ಮತ್ತು ಪುಸ್ತಕ ಗಳನ್ನು ಓದುವುದು ಹೆಚ್ಚು ಪ್ರಸ್ತುತ. ಇದರಿಂದ ಅವರ ನಿಜವಾದ ಆಲೋಚ ನೆಗಳು

ಮತ್ತು ಸಮಾಜದ ಬಗೆಗಿನ ಅವರ ದೃಷ್ಟಿಕೋನ ನಮಗೆ ನೇರವಾಗಿ ಅರ್ಥವಾಗುತ್ತದೆ. ಹಾಗಾಗಿ ತಮ್ಮ ಮಕ್ಕಳಿಗೆ ಹೆಚ್ಚಿನ ವಿದ್ಯಾಭ್ಯಾಸ ನೀಡು ವಂತೆ ಮತ್ತು ಅವರಲ್ಲಿ ಓದುವ ಹವ್ಯಾಸವನ್ನು ಬೆಳೆಸುವಂತೆ ತಿಳಿಸಿದರು.ಹಂಪಿಯ ಕನ್ನಡ ವಿಶ್ವವಿದ್ಯಾಲ ಯದ ಹಿರಿಯ ಪ್ರಾಧ್ಯಾಪಕ ಪ್ರೊ.ಎನ್. ಚಿನ್ನಸ್ವಾಮಿ ಸೋಸಲೆ ಅವರು ಡಾ.ಬಿ.ಆರ್.ಅಂಬೇಡ್ಕರ್ ಅವರ ಜೀವನಗಾಥೆ, ವಿಚಾರಧಾರೆ ಕುರಿತು ವಿಶೇಷ ಉಪನ್ಯಾಸ ನೀಡಿದರು.

ಈ ವೇಳೆ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಕೆ.ಇ.ಚಿದಾನಂದಪ್ಪ, ಜಿಲ್ಲಾ ಡಾ.ಬಿ.ಆರ್. ಅಂಬೇಡ್ಕರ್ ಸಂಘದ ಅಧ್ಯಕ್ಷ ಹೆಚ್.ತಿಪ್ಪೇಸ್ವಾಮಿ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿ ರ್ವಾಹಕ ಅಧಿಕಾರಿ ಮಹಮ್ಮದ್ ಹಾರೀಸ್ ಸುಮೇರ್, ಉಪ ಅರಣ್ಯ ಸಂರಕ್ಷಣಾಧಿಕಾರಿ ಡಾ.ಕೆ.ಎನ್. ಬಸವ ರಾಜ, ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್.ಎನ್., ಮಹಾನಗರ ಪಾಲಿಕೆ ಆಯುಕ್ತ ಪಿ.ಎಸ್ ಮಂಜುನಾಥ, ಜಿಲ್ಲಾ ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಚಿದಾನಂದಪ್ಪ ಸೇರಿದಂತೆ ಮಹಾನಗರ ಪಾಲಿಕೆ ಸದಸ್ಯರು, ಎಲ್ಲಾ ಸ್ಥಳೀಯ ಸಂಸ್ಥೆಗಳ ಜನಪ್ರತಿನಿಧಿಗಳು, ಸಂಘ- ಸಂಸ್ಥೆಗಳ ಪದಾಧಿಕಾರಿಗಳು, ಮುಖಂಡರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

ಕಾರ್ಯಕ್ರಮ ಆರಂಭಕ್ಕೂ ಮುನ್ನ ಚರ್ಮಕಾರರ ಆಧುನಿಕ ಪಾದುಕೆ ಕುಟೀರಗಳನ್ನು ಗಣ್ಯರು ಉದ್ಘಾಟನೆ ಗೊಳಿಸಿದರು. ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿಯವರು ಸಂವಿಧಾನ ಪೀಠಿಕೆ ವಾಚನ ಮಾಡಿಸಿದರು. ಬಳಿಕ ಅಂಬೇ ಡ್ಕರ್ ಜಯಂತಿ ಅಂಗವಾಗಿ ಏರ್ಪಡಿ ಸಿದ್ದ ಪ್ರಬಂಧ, ಭಾಷಣ ಸ್ಪರ್ಧೆಗಳಲ್ಲಿ ವಿಜೇತರಾದ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು.

ಅದ್ದೂರಿ ಸ್ತಬ್ಧಚಿತ್ರ ಮೆರವಣಿಗೆ:

ಭಾರತ ರತ್ನ, ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಜನ್ಮ ದಿನಾಚ ರಣೆ ಅಂಗವಾಗಿ ಆಯೋಜಿಸಲಾಗಿದ್ದ ಮೆರವಣಿಗೆಯು ನಗರದಲ್ಲಿ ಅದ್ದೂರಿ ಯಾಗಿ ನಡೆಯಿತು. ವಿವಿಧ ಸಾಂಸ್ಕೃತಿಕ ಕಲಾ ತಂಡಗಳು ಭಾಗವಹಿಸಿ ಮೆರವಣಿ ಗೆಗೆ ಮೆರಗು ನೀಡಿದವು.ಮೆರವಣಿಗೆಯಲ್ಲಿ ಸಾರಿಗೆ ಇಲಾಖೆ ವತಿಯಿಂದ ರೂಪಿಸಿದ್ದ ವಿಧಾನಸೌಧ ಸ್ತಬ್ಧಚಿತ್ರ, ಕೃಷಿ ಇಲಾಖೆ, ತೋಟಗಾರಿಕೆ ಇಲಾಖೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜೆಸ್ಕಾಂ ಹಾಗೂ ವಿವಿಧ ಇಲಾಖೆಗಳ ವತಿಯಿಂದ ವಿವಿಧ ಸರ್ಕಾರದ ಕಾರ್ಯಕ್ರಮಗಳು ಮತ್ತು ವಿವಿಧ ಯೋಜನೆಗಳ ಮಾಹಿತಿ ಕುರಿತ ಸ್ತಬ್ಧಚಿತ್ರಗಳು ಗಮನ ಸೆಳೆದವು.

ಮೆರವಣಿಗೆಗೆ ಮುನ್ನ ನಗರದ ಮೊದಲನೇ ರೈಲ್ವೇ ಗೇಟ್ ಬಳಿಯ ಸಮಾಜ ಕಲ್ಯಾಣ ಇಲಾಖೆಯ ಅಂಬೇ ಡ್ಕರ್ ಭವನ ಆವರಣದ ಡಾ.ಬಿ. ಆರ್.ಅಂಬೇಡ್ಕರ್ ಅವರ ಪುತ್ಥಳಿಗೆ ಗಣ್ಯರು ಮಾಲಾರ್ಪಣೆ ಮಾಡಿದರು.ಮೆರವಣಿಗೆಯು ನಗರದ ಡಾ.ರಾಜ್ ಕುಮಾರ್ ರಸ್ತೆಯ ಮುನ್ಸಿ ಪಾಲ್ ಕಾಲೇಜು ಮೈದಾನದಿಂದ ಆರಂ ಭವಾಗಿ ಗಡಿಗಿ ಚೆನ್ನಪ್ಪ ವೃತ್ತ, ಬೆಂಗಳೂ ರು ರಸ್ತೆ, ಬ್ರೂಸ್ ಪೇಟೆ ಪೋಲಿಸ್ ಠಾಣೆ, ಹೆಚ್.ಆರ್.ಗವಿಯಪ್ಪ ವೃತ್ತದ ಮೂಲಕ ರೈಲ್ವೇ ಸ್ಟೇಷನ್ ರಸ್ತೆ ಮೂಲಕ ಮರಳಿ ಮುನಿಸಿಪಲ್ ಕಾಲೇಜು ಮೈದಾನಕ್ಕೆ ತಲುಪಿ ಸಂಪನ್ನಗೊಅಡಿತು.


# ಬಾಬಾಸಾಹೇಬರು ನೀಡಿದ ಸಂವಿಧಾನದಿಂದಾಗಿ : ಇಂದು ನಾವೆಲ್ಲರೂ ಗೌರವಯುತ ಬದುಕು ನಡೆಸುತ್ತಿದ್ದೇವೆ-ತನುಶ್ರೀ

■ ಕನ್ನಡ ಮಾತೃ ಭೂಮಿ ವಾರ್ತೆ

**ಕನಕಗಿರಿ,ಏ.14-**ತಾಲೂಕು ಆಡಳಿತ, ತಾಲೂಕು ಪಂಚಾಯತ್, ಪಟ್ಟಣ ಪಂಚಾಯತ್ ಹಾಗೂ ಸಮಾಜ ಕಲ್ಯಾಣ ಇಲಾಖೆ ಗಂಗಾವತಿ ಇವರ ಸಂಯುಕ್ತ ಆಶ್ರಯದಲ್ಲಿ ಸಂವಿಧಾನ ಶಿಲ್ಪಿ, ಭಾರತ ರತ್ನ ಡಾ. ಬಿ.ಆರ್. ಅಂಬೇಡ್ಕರ್ ಅವರ 135ನೇ ಜನ್ಮ ದಿನಾಚರಣೆಯನ್ನು ಅತ್ಯಂತ ಸಡಗರ- ಸಂಭ್ರಮದಿಂದ ಆಚರಿಸಲಾಯಿತು.

ಸಮಾರಂಭದ ಅಂಗವಾಗಿ ಡಾಕ್ಟರ್ ಬಿ ಆರ್ ಅಂಬೇಡ್ಕರ್ ಸರ್ಕಲ್‌ನಲ್ಲಿ ಬಾಬಾಸಾಹೇಬರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ, ಭವ್ಯ ಮೆರವಣಿಗೆಯನ್ನು ಹಮ್ಮಿಕೊಳ್ಳಲಾಗಿತ್ತು, ಛತ್ರಪತಿ ಶಿವಾಜಿ ವೃತ್ತ, ವಾಲ್ಮೀಕಿ ವೃತ್ತದಿಂದ ಸಾಗಿ ಪಟ್ಟಣದ ಪ್ರಮುಖ ಬೀದಿಗಳಲ್ಲಿ ಸಂಚರಿಸಿ ಕನಕಾಚಲಪತಿ ದೇವಸ್ಥಾನದ ವೇದಿಕೆ ಮುಂಭಾಗದಲ್ಲಿ ಮೆರವಣಿಗೆ ಮುಕ್ತಾಯ ಗೊಂಡಿತು.

ನಂತರ ಕಾರ್ಯಕ್ರಮವನ್ನು ಪಟ್ಟಣ ಪಂಚಾಯತ್ ಅಧ್ಯಕ್ಷೆ ತನುಶ್ರೀ ಟಿ.ಜೆ. ರಾಮಚಂದ್ರ ಅವರು ಜ್ಯೋತಿ ಬೆಳಗಿಸುವ ಮೂಲಕ ಉದ್ಘಾಟಿಸಿದರು. ಈ ಸಂದರ್ಭ ದಲ್ಲಿ ಮಾತನಾಡಿದ ಅವರು, ಬಾಬಾಸಾಹೇಬರು ನೀಡಿದ ಸಂವಿಧಾನದಿಂದಾಗಿ ಇಂದು ನಾವೆಲ್ಲರೂ ಗೌರವಯುತ ಬದುಕು ನಡೆಸುತ್ತಿದ್ದೇವೆ. ಅವರ ತತ್ತ್ವಗಳು ಕೇವಲ ಭಾಷಣಕ್ಕೆ ಸೀಮಿತವಾಗದೆ



ಪ್ರತಿಯೊಬ್ಬರ ಜೀವನದ ದಾರಿದೀಪವಾಗಬೇಕು, ಎಂದು ಆಶಯ ವ್ಯಕ್ತಪಡಿಸಿದರು. ಅಂಬೇಡ್ಕರ್ ಅವರು ಆರಂಭಿಸಿದ ಮೂಕನಾಯಕ ಪತ್ರಿಕೆ ಶೋಷಿತರ ಧ್ವನಿಯಾಯಿತು. ಪತ್ರಿಕೆಯ ಜಾಹೀರಾತಿಗಾಗಿ ಅನುಭವಿಸಿದ ಕಷ್ಟಗಳನ್ನು ಮೆಟ್ಟಿನಿಂತು ಅವರು ಗೋಡೆ ಬರಹಗಳ ಮೂಲಕ ವಿಚಾರ ಕ್ರಾಂತಿ ಮಾಡಿದ್ದನ್ನು ನೆನಪಿಸಿದರು.

ವಿಶೇಷ ಉಪನ್ಯಾಸ ನೀಡಿದ ಗಂಗಾವತಿಯ ಎಸ್.ಕೆ.ಎನ್.ಜಿ. ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಇತಿಹಾಸ ಉಪನ್ಯಾಸಕರು ಹಾಗೂ ಖ್ಯಾತ ವಿಚಾರವಾದಿಗಳಾದ ಡಾ. ಮಣಿಕಂಠ ಅಂಗಳ ಅವರು ತಮ್ಮ ಭಾಷಣದಲ್ಲಿ ಅಂಬೇಡ್ಕರ್ ಅವರ ಜೀವನದ ಪ್ರಮುಖ ಘಟ್ಟಗಳನ್ನು ಮೆಲುಕು ಹಾಕಿದರು.

ಅಂಬೇಡ್ಕರರ ಬೌದ್ಧ ಧರ್ಮ ಸ್ವೀಕಾರದ ಹಿನ್ನೆಲೆ ವಿವರಿಸುತ್ತಾ ನಾನು ಹಿಂದೂವಾಗಿ ಹುಟ್ಟಿದ್ದೇನೆ, ಆದರೆ ಹಿಂದೂವಾಗಿ ಸಾಯಲಾರೆ ಎಂಬ ಅಂಬೇಡ್ಕರ್ ಅವರ ಪ್ರತಿಜ್ಞೆಯ ಹಿಂದಿದ್ದ ಸಾಮಾಜಿಕ ನೋವು ಮತ್ತು ಬೌದ್ಧ ಧರ್ಮದ ಮೂಲಕ ಅವರು ಕಂಡು ಕೊಂಡ ಶಾಂತಿ ಹಾಗೂ ಸಮಾನತೆಯ ಹಾದಿಯನ್ನು ವಿವರಿಸಿದರು. ಅಲ್ಲದೆ ಮಹಿಳಾ ಹಕ್ಕುಗಳ ಹೋರಾಟಕ್ಕಾಗಿ 1928ರಲ್ಲಿಯೇ ಮಹಿಳೆಯರಿಗೆ ಹೆರಿಗೆ ರಜೆಯ ಸೌಲಭ್ಯ ದೊರೆಯಬೇಕು ಎಂದು ಬಾಬಾಸಾಹೇಬರು ನಡೆಸಿದ ಹೋರಾಟ ಇಂದಿಗೂ ಪ್ರಸ್ತುತವಾಗಿದೆ. ಅಂಬೇಡ್ಕರ್ ಅವರು ಕೇವಲ ಒಂದು ಸಮುದಾಯಕ್ಕೆ ಸೀಮಿತವಾದವರಲ್ಲ, ಅವರು ಇಡೀ ದೇಶದ ಆಸ್ತಿ. ಶಿಕ್ಷಣ, ಸಂಘಟನೆ ಮತ್ತು ಹೋರಾಟದ ಮೂಲಕ ಅವರು ಸಮಾಜಕ್ಕೆ ನೀಡಿದ ಸಂದೇಶ ಇಂದಿನ ಯುವ ಪೀಳಿಗೆಗೆ ಅತ್ಯಂತ ಅವಶ್ಯಕವಾಗಿದೆ ಎಂದು ತಿಳಿಸಿದರು. ಅಲ್ಲದೆ ಶಿಕ್ಷಣವೆಂಬುದು ಹುಲಿಯ ಹಾಲಿದ್ದಂತೆ ಅದನ್ನು ಕುಡಿದವರು ಗರ್ಜಿಸಲೇಬೇಕು ಎಂದು ಅಂಬೇಡ್ಕರ್ ಹೇಳಿದ ಮಾತನ್ನು ನೆನಪಿಸಿದರು.

ಎಸ್‌ಸಿ ಮತ್ತು ಎಸ್‌ಟಿ ಸಮು ದಾಯದ ನೂರಾರು ಜಾತಿಗಳು ಇಂದಿಗೂ ಮೂಲಭೂತ ಸೌಕರ್ಯಗಳಿಂದ ವಂಚಿತವಾಗಿರುವುದನ್ನು ಪ್ರಸ್ತಾಪಿಸಿದ ಅವರು, ಸರ್ಕಾರಗಳು ಕೇವಲ ಯೋಜನೆಗಳನ್ನು ರೂಪಿಸಿದರೆ ಸಾಲದು, ಅವು ಕಟ್ಟಕಡೆಯ ವ್ಯಕ್ತಿಗೂ ತಲುಪಬೇಕು ಎಂದರು.

ನಂತರ ಮಾತನಾಡಿದ ಪಿ.ಐ ವಿ.ನಾರಾಯಣರವರು, ಅಂಬೇಡ್ಕರ್ ರವರಿಗೆ ಭಾರತ ಸರ್ಕಾರವು ಸಂವಿಧಾನ ನಿರ್ಮಿಸಲು, ಘೋಷಣೆ ಮಾಡಲು ಜವಾಬ್ದಾರಿ ಕೊಟ್ಟಾಗ ಭಾರತ ಸರ್ಕಾರ ಒಂದು ಕೋಟಿ ರೂಪಾಯಿಗಳನ್ನ ನೀಡುತ್ತದೆ, ಇದನ್ನು ತಗೊಂಡು 68 ರಾಷ್ಟ್ರಗಳಿಗೆ ತೆರಳಿ ಸಂಶೋಧಿಸಿ ಬಂದಾಗ ಅವರು ಮಾಡಿದ ಖರ್ಚಿನ ವೆಚ್ಚವು 64 ಲಕ್ಷ ರೂಪಾಯಿ ಆಯಿತು. ಬಾಕಿ ಉಳಿದ 36 ಲಕ್ಷ ಹಣವನ್ನು ಮರಳಿ ಭಾರತ ಸರ್ಕಾರಕ್ಕೆ ಒಪ್ಪಿಸಿದ ನಿಷ್ಠಾವಂತ ಮಹಾನ್ ವ್ಯಕ್ತಿ ಡಾ. ಬಾಬಾ ಸಾಹೇಬ್ ಅಂಬೇಡ್ಕರ ಎಂದರು. ಇಂತಹ ಮಹಾನ್ ವ್ಯಕ್ತಿಯ ಜಯಂತಿ ಯನ್ನು ಆಚರಿಸುವುದರ ಜೊತೆಗೆ ಅವರ ತತ್ವಗಳನ್ನು ಅನುಸರಿಸಿದಾಗ ಮಾತ್ರ ನಿಜವಾಗಲೂ ಅಂಬೇಡ್ಕರ್ ಅವರಿಗೆ ಗೌರವ ಸಲ್ಲಿಸಿದಂತಾಗುತ್ತದೆ ಎಂದರು.

ರಾಷ್ಟ್ರೀಯ ಹಬ್ಬಗಳ ಆಚರಣೆ ಸಮಿತಿ ಅಧ್ಯಕ್ಷರಾದ ತಶೀಲ್ದಾರ್ ವಿಶ್ವನಾಥ್ ಮುರುಡಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ, ಮಾತನಾಡಿದರು. ಗೊಲಗೆರಪ್ಪ ಸರಕಾರಿ ಕಿರಿಯ ಪ್ರಾಥಮಿಕ ಶಾಲೆಯ ಶಿಕ್ಷಕಿ ದೀಪ, ಕಾರ್ಯಕ್ರಮದ ನಿರೂಪಣೆ ಮಾಡಿದರು.

ತಹಶೀಲ್ದಾರ್ ವಿಶ್ವನಾಥ ಮುರಡಿ, ತಾಲೂಕು ಪಂಚಾಯತ್ ಇಒ ಕೆ. ರಾಜಶೇಖರ್, ಪೊಲೀಸ್ ನಿರೀಕ್ಷಕ ಎ. ನಾರಾಯಣ, ಸಿಡಿಪಿಒ ಅಧಿಕಾರಿ ವಿರುಪಾಕ್ಷಿ, ಪಟ್ಟಣ ಪಂಚಾಯತ್ ಮುಖ್ಯಾಧಿಕಾರಿ ಲಕ್ಷ್ಮಣ ಕಟ್ಟಿಮನಿ, ಉಪಾಧ್ಯಕ್ಷ ಕಂಠೀರಂಗಪ್ಪ ನಾಯಕ್, ಸರ್ವ ಸದಸ್ಯರು ಹಾಗೂ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕ ಡಾ. ಹುಲುಗಪ್ಪ ಹೆಚ್. ಸೇರಿದಂತೆ ಅಧಿಕಾರಿ ವರ್ಗದವರು ಮತ್ತು ದಲಿತ ಸಂಘದ ಮುಖಂಡರು, ಸಾರ್ವಜನಿಕರು ಭಾಗವಹಿಸಿದ್ದರು.

# ಪುಸ್ತಕಗಳೊಂದಿಗೆ ಗೆಳೆತನ ಮಾಡಿ : ಮೌನೇಶ್ ಬಡಿಗೇರ

■ ಕನ್ನಡ ಮಾತೃ ಭೂಮಿ ವಾರ್ತೆ

**ಸುರಪುರ,ಏ.14-** ಸುರಪುರ ನಗರದ ಕುಂಬಾರಪೇಟೆದಲ್ಲಿರುವ ಶ್ರೀ ಗುರು ಪೀಠ ಪೂರ್ವ ಪ್ರಾಥಮಿಕ ಆಂಗ್ಲ ಮಾಧ್ಯಮ ಶಾಲೆಯಲ್ಲಿ ಭಾರತ ರತ್ನ ಸಂವಿಧಾನಶಿಲ್ಪಿ ಸಮಾನತೆಯ ಹರಿಕಾರ ಡಾ:ಬಿಆರ್ ಅಂಬೇಡ್ಕರ್ ಅವರ 135 ನೇ ಜಯಂತಿ ಕಾರ್ಯಕ್ರಮ ಅದ್ದೂರಿಯಾಗಿ ನಡೆಯಿತು.

ಮೊದಲಿಗೆ ಡಾ. ಬಿಆರ್ ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಪುಷ್ಪ ನಮನವನ್ನು ಸಂಸ್ಥೆಯ ಕಾರ್ಯದರ್ಶಿಗಳಾದ ಮಹೇಶ್ ಕುಂಬಾರ್ ಪೂಜೆ ಸಲ್ಲಿಸಿದರು. ಮುಖ್ಯ ಅತಿಥಿಗಳಾಗಿ ರಾಮನಗೌಡ ದದ್ದಲ್ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ಮಾತನಾಡಿ ಮಕ್ಕಳು ಡಾ. ಬಿಆರ್ ಅಂಬೇಡ್ಕರ್ ಅವರ ಆದರ್ಶ ಜೀವನವನ್ನು ಪಾಲಿಸಬೇಕು.

ಅಂಬೇಡ್ಕರ್ ಅವರು ಬಾಲ್ಯದಲ್ಲಿ ತಮಗೆ ಆದ ಅವಮಾನವನ್ನು ಎದುರಿಸಿ ಒಳ್ಳೆಯ ಅಭ್ಯಾಸವನ್ನು ಮಾಡಿ ಪ್ರಪಂಚವನ್ನ ಗುರುತಿಸುವಂತಹ ವ್ಯಕ್ತಿಯಾಗಿರುತ್ತಾರೆ. ಅಸ್ಪೃಶ್ಯತೆಯನ್ನು ವಿರುದ್ಧ ಹೋರಾಡಿ ಸಮಾನ ಅವಕಾಶವನ್ನು ಕಲ್ಪಿಸಲು ಸಂವಿಧಾನದ ಮೀಸಲಾತಿ ನೀಡಿದರು ಜೀವನ ಬಗ್ಗೆ ವಿವರವಾಗಿ ಮಕ್ಕಳಿಗೆ ತಿಳಿಸಿದರು. ಇನ್ನೋರ್ವ ಮುಖ್ಯ ಅತಿಥಿಗಳಾದ ಮೌನೇಶ್ ಬಡಿಗೇರ್ ಮಾತನಾಡಿ ಮಕ್ಕಳು ಪುಸ್ತಕಗಳ ಜೊತೆ ಗೆಳೆತನ ಮಾಡಬೇಕು.

ಎಷ್ಟು ಅಭ್ಯಾಸ ಮಾಡುತ್ತೀರಿ ನಿಮ್ಮನ್ನು ತಲೆಯೆತ್ತಿ ನೋಡುವಂತೆ ಪುಸ್ತಕಗಳು ಮಾಡುತ್ತವೆ ಅಂದು ಅಂಬೇಡ್ಕರ್ ಕೂಡ ದೀರ್ಘವಾಗಿ ಅಭ್ಯಾಸ ಮಾಡಿ ಪ್ರಪಂಚ ಸಂವಿಧಾನಗಳನ್ನು ಅಭ್ಯಾಸ ಮಾಡಿ ನಮ್ಮ ದೇಶದ ಸಂವಿಧಾನವನ್ನು ರಚನೆ ಮಾಡಿದರು. ಇಡೀ ವಿಶ್ವಕ್ಕೆ ಗಣ್ಯ ವ್ಯಕ್ತಿಯಾಗಿ ಹೊರಹೊಮ್ಮಿದ್ದು ಪುಸ್ತಕಗಳಿಂದ ಎಂದು ತಿಳಿದರು. ಈ ಕಾರ್ಯಕ್ರಮದಲ್ಲಿ ಸಂಸ್ಥೆಯ ಅಧ್ಯಕ್ಷರಾದ ರುದ್ರಪ್ಪ ದಿನ್ನಿಬಾವಿ, ಮಹೇಶನ ಕುಂಬಾರ್ ರಾಮನಗೌಡ ಗದ್ದಲ್ ಮೌನೇಶ್ ಬಡಿಗೇರ್. ಸಿದ್ದರಾಮ್ ಬೇವಿನಮಟ್ಟಿ, ವಿನೋದ ಲಕ್ಷ್ಮಿ ದಿನ್ನಿ ಬಾವಿ, ಅನಿತಾ ಮುದ್ದು ಮಕ್ಕಳು ಉಪಸ್ಥಿತರಿದ್ದರು.

# ...ಮೊದಲನೇ ಪುಟದಿಂದ

## ಬಾಬು ಜಗಜೀವನರಾಮ ಜಯಂತಿ ಅಭೂತಪೂರ್ವ ಯಶಸ್ವಿ-ಪಿ.ಪವನಕುಮಾರ

ಮಹಿಳೆಯರು, ಪೊಲೀಸ್ ಸಿಬ್ಬಂದಿ, ಮತ್ತು ಸಂಚಾರಿ ಪೊಲೀಸ್ ಸಿಬ್ಬಂದಿ ಈ ಕಾರ್ಯಕ್ರಮವನ್ನು ಯಶಸ್ವಿಗೊಳಿಸಲು ಹಗಲು ಇರುಳು ಶ್ರಮಿಸಿದ ಎಲ್ಲರಿಗೂ ಕಾರ್ಯಕ್ರಮದ ನೇತೃತ್ವ ವಹಿಸಿದ ಪಿ. ಪವನ್‌ಕುಮಾರ್ ಅವರು ಹೃದಯ ಪೂರ್ವಕ ಧನ್ಯವಾದ ತಿಳಿಸಿದ್ದಾರೆ. ವಿಶೇಷವಾಗಿ ಹರಿಜನವಾಡ ಸಹಸ್ರರಾರು ಯುವಕರು, ಕುಣಿದು ಕುಪ್ಪಲಿಸಿ ವಿಜೃಂಭಣೆಯಿಂದ ಮೆರವಣಿಗೆ ಕಾರ್ಯಕ್ರಮದಲ್ಲಿ ಪಾಲ್ಗೊಂಡು, ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದ ಎಲ್ಲರಿಗೂ ಸದಾ ಚಿರಋಣಿಯಾಗಿರುವೆ ಎಂದು ತಿಳಿಸಿದ್ದಾರೆ.

## ಜನನ ಮರಣ ಪ್ರಮಾಣ ಪತ್ರ ಶುಲ್ಕ ಹೆಚ್ಚಳ ವಿರೋಧಿಸಿ ಸ್ವಾಭಿಮಾನಿ ರಕ್ಷಣಾವೇದಿಕೆ ಪ್ರತಿಭಟನೆ

ಜ.8ರಂದು ಮಹಬೂಬ್ ಪಾಶಾ ಹೆಸರಿನಲ್ಲಿ ಕೋರ್ಟ್ ಆದೇಶದ ಪ್ರಕಾರ ಸಲ್ಲಿಸಿದ ಜನನ ಪ್ರಮಾಣಪತ್ರ ಅರ್ಜಿಯಲ್ಲಿ ತಪ್ಪು ದಾಖಲೆಗಳನ್ನು ನಮೂದಿಸಿ ಪ್ರಮಾಣಪತ್ರ ನೀಡಲಾಗಿದ್ದು, ನಂತರ ತಿದ್ದುಪಡಿಗಾಗಿ ಮತ್ತೆ ಅರ್ಜಿ ಸಲ್ಲಿಸಿದರೂ ಸಹ ಮತ್ತೆ ಮತ್ತೆ ತಪ್ಪುಗಳನ್ನು ಮಾಡಲಾಗಿದೆ. ಪ್ರತಿ ಬಾರಿ ತಿದ್ದುಪಡಿ ಹೆಸರಿನಲ್ಲಿ ಶುಲ್ಕ ವಸೂಲಿ ಮಾಡಲಾಗುತ್ತಿದ್ದು, ಸಾರ್ವಜನಿಕರಿಂದ ಹಣ ಸುಲಿಗೆ ಮಾಡುತ್ತಿರುವುದು ಖಂಡನೀಯ ಎಂದು ದೂರಲಾಗಿದೆ.

ಇದೇ ರೀತಿ ಅನೇಕ ಸಾರ್ವಜನಿಕರಿಗೆ ಉದ್ದೇಶಪೂರ್ವಕವಾಗಿ ತಪ್ಪು ದಾಖಲೆಗಳನ್ನು ನಮೂದಿಸಿ ನಂತರ ತಿದ್ದುಪಡಿ ಹೆಸರಿನಲ್ಲಿ ಹಣ ವಸೂಲಿ ಮಾಡಲಾಗುತ್ತಿದೆ ಎಂದು ಆರೋಪಿಸಲಾಗಿದೆ. ದಾಖಲೆಗಳಿಲ್ಲದಿದ್ದಲ್ಲಿ ರೂ.500 ರಿಂದ 1000 ವರೆಗೆ ಲಂಚ ಪಡೆದು ಯಾವುದೇ ಪರಿಶೀಲನೆ ಇಲ್ಲದೇ ಪ್ರಮಾಣಪತ್ರ ನೀಡಲಾಗುತ್ತಿದೆ ಎಂದು ಮನವಿಯಲ್ಲಿ ಗಂಭೀರವಾಗಿ ಆರೋಪಿಸಿದರು.

ಈ ಹಿಂದೆ ಈ ಸಮಸ್ಯೆಗಳ ಬಗ್ಗೆ ಮಹಾನಗರ ಪಾಲಿಕೆಯ ಉಪ ಆಯುಕ್ತರಾದ ಸಂತೋಷ ರಾಣಿ ಅವರ ಗಮನಕ್ಕೆ ತಂದರೂ ಸಹ ಸಮರ್ಪಕ ಕ್ರಮ ಕೈಗೊಳ್ಳದೇ ನಿರ್ಲಕ್ಷ್ಯ ತೋರಿದ್ದಾರೆ. ಅಲ್ಲದೆ, ಅವರ ಮೇಲೆ ಹಿಂದಿನ ಸೇವಾ ಅವಧಿಯಲ್ಲಿ ಲಂಚದ ಆರೋಪಗಳಿದ್ದು, ಈ ಸಂಬಂಧ ಸರ್ಕಾರದಿಂದ ವರ್ಗಾವಣೆ ಆದೇಶವೂ ಜಾರಿಯಾಗಿದೆ ಎಂದು ಮನವಿಯಲ್ಲಿ ಉಲ್ಲೇಖಿಸಿದ್ದಾರೆ.

ಜನನ ಮತ್ತು ಮರಣ ನೋಂದಣಿ ವಿಭಾಗದ ಹಿರಿಯ ನಿರೀಕ್ಷಕರಾದ ಅಮರೇಶ, ಪೃಥ್ವಿ (ಸಾಂಬಾ) ಹಾಗೂ ಡಾಟಾ ಎಂಟ್ರಿ ಆಪರೇಟರ್‌ಗಳಾದ ಜಯಶ್ರೀ, ಆಷಿಯಾ ಮತ್ತು ವೀರೇಶ ಇವರ ವಿರುದ್ಧ ಸಾರ್ವಜನಿಕರಿಂದ ಹೆಚ್ಚುವರಿ ಹಣ ವಸೂಲಿ ಮಾಡುತ್ತಿರುವ ಆರೋಪಗಳನ್ನೂ ಮಾಡಲಾಗಿದೆ. ಆದ್ದರಿಂದ, ಈ ವಿಷಯವನ್ನು ಗಂಭೀರವಾಗಿ ಪರಿಶೀಲಿಸಿ, ಮಹಾನಗರ ಪಾಲಿಕೆಯಲ್ಲಿ ನಡೆಯುತ್ತಿರುವ ಭ್ರಷ್ಟಾಚಾರವನ್ನು ತಕ್ಷಣ ನಿಲ್ಲಿಸಲು ಕ್ರಮ ಕೈಗೊಳ್ಳಬೇಕು. ಸಂಬಂಧಪಟ್ಟ ಸಿಬ್ಬಂದಿಗಳನ್ನು ವರ್ಗಾವಣೆ ಮಾಡಬೇಕು ಹಾಗೂ ಅಧಿಕ ಹಣ ವಸೂಲಿ ಮಾಡುತ್ತಿರುವವರ ವಿರುದ್ಧ ಶಿಸ್ತು ಕ್ರಮ ಜರುಗಿಸಬೇಕೆಂದು ಆಗ್ರಹಿಸಿದರು.

ಈ ಸಂದರ್ಭದಲ್ಲಿ ಸಂಘಟನೆಯ ಪ್ರಮುಖರಾದ ಖಲೀಲ್ ಪಾಷಾ, ರಾಚಯ್ಯ ಸ್ವಾಮಿ, ಬಂದೇನವಾಜ್, ಜಾಫರ್, ಸೈಯದ್ ಮನ್ಸೂರ್, ಮನ್ನಾನ್, ಫಾರೂಕ್, ತಾಹೇರ್, ಸುದರ್ಶನರೆಡ್ಡಿ, ಈರಣ್ಣ, ಅಬ್ದುಲ್ ಹಬೀಬ್, ಮೌಲಾ, ಬಾಬು, ಗುರು, ಪಾಂಡುರಂಗ, ಮಹೆಬೂಬ್, ಹುಸೇನ್, ಬಾಬಾಫಕ್ರುದ್ದಿನ್, ಆನಂದ, ಶಕ್ಷಾವಲಿ, ಸೈಯದ್ ಮಹೆಬೂಬ್, ಸಾದೀಕ್, ನಿಸಾರ್ ಸೇರಿದಂತೆ ಅನೇಕರಿದ್ದರು.

## ಯಶೋಧ ಆಸ್ಪತ್ರೆ ಸಹಯೋಗದಲ್ಲಿ ಯಶಸ್ವಿ ಚಿಕಿತ್ಸೆ-ಡಾ.ಅಜಿತ್‌ಕುಲ್ಕರ್ಣಿ

ಚಿಕಿತ್ಸೆಗೆ ಒದಗಿಸಿದೆ. ಸಾರ್ವಜನಿಕರು ಯಕ್ಮೋ ಚಿಕಿತ್ಸೆ ಅವಶ್ಯಕತೆಯಿದ್ದಲ್ಲಿ ಪಡೆಯಲುಸಾಧ್ಯವಾಗಿದೆ. ಎಲ್ಲರಿಗೂ ಯಕ್ಮೋ ಚಿಕಿತ್ಸೆ ಒದಗಿಸಲು ಆಗುವದಿಲ್ಲವಾದರೂ ಅಗತ್ಯವಿರುವವರ ಜೀವ ರಕ್ಷಣೆಗೆ ಸಹಕಾರಿಯಾಗಿದೆ ಎಂದರು.

ಹೈದ್ರಾಬಾದ ಯಶೋಧ ಆಸ್ಪತ್ರೆಯ ನಿರ್ದೇಶಕ ಡಾ.ಭರತ್ ವಿಜಯ ಪುರೋಹಿತ ಮಾತನಾಡಿ ಹೃದಯ ಸಂಬಂಧಿತ ರೋಗಳಿಗೆ ಲಭ್ಯವಿರವ ಔಷಧಿ, ಶಸ್ತ್ರ ಚಿಕಿತ್ಸೆ ಯೊಂದಿಗೆ ನವೀನ ತಂತ್ರಜ್ಞಾನ ಯಕ್ಮೋ ಚಿಕಿತ್ಸೆಯಿಂದ ರೋಗಿ ಜೀವ ಉಳಿಸಲು ಸಹಕಾರಿಯಾಗುತ್ತದೆ. ಕೃತಕ ಉಸಿರಾಟ, ರಕ್ತದೊತ್ತಡ ಸೇರಿ ಇತರೆ ಸಮಸ್ಯೆ ಎದುರಿಸುತ್ತಿರುವ ರೋಗಿಯ ದೇಹ ನಿಯಂತ್ರಣದಲ್ಲಿಡಲು ಯಕ್ಮೋ ಚಿಕಿತ್ಸೆ ಅವಶ್ಯಕ, ಯಶಸ್ವಿ ಪ್ರಯತ್ನವಾಗಿದೆ ಎಂದರು. ಸಮಯ ಹಾಗೂ ರೋಗಿಯ ಸಾಗಾಣೆ ಸಮಸ್ಯೆಯನ್ನು ನೀಗಿಸಲು ಯಕ್ಮೋ ಚಿಕಿತ್ಸೆ ಅಗತ್ಯವಾಗಿದೆ. ಹೈದ್ರಾಬಾದ, ಮುಂಬಯಿ ಸೇರಿದಂತೆ ಮೆಟ್ರೋ ನಗರಗಳಲ್ಲಿ ದೊರೆಯುತ್ತಿದ್ದ ಯಕ್ಮೋ ಚಿಕಿತ್ಸೆ ಜಿಲ್ಲಾ ಮತ್ತು ತಾಲೂಕ ಮಟ್ಟದಲ್ಲಿಯೂ ದೊರೆಯುವಂತಾಗಿದೆ.

ಯಶೋಧ ಆಸ್ಪತ್ರೆಯ ವೈದ್ಯ ಡಾ.ವೆಂಕಟರಮಣ ಮಾತನಾಡಿ ಕಳೆದ ಮೂರು ದಶಕಗಳಿಂದ ಗುಣಮಟ್ಟ ಚಿಕಿತ್ಸೆ ಒದಗಿಸುತ್ತಾ ಬಂದಿರುವ ಯಶೋಧಾ ಆಸ್ಪತ್ರೆ ಜಗತ್ತಿನ ಗುಣಮಟ್ಟ ಚಿಕಿತ್ಸೆಗೆ ಪ್ಲಾಟಿನಂ ಸೆಂಟರ್ ಎಂಬ ಪ್ರಶಸ್ತಿಗೆ ಬಾಜನವಾಗಿದೆ. ಅಮೆರಿಕಾ ಸೇರಿದಂತೆ ಯಾವುದೇ ದೇಶದಲ್ಲಿ ದೊರೆಯುವ ಚಿಕಿತ್ಸೆ ಗುಣಮಟ್ಟವನ್ನು ಯಶೋಧ ಆಸ್ಪತ್ರೆ ಒದಗಿಸುತ್ತಾ ಬಂದಿದೆ. ಹೃದಯ ಸಂಬಂಧಿ ರೋಗಗಳು ಹೆಚ್ಚಳವಾಗುತ್ತಿರುವದು ಕಳವಳಕಾರಿ. ಆರೋಗ್ಯ ರಕ್ಷಣೆಗೆ ಅತ್ಯಾಧುನಿಕ ಚಿಕಿತ್ಸಾ ವ್ಯವಸ್ಥೆಯನ್ನು ಯಶೋಧಾ ಆಸ್ಪತ್ರೆ ಅಳವಡಿಸಿಕೊಂಡಿದೆ. ಯಕ್ಮೋ ಚಿಕಿತ್ಸೆ ಆರ್ಟಿಫಿಸಿಯಲ್ ಆಗಿ ರೋಗಿಯ ಜೀವ ರಕ್ಷಣೆಗೆ ಸಾಧನೆಯಾಗಿದೆ. ಜೀವ ಉಳಿಸಲು ಸಮಯ, ವೈದ್ಯರ ನಿರ್ಧಾರದ ಮೇಲೆ ಅವಲಂಬಿತವಾಗಿದೆ. ಸಕಾಲದಲ್ಲಿ ಚಿಕಿತ್ಸೆ ದೊರೆತರೆ ರೋಗಿ ಉಳಿಸಲು ಸಾಧ್ಯವಿದ್ದು ಸಾರ್ವಜನಿಕರು ಸದುಪಯೋಗ ಪಡೆಯಬೇಕೆಂದರು. ಈ ಸಂದರ್ಬದಲ್ಲಿ ಚಿಕಿತ್ಸೆಗೆ ಒಳಗಾದ ಸುರೇಂದ್ರ, ಗೌತಮ ಚಂದ್ ಗಿನಿಯಾ ಸೇರಿ ಹಲವರಿದ್ದರು.

## ಹೆಚ್ಚುತ್ತಿರುವ ಬಿಸಿಲು: ಸಿಂಗ್ನಲ್‌ಗಳಲ್ಲಿ ನೆರಳಿನ ವ್ಯವಸ್ಥೆಗೆ ಎಐಡಿವೈಓ ಒತ್ತಾಯ

ದ್ದು, ಸಂಜೆ 4:30 ಆದರೂ ಬಿಸಿಲಿನ ತಾಪಮಾನ ಕಡಿಮೆಯಾಗುತ್ತಿಲ್ಲ. ಟ್ರಾಫಿಕ್ ಸಿಗ್ನಲ್‌ಗಳಲ್ಲಿ ನಿಂತುಕೊಳ್ಳುವ ದ್ವಿಚಕ್ರ ವಾಹನ ಸವಾರರು, ಪಾದಚಾರಿಗಳು ಹಾಗೂ ವೃದ್ಧರು ಹೆಚ್ಚಿನ ಕಷ್ಟ ಅನುಭವಿಸುತ್ತಿದ್ದಾರೆ. ಬಿಸಿಲಿನ ಪರಿಣಾಮವಾಗಿ ದೇಹದ ಅಸ್ವಸ್ಥತೆ, ತಲೆ ಸುತ್ತುವುದು, ದಾಹ ಸೇರಿದಂತೆ ಆರೋಗ್ಯ ಸಮಸ್ಯೆಗಳು ಹೆಚ್ಚುತ್ತಿರುವುದು ಕಂಡುಬರುತ್ತಿದೆ ಎಂದರು.

ನಗರದಲ್ಲಿನ ಎಲ್ಲಾ ಪ್ರಮುಖ ಟ್ರಾಫಿಕ್ ಸಿಗ್ನಲ್‌ಗಳಲ್ಲಿ ತಾತ್ಕಾಲಿಕ ಅಥವಾ ಶಾಶ್ವತ ನೆರಳಿನ ವ್ಯವಸ್ಥೆ (ಶೆಡ್‌ಗಳು/ಷೆಲ್ಟರ್‌ಗಳು) ಕಲ್ಪಿಸುವುದು ಅಗತ್ಯವಾಗಿದೆ. ಜಿಲ್ಲೆಯಲ್ಲಿ ಇನ್ನೂ ಒಂದೂವರೆ ತಿಂಗಳ ಕಾಲ ಬಿಸಿಲಿನ ತೀವ್ರತೆ ಮುಂದುವರೆಯಲಿದ್ದು, ಮುಂದಿನ ಒಂದು ವಾರದಲ್ಲಿ 42 ರಿಂದ 43 ಡಿಗ್ರಿ ತಾಪಮಾನ ದಾಖಲಾಗುವ ಸಾಧ್ಯತೆ ಇದೆ ಎಂದು ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರದ ಅಧಿಕಾರಿಗಳು ತಿಳಿಸಿದ್ದಾರೆ.

ಇದೇ ವೇಳೆ, ಮಹಾನಗರ ಪಾಲಿಕೆಯು ಕಳೆದ ವರ್ಷ ಕೆಲವು ಸ್ಥಳಗಳಲ್ಲಿ ಅಮೃತ ನೆರಳು ಕೇಂದ್ರಗಳನ್ನು ಸ್ಥಾಪಿಸಿರುವುದು ಸ್ವಾಗತಾರ್ಹವಾದರೂ, ಅವು ಸೀಮಿತ ವೃತ್ತಗಳಿಗೆ ಮಾತ್ರ ಸೀಮಿತವಾಗಿವೆ. ಆದ್ದರಿಂದ ಅವುಗಳನ್ನು ಇನ್ನಷ್ಟು ವಿಸ್ತರಿಸಬೇಕು, ತಣ್ಣನೆಯ ಕುಡಿಯುವ ನೀರಿನ ಸೌಲಭ್ಯವನ್ನು ನಿರಂತರವಾಗಿ ಒದಗಿಸಬೇಕು ಹಾಗೂ ಬಿಸಿಲಿನ ತಾಪಮಾನವನ್ನು ಕಡಿಮೆ ಮಾಡಲು ರಸ್ತೆಗಳಲ್ಲಿ ನೀರು ಸಿಂಪಡಿಸುವ ಕ್ರಮ ಕೈಗೊಳ್ಳಬೇಕು ಎಂದು ಸಂಘಟನೆ ಆಗ್ರಹಿಸಿತು.

ಈ ಸಂದರ್ಭದಲ್ಲಿ ಸಂಘಟನೆಯ ಜಿಲ್ಲಾಧ್ಯಕ್ಷರಾದ ಚನ್ನಬಸವ ಜಾನೇಕಲ್, ಜಿಲ್ಲಾ ಕಾರ್ಯದರ್ಶಿ ವಿನೋದ್ ಕುಮಾರ್ ಸಂಘಟನೆಯ ಪದಾಧಿಕಾರಿಗಳಾದ , ಮೌನೇಶ್, ನೂರ್ ಪಾಶಾ, ಅಶೋಕ್, ಹಿರಿಯ ನಾಗರಿಕರಾದ ವೀರೇಶ್ ಬಾಬು, ವೀರಭದ್ರಯ್ಯ ಸ್ವಾಮಿ, ಮಹೇಂದ್ರ ಸಿಂಗ್, ರುದ್ರಯ್ಯ ಗುಣಾರಿ, ಅಣ್ಣಪ್ಪ, ತಾಯಪ್ಪ ಇತರರು ಇದ್ದರು.

## ನೌಕರರ ಬೇಡಿಕೆಗಳಿಗೆ ಸ್ಪಂದಿಸದ ಸರ್ಕಾರ: ಪಂಚಾಯ್ತಿ ನೌಕರರಿಂದ ಪ್ರತಿಭಟನೆ

ನೀಡುವುದಾಗಿ ತಾವು ನೀಡಿದ ಭರವಸೆ ಸಾಕಾರವಾಗಿಲ್ಲ. ಇಲ್ಲಿವರೆಗೆ ಒಂದೇ ಒಂದು ಬೇಡಿಕೆ ಈಡೇರಿಸದೇ ಇರುವುದು ವಿಷಾದನೀಯ ಎಂದರು.

ಕೂಡಲೇ ರೂ.5000 ಎಲ್ಲ ನೌಕರರಿಗೆ ವೇತನ ಹೆಚ್ಚಳ ಮಾಡಿ ಇಲಾಖೆಯಿಂದ ಆದೇಶ ಹೊರಡಿಸಬೇಕು. ನೌಕರರು ನಿವೃತ್ತಿ/ನಿಧನ ಹೊಂದಿದರೆ ಅವರಿಗೆ ಇಡಗಂಟು ರೂ.6 ಲಕ್ಷ ನೀಡಬೇಕು. ಸೇವಾ ಹಿರಿತನದ ಆಧಾರದಲ್ಲಿ ವೇತನ ನೀಡಬೇಕು. ತಾವು ಭರವಸೆ ನೀಡಿದ ಭಾಗವಾಗಿ ಸ್ವಚ್ಛವಾಹಿನಿ ನೌಕರರ ಸಭೆಯನ್ನು ಮಾಡಿ ಅವರ ಪ್ರಮುಖ ಬೇಡಿಕೆಗಳನ್ನು ಇತ್ಯರ್ಥಪಡಿಸಬೇಕು. ಪ್ರತಿಯೊಂದು ಪಂಚಾಯತಿಗೆ ದ್ವಿತಿಯ ದರ್ಜೆ ಲೆಕ್ಕ ಸಹಾಯಕ ಹುದ್ದೆಗಳನ್ನು ತುಂಬುವುದು. ಕಳೆದ 18-20 ವರ್ಷಗಳಿಂದ ಡಾಟಾ ಎಂಟ್ರಿ ಆಪರೇಟರ್‌ಗಳಾಗಿ ಕೆಲಸ ನಿರ್ವಹಿಸುತ್ತಿರುವ ನೌಕರರಿಗೆ ಅನುಮೋದನೆ ನೀಡಬೇಕು. 2ನೇ ಡಾಟಾ ಎಂಟ್ರಿ ಆಪರೇಟರ್ ನೇಮಕಾತಿ ಆಗಬೇಕು. ಈಗಾಗಲೆ ಆರೋಗ್ಯದ ಕುರಿತು ಸಿಬ್ಬಂದಿಗಳ ಮಾಹಿತಿಗಾಗಿ ಫಾರ್ಮೆಟ್‌ನಲ್ಲಿ ಗುತ್ತಿಗೆ, ಹೊರಗುತ್ತಿಗೆ, ಗೌರವಧನದ, ಕಾರ್ಮಿಕರ ಮಾಹಿತಿ ನೀಡಲು ತಿಳಿಸಲಾಗಿದೆ. ಆದರೆ ಈ ಫಾರ್ಮೆಟ್‌ನಲ್ಲಿ ಪಂಚಾಯತ ನೌಕರರೆಂದು ಮಾಹಿತಿ ಇಲ್ಲಾ ಇದನ್ನು ಸರಿಪಡಿಸಿ ಕೂಡಲೇ ಕ್ರಮ ಕೈಗೊಳ್ಳಬೇಕು ಎಂದರು.

ಒಂದು ವೇಳೆ ಬೇಡಿಕೆಗಳಿಗೆ ಸ್ಪಂದಿಸದಿದ್ದರೆ ಮುಂದೆ ನಮ್ಮ ಹೋರಾಟ ಬೃಹತ್ ಪ್ರಮಾಣದಲ್ಲಿ ಬೆಂಗಳೂರು ಚಲೋ ಕಾರ್ಯಕ್ರಮ ಹಮ್ಮಿಕೊಳ್ಳಲಾಗುತ್ತಿದ್ದು, ಈ ಹೋರಾಟದಲ್ಲಿ ಏನಾದರೂ ಅನಾಹುತಗಳಾದರೆ ಇದಕ್ಕೆ ನೇರವಾಗಿ ಆರ್‌ಡಿಪಿಆರ್ ಇಲಾಖೆಯೆ ಹೊಣೆ ಆಗುತ್ತದೆ. ದಯವಿಟ್ಟು ಇದಕ್ಕೆ ಆಸ್ಪದ ನೀಡದೇ ಕೂಡಲೆ ತಾವೇ ಒಪ್ಪಿಕೊಂಡ ಈ ಕೆಳಗಿನ ಪ್ರಮುಖ ಬೇಡಿಕೆಗಳನ್ನು ಈಡೇರಿಸಿ ಆದೇಶ ಹೊರಡಿಸಬೇಕೆಂದು ಎಚ್ಚರಿಸಿದರು.

ಈ ಸಂದರ್ಭದಲ್ಲಿ ಗ್ರಾಮ ಪಂಚಾಯತ್ ನೌಕರರ ಸಂಘದ ಜಿಲ್ಲಾಧ್ಯಕ್ಷ ಮಲ್ಲಿಕಾರ್ಜುನ ಮನ್ಸಲಾಪೂರು, ಕಾರ್ಯದರ್ಶಿ ಅಂಜಿನೆಯ್ಯ ಮಾಡಿಗೇರಿ, ಖಜಾಂಚಿ ಪಾಂಡುರಂಗ ನಾಯಕ, ಸಿಐಟಿಯು ಜಿಲ್ಲಾ ಪ್ರಧಾನ ಕಾರ್ಯದರ್ಶಿ ಡಿ.ಎಸ್.ಶರಣಬಸವ, ಗಿರಿಯಪ್ಪ ಪೂಜಾರಿ ಮುಖಂಡರಾದ ಸುರೇಶ್ ದೇವಸೂಗೂರು, ವೀರೇಶ್, ಪಂಚಯ್ಯ ಕರಿಗಾರ, ಅಂಬಣ್ಣನಾಯಕ, ಚಂದು ಮಾನವಿ, ಸುಭಾನ್ ಸಾಬ್, ಶಿವಪ್ಪ ನಾಯಕ, ವೆಂಕಪ್ಪ, ಶರಣಬಸವ, ಷಣ್ಮುಖಪ್ಪ ನಾಯಕ, ಶಿವರಾಜ ಸ್ವಾಮಿ, ಈರಪ್ಪ, ಹೊನ್ನಪ್ಪ ನಾಯಕ, ಶರಣಬಸವ, ಬಸವರಾಜ ಗೌಡ, ಸಗರಪ್ಪ, ರಂಜಾನಸಾಬ್, ಶಿವರಾಜ ನಾಯಕ, ಶರಣಬಸವ ಸೇರಿ ಅನೇಕರಿದ್ದರು.

## ಮುಸ್ಲಿಂ ಸಮುದಾಯವನ್ನು ನಿರ್ಲಕ್ಷ್ಯಿಸಿದರೆ ಕಾಂಗ್ರೆಸ್‌ಗೆ ಅಪಾಯ: ಕರ್ನಾಟಕ ಉಲೇಮಾ ಎಚ್ಚರಿಕೆ



**ಬೆಂಗಳೂರು,ಏ.16-** ದಾವಣಗೆರೆ ದಕ್ಷಿಣ ಕೇತ್ರದ ಉಪಚುನಾವಣೆಯಲ್ಲಿ ಮುಸ್ಲಿಂ ಸಮುದಾಯದ ಅಭ್ಯರ್ಥಿಗೆ ಟಿಕೆಟ್ ನೀಡದಿರುವುದು ಮತ್ತು ಮತದಾನದ ಬೆನ್ನಲ್ಲೇ ಸಮುದಾಯದ ಇಬ್ಬರು ನಾಯಕರಿಗೆ ಕಾಂಗ್ರೆಸ್ ಕೊಕ್ ನೀಡಿರುವ ಬಗ್ಗೆ ಕರ್ನಾಟಕ ಉಲೇಮಾ ಸಂಘಟನೆ ಅಸಮಾಧಾನ ಹೊರಹಾಕಿದೆ.

ಬೆಂಗಳೂರಿನ ಪ್ರೆಸ್ ಕ್ಲಬ್‌ನಲ್ಲಿ ಇಂದು ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಮುಫ್ತಿ ಇಫ್ತಿಕಾರ್ ಖಾಸ್ಮಿ, 2023ರ ವಿಧಾನಸಭೆ ಚುನಾವಣೆಯಲ್ಲಿ ದಾವಣಗೆರೆ ದಕ್ಷಿಣ ಸ್ಥಾನಕ್ಕೆ ಸಮುದಾಯದವರಿಗೆ ಟಿಕೆಟ್ ನೀಡುವಂತೆ ಕಾಂಗ್ರೆಸ್ ನಾಯಕರನ್ನು ಕೇಳಿದ್ದೆವು. ಆದರೆ ಮುಂದೆ ಪರಿಶೀಲಿಸುವುದಾಗಿ ಭರವಸೆ ನೀಡಿದ್ದರು. ಆದರೆ ಈಗ ಹಾಲಿ ಶಾಸಕರ ಮರಣದ ನಂತರ ಅವರ ಮೊಮ್ಮಗನಿಗೆ ಪಕ್ಷ ಟಿಕೆಟ್ ನೀಡಿದೆ. ಅಲ್ಪಸಂಖ್ಯಾತರಲ್ಲಿ ಅರ್ಹ ಅಭ್ಯರ್ಥಿಗಳಿದ್ದರೂ ಒಂದೇ ಕುಟುಂಬಕ್ಕೆ ಏಕೆ ಪದೇ ಪದೇ ಅವಕಾಶಗಳನ್ನು ನೀಡಲಾಗುತ್ತಿದೆ? ಎಂದು ಆಕ್ರೋಶ ಹೊರಹಾಕಿದರು.

ಇದೇ ವೇಳೆ, ಜಬ್ಬಾರ್ ಮತ್ತು ನಸೀರ್ ಅಹಮದ್ ಸೇರಿದಂತೆ ಕೆಲವು ನಾಯಕರ ವಿರುದ್ಧ ಕಾಂಗ್ರೆಸ್ ಶಿಸ್ತು ಕ್ರಮ ಕೈಗೊಂಡಿರುವುದನ್ನು ಖಾಸ್ಮಿ ಪ್ರಶ್ನಿಸಿ, ಯಾವುದೇ ಶೋಕಾಸ್ ನೋಟಿಸ್ ನೀಡದೆ ಕ್ರಮ ಕೈಗೊಂಡಿದ್ದಾರೆ. ಆದರೆ ಬೇರೆಯವರು ಪಕ್ಷದ ವಿರುದ್ಧ ಮಾತನಾಡಿದರೂ ಯಾವುದೇ ಕ್ರಮ ಕೈಗೊಂಡಿಲ್ಲ ಎಂದು ಹೇಳಿದರು.

ಈ ಸುದ್ದಿಗೋಷ್ಠಿಯ ಮೂಲಕ ನಮ್ಮ ಕಳವಳ ವ್ಯಕ್ತಪಡಿಸುತ್ತಿದ್ದೇವೆಯೇ ಹೊರತು ಪಕ್ಷಕ್ಕೆ ಯಾವುದೇ ಬೆದರಿಕೆ ಹಾಕುತ್ತಿಲ್ಲ. ಮುಸ್ಲಿಮರ ಕಳವಳಗಳನ್ನು ಕಾಂಗ್ರೆಸ್ ನಿರ್ಲಕ್ಷಿಸುವುದನ್ನು ಮುಂದುವರಿಸಿದರೆ ಬೆಂಬಲ ಕಳೆದುಕೊಳ್ಳುವ ಅಪಾಯವಿದೆ. ಆಗಿರುವ ತಪ್ಪುಗಳನ್ನು ಸರಿಪಡಿಸದೇ ಇದ್ದರೆ, ಅದರಿಂದ ಪರಿಣಾಮಗಳು ಉಂಟಾಗಲಿವೆ ಎಂದು ಖಾಸ್ಮಿ ಎಚ್ಚರಿಸಿದರು.

ಇದೇ ವೇಳೆ, ದಾವಣಗೆರೆ ಉಪಚುನಾವಣೆಯಲ್ಲಿ ಎದುರಾಳಿ ಸ್ಪರ್ಧಿಗಳನ್ನು ಮುಸ್ಲಿಂ ನಾಯಕರು ಬೆಂಬಲಿಸಿದ್ದಾರೆ ಎಂಬ ಆರೋಪಗಳನ್ನು ನಿರಾಕರಿಸಿ, ಇದಕ್ಕೆ ಯಾವುದೇ ಪುರಾವೆ ಇಲ್ಲ ಎಂದರು.

ಕಾಂಗ್ರೆಸ್ ಮಾತ್ರ ನಮ್ಮ ರಾಜಕೀಯ ಆಯ್ಕೆಯಲ್ಲಟಿ: ಒಂದು ಮಾರ್ಗ ಮುಚ್ಚಿದರೆ, ಇನ್ನೂ ಹಲವು ಮಾರ್ಗಗಳಿವೆ. ಸಮಾಲೋಚನೆಯ ನಂತರ ನಮ್ಮ ಮುಂದಿನ ಹೆಜ್ಜೆಯ ಬಗ್ಗೆ ನಿರ್ಧರಿಸುತ್ತೇವೆ. ಕಾಂಗ್ರೆಸ್ ಮಾತ್ರ ರಾಜಕೀಯ ಆಯ್ಕೆಯಲ್ಲ ಎಂದು ತಿಳಿಸಿದರು.

ಇತ್ತೀಚಿನ ಚುನಾವಣೆಗಳಲ್ಲಿ ಮುಸ್ಲಿಮರು ಒಗ್ಗಟ್ಟಾಗಿ ಕಾಂಗ್ರೆಸ್‌ಗಾಗಿ ಕೆಲಸ ಮಾಡಿದರೂ ಅವರಿಗೆ ಸೂಕ್ತ ಪ್ರಾತಿನಿಧ್ಯ ನೀಡಿಲ್ಲ ಎಂದು ಇದೇ ವೇಳೆ ಮೌಲಾನಾ ಜುಲ್ಫಿಕರ್ ನೂರಿ ಅಸಮಾಧಾನ ವ್ಯಕ್ತಪಡಿಸಿದರು.

ನಾಲ್ಕು ದಶಕಗಳಿಗೂ ಹೆಚ್ಚು ಕಾಲ ಪಕ್ಷಕ್ಕಾಗಿ ಕೆಲಸ ಮಾಡಿದ ವ್ಯಕ್ತಿಗೆ ಟಿಕೆಟ್ ನಿರಾಕರಿಸುವುದು ಸಮುದಾಯದ ಹಕ್ಕನ್ನು ನಿರಾಕರಿಸಿದಂತೆ ಎಂದು ಅಬ್ದುಲ್ ಜಬ್ಬಾರ್ ಅವರನ್ನು ಉಲ್ಲೇಖಿಸಿ ಮಾತನಾಡಿದರು.ಮುಖ್ಯಮಂತ್ರಿ ಸಿದ್ದರಾಮಯ್ಯ, ಪಕ್ಷದ ನಾಯಕರಾದ ಡಿ.ಕೆ. ಶಿವಕುಮಾರ್ ಮತ್ತು ಪರಮೇಶ್ವರ್ ಸೇರಿದಂತೆ ರಾಜ್ಯ ನಾಯಕರು ಸಮುದಾಯದೊಂದಿಗೆ ಚರ್ಚಿಸಿ, ಇತ್ಯರ್ಥಪಡಿಸುವಂತೆ ಒತ್ತಾಯಿಸಿದರು.

ಕಾಂಗ್ರೆಸ್ ನಿರ್ಲಕ್ಷ್ಯ ಮುಂದುವರಿದರೆ ಇತರ ರಾಜ್ಯಗಳಲ್ಲಿರುವಂತೆ ಕರ್ನಾಟಕದಲ್ಲೂ ಹಿನ್ನಡೆ ಎದುರಿಸಬಹುದು ಎಂದು ಮೌಲಾನಾ ಜೈನುಲ್ ಆಬಿದೀನ್ ತಿಳಿಸಿದರು.

## ಕೇಂದ್ರ ಸರ್ಕಾರದ ವೈಫಲ್ಯ ಮರೆ ಮಾಚುವ ಉದ್ದೇಶದಿಂದ ಜನಗಣತಿ ವಿಳಂಬ: ಪ್ರಿಯಾಂಕ್ ಖರ್ಗೆ

**ಬೆಂಗಳೂರು,ಏ.16-**ಕೇಂದ್ರವು ತನ್ನ ಆಡಳಿತದ ನಿಜವಾದ ಸಾಮಾಜಿಕ ಮತ್ತು ಆರ್ಥಿಕ ಪರಿಣಾಮವನ್ನು ಬಹಿರಂಗಪಡಿಸುವುದನ್ನು ತಪ್ಪಿಸಲು ಜನಗಣತಿಯನ್ನು ವಿಳಂಬಗೊಳಿಸಿದೆ ಎಂದು ಐಟಿ-ಬಿಟಿ ಸಚಿವ ಪ್ರಿಯಾಂಕ್ ಖರ್ಗೆ ಬುಧವಾರ ಹೇಳಿದ್ದಾರೆ.



ನವೀಕರಿಸಿದ ದತ್ತಾಂಶವಿಲ್ಲದೆ ಡಿಲಿಮಿಟೇಶನ್ ಮತ್ತು ಮಹಿಳಾ ಮೀಸಲಾತಿ ಮಸೂದೆಯನ್ನು ಮುಂದಿಡುವ ತುರ್ತು ಏನೆಂದು ಪ್ರಶ್ನಿಸಿರುವ ಅವರು, ನ್ಯಾಯಯುತತೆ, ಪಾರದರ್ಶಕತೆ ಮತ್ತು ಸಮತೋಲಿತ ಪ್ರಾತಿನಿಧ್ಯವನ್ನು ಖಚಿತಪಡಿಸಿಕೊಳ್ಳಲು ಹೊಸ ಜನಗಣತಿಯನ್ನು ಆಧರಿಸಿರಬೇಕು ಎಂದು ಅವರು ಹೇಳಿದರು.

2021 ರಲ್ಲಿ ನಡೆಯಬೇಕಿದ್ದ ಜನಗಣತಿಯನ್ನು ಉದ್ದೇಶಪೂರ್ವಕವಾಗಿ ವಿಳಂಬ ಮಾಡಲಾಗಿದೆ ಎಂದು ಅವರು ಹೇಳಿಕೊಂಡರು, ಕಳೆದ ದಶಕದಲ್ಲಿ ಪ್ರಧಾನಿ ನರೇಂದ್ರ ಮೋದಿಯವರ ಆಡಳಿತದ ನಿಜವಾದ ಸಾಮಾಜಿಕ ಮತ್ತು ಆರ್ಥಿಕ ಪರಿಣಾಮವನ್ನು ಇದು ಬಹಿರಂಗಪಡಿಸಬಹುದು ಎಂದು ವಾದಿಸಿದರು. ಕೇಂದ್ರ ಸರ್ಕಾರದ ಆಡಳಿತ ವೈಫಲ್ಯಗಳು ಬಹಿರಂಗಗೊಳ್ಳುತ್ತವೆ, ಅದಕ್ಕಾಗಿಯೇ ಜನಗಣತಿಯನ್ನು ನಡೆಸಲಾಗಿಲ್ಲ ಎಂದು ಅವರು ಆರೋಪಿಸಿದರು.

ವಿಶ್ವಾಸಾರ್ಹ ದತ್ತಾಂಶವಿಲ್ಲದೆ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡಗಳು, ಇತರ ಹಿಂದುಳಿದ ವರ್ಗಗಳು ಮತ್ತು ಇತರ ಸಮುದಾಯಗಳಿಗೆ, ವಿಶೇಷವಾಗಿ ಮಹಿಳೆಯರಿಗೆ ನ್ಯಾಯವನ್ನು ಹೇಗೆ ಒದಗಿಸಬಹುದು ಎಂದು ಖರ್ಗೆ ಪ್ರಶ್ನಿಸಿದರು. ನೀತಿ ನಿರ್ಧಾರಗಳು ದತ್ತಾಂಶ ಆಧಾರಿತವಾಗಿರಬೇಕು.

ಜನಗಣತಿ ಇಲ್ಲದೆ, ಯಾರಿಗೆ ಯಾವ ಪಾಲು ಸಿಗುತ್ತದೆ ಎಂಬುದನ್ನು ನೀವು ಹೇಗೆ ನಿರ್ಧರಿಸುತ್ತೀರಿ? ಅವರು ಹೇಳಿದರು.

ಪಾರದರ್ಶಕತೆಯ ಕೊರತೆಯನ್ನು ಆರೋಪಿಸಿದ ಸಚಿವರು, ಬಿಜೆಪಿ ಸಂಸದರು ಮತ್ತು ಪಾಲುದಾರರಿಗೂ ಪ್ರಸ್ತಾವಿತ ಮಹಿಳಾ ಮೀಸಲಾತಿ ಮಸೂದೆಯ ವಿಷಯಗಳು ಅಥವಾ ಮಿತಿ ವಿಂಗಡಣೆಯ ಚೌಕಟ್ಟಿನ ಬಗ್ಗೆ ತಿಳಿದಿಲ್ಲ ಎಂದು ಹೇಳಿದರು. ಕೇಂದ್ರವು ಮೊದಲು ಕರಡನ್ನು ಸಾರ್ವಜನಿಕ ವಲಯದಲ್ಲಿ ಇಡಬೇಕು ಮತ್ತು ಸಮಾಲೋಚನೆಗಳಿಗೆ ಅವಕಾಶ ನೀಡಬೇಕು ಎಂದು ಸಚಿವರು ಒತ್ತಾಯಿಸಿದರು.

ರಾಜ್ಯಗಳ ಸಮತೋಲನದ ಬಗ್ಗೆ ಕಳವಳ ವ್ಯಕ್ತಪಡಿಸಿದ ಅವರು, ನವೀಕರಿಸಿದ ದತ್ತಾಂಶದ ಮಾಹಿತಿ ಇಲ್ಲದೆ ಕ್ಷೇತ್ರಗಳ ವಿಂಗಡಣೆಯು ಕೆಲವು ಪ್ರದೇಶಗಳ ಪರವಾಗಿ ಸಂಸದೀಯ ಪ್ರಾತಿನಿಧ್ಯವನ್ನು ತಿರುಗಿಸಬಹುದು ಮತ್ತು ದಕ್ಷಿಣ ರಾಜ್ಯಗಳನ್ನು ನಿರ್ಲಕ್ಷ್ಯಗೊಳಿಸಬಹುದು ಎಂದು ಹೇಳಿದ್ದಾರೆ.

## ಮೇ.1ರಿಂದ ಶಿವಮೊಗ್ಗ - ಬೆಂಗಳೂರು ವಿಮಾನ ಹಾರಾಟ ಮುಂದುವರೆಸುವಂತೆ ರಾಜ್ಯ ಸರ್ಕಾರಕ್ಕೆ ಸಂಸದ ರಾಘವೇಂದ್ರ ಒತ್ತಾಯ

**ಶಿವಮೊಗ್ಗ,ಏ.16-**ಮೇ 1ರಿಂದ ಬೆಂಗಳೂರು -ಶಿವಮೊಗ್ಗ-ಬೆಂಗಳೂರು ಇಂಡಿಗೋ ಏರ್ಲೈನ್ಸ್ ವಿಮಾನ ಸೇವೆ ಸ್ಥಗಿತಗೊಳ್ಳದಂತೆ ರಾಜ್ಯ ಸರ್ಕಾರ ತಕ್ಷಣವೇ ಸೂಕ್ತ ಕ್ರಮ ವಹಿಸ ಬೇಕು ಎಂದು ಸಂಸದ ಬಿ.ವೈ.ರಾಘವೇಂದ್ರ ಅವರು ಮೂಲ ಸೌಕರ್ಯ ಅಭಿವೃದ್ಧಿ ಸಚಿವ ಎಂ.ಬಿ.ಪಾಟೀಲ್ ಅವರಿಗೆ ಮನವಿ ಮಾಡಿದ್ದಾರೆ.



ಈ ಕುರಿತಂತೆ ಸಚಿವರಿಗೆ ಪತ್ರ ಬರೆದಿರುವ ಸಂಸದರು, ಯಶಸ್ವಿಯಾಗಿ ನಡೆಯುತ್ತಿರುವ ಬೆಂಗಳೂರು ಮತ್ತು ಶಿವಮೊಗ್ಗ ಮಾರ್ಗದ ವಿಮಾನಯಾನ ಸೇವೆ ಸ್ಥಗಿತಗೊಂಡಲ್ಲಿ ಶಿವಮೊಗ್ಗ, ಹಾವೇರಿ, ದಾವಣಗೆರೆ, ಚಿಕ್ಕಮಗಳೂರು ಮತ್ತು ಉತ್ತರ ಕನ್ನಡ ಜಿಲ್ಲೆಗಳ ಲಕ್ಷಾಂತರ ಜನರಿಗೆ ವಾಯು ಸಂಪರ್ಕದ ಅನುಕೂಲ ತಪ್ಪಲಿದೆ. ಇದು ಮಲೆನಾಡು ಹಾಗೂ ಸುತ್ತಮುತ್ತಲಿನ ಜಿಲ್ಲೆಗಳ ಆರ್ಥಿಕತೆ ಮೇಲೆ ವ್ಯತಿರಿಕ್ತ ಪರಿಣಾಮ ಬೀರಲಿದೆ ಎಂದು ತಿಳಿಸಿದ್ದಾರ್.

ಸುಮಾರು 450 ಕೋಟಿ ರೂ. ವೆಚ್ಚದಲ್ಲಿ ಶಿವಮೊಗ್ಗ ವಿಮಾನ ನಿಲ್ದಾಣ ನಿರ್ಮಿಸಲಾಗಿದೆ. ಲೋಕಾರ್ಪಣೆಗೊಂಡ ನಂತರ, ಎರಡು ವರ್ಷಗಳಿಗಿಂತಲೂ ಕಡಿಮೆ ಅವಧಿಯಲ್ಲಿ 2,400ಕ್ಕೂ ಹೆಚ್ಚು ವಿಮಾನಗಳು ಹಾರಾಟ ನಡೆಸಿವೆ. ನಿಲ್ದಾಣವು 1 ಲಕ್ಷಕ್ಕೂ ಅಧಿಕ ಪ್ರಯಾಣಿಕರಿಗೆ ಸೇವೆ ನೀಡಿದೆ. ಆದರೆ, ಪ್ರಸಕ್ತ ಹೊಸ ಹಾರಾಟ ಕರ್ತವ್ಯ ಸಮಯ ಮಿತಿ ನಿಯಮಗಳಿಂದ ಉಂಟಾಗಿರುವ ಪೈಲಟ್ ಕೊರತೆ ಹಾಗೂ ನವೀಕರಿಸದ ಏರ್ಲೈನ್ ಒಪ್ಪಂದದ ಕಾರಣಗಳನ್ನು ಮುಂದಿಟ್ಟು ಇಂಡಿಗೋ ಸಂಸ್ಥೆ ಈ ಮಾರ್ಗವನ್ನು ಸ್ಥಗಿತಗೊಳಿಸಲು ಮುಂದಾಗಿದೆ. ಕರ್ನಾಟಕ ರಾಜ್ಯ ಕೈಗಾರಿಕಾ ಮತ್ತು ಮೂಲಸೌಕರ್ಯ ಅಭಿವೃದ್ಧಿ ನಿಗಮ ನಿಯಮಿತ ಮತ್ತು ಇಂಡಿಗೋ ನಡುವಿನ ಮೂಲ ಒಪ್ಪಂದ ಆಗಸ್ಟ್ 2025ರಲ್ಲಿ ಮುಕ್ತಾಯವಾಗಿದ್ದು, ನಂತರವೂ ಕೂಡ ಇಂಡಿಗೋ ಸಂಸ್ಥೆ 6 ತಿಂಗಳ ಕಾಲ ಈ ಮಾರ್ಗದಲ್ಲಿ ವಿಮಾನಯಾನ ಮುಂದುವರೆಸಿತ್ತು. ಬದಲಾದ ಪರಿಸ್ಥಿತಿಗಳ ಹಿನ್ನೆಲೆಯಲ್ಲಿ, ಜನರ ಅನುಕೂಲದ ದೃಷ್ಟಿಯಿಂದ ರಾಜ್ಯ ಸರ್ಕಾರ ತುರ್ತಾಗಿ ಇಂಡಿಗೋ ಸಂಸ್ಥೆಯವರೊಂದಿಗೆ ಮಾತನಾಡಿ, ಒಪ್ಪಂದ ನವೀಕರಿಸುವ ನಿಟ್ಟಿನಲ್ಲಿ ಅಗತ್ಯ ಕ್ರಮ ತೆಗೆದುಕೊಳ್ಳಬೇಕು ಎಂದು ಸಂಸದರು ಒತ್ತಾಯಿಸಿದ್ದಾರೆ.

ಅಲ್ಲದೇ, ಇಂಧನ ವೆಚ್ಚ ಮತ್ತು ಮಾರ್ಗ ದಟ್ಟಣೆ ಆಧಾರದ ಮೇಲೆ ಹಣಕಾಸು ಬೆಂಬಲ ಒಳಗೊಂಡ ಹೊಸ ಒಪ್ಪಂದ ರೂಪಿಸಬೇಕು. ಕನಿಷ್ಠ ಮುಂದಿನ ಎರಡು ವರ್ಷಗಳ ಅವಧಿಗೆ ಹಾಲಿ ಒಪ್ಪಂದ ನವೀಕರಿಸಬೇಕು. ಒಂದು ವೇಳೆ ಇಂಡಿಗೋ ಸಂಸ್ಥೆ ಹಿಂದೆ ಸರಿದರೆ ಬದಲಿ ಏರ್ಲೈನ್ಸ್ ಸಂಸ್ಥೆಗಳ ಸೇವೆ ನಿಯೋಜಿಸಬೇಕು ಹಾಗೂ ಕೇಂದ್ರ ಸರ್ಕಾರದ ಉಡಾನ್ ಯೋಜನೆಯಡಿ ಹಣಕಾಸು ಹೊರೆ ಕಡಿಮೆ ಮಾಡಿಕೊಳ್ಳುವ ಸಾಧ್ಯತೆಗಳನ್ನು ರಾಜ್ಯ ಸರ್ಕಾರ ಪರಿಶೀಲಿಸಬೇಕು ಎಂದು ಆಗ್ರಹಿಸಿದ್ದಾರೆ.ರಾತ್ರಿ ಇಳಿಯುವಿಕೆ ಸೌಲಭ್ಯಕ್ಕೆ ಶಿವಮೊಗ್ಗ ವಿಮಾನ ನಿಲ್ದಾಣವನ್ನು ಉನ್ನತೀಕರಿಸಲಾಗುತ್ತಿರುವ ಹೊತ್ತಿನಲ್ಲೇ, ವಿಮಾನ ಸೇವೆ ನಿಲ್ಲುವುದು ಸಾರ್ವಜನಿಕರಿಗೆ ಅನುಕೂಲ ತಪ್ಪಿಸಿದಂತಾಗುತ್ತದೆ.

ರಾತ್ರಿ ಲ್ಯಾಂಡಿಂಗ್ ಸೌಲಭ್ಯದ ಸಂಪೂರ್ಣ ಪ್ರಯೋಜನ, ಹೆಚ್ಚಿನ ಸೇವೆಗಳನ್ನು ಜನರಿಗೆ ತಲುಪಿಸುವುದು ರಾಜ್ಯ ಸರ್ಕಾರದ ಜವಾಬ್ದಾರಿಯೂ ಆಗಿದೆ ಮತ್ತು ಹೂಡಿಕೆಗೆ ನ್ಯಾಯ ಒದಗಿಸಿದಂತಾಗುತ್ತದೆ ಎಂದಿದ್ದಾರೆ.

10,000ಕ್ಕೂ ಹೆಚ್ಚು ಕೈಗಾರಿಕೆಗಳು, ಜೋಗ ಜಲಪಾತ ಸೇರಿದಂತೆ ಪ್ರಮುಖ ಪ್ರವಾಸಿ ತಾಣಗಳು, ಮತ್ತು ಔಷಧೀಯ ಸಸ್ಯ, ಕೃಷಿ ಉದ್ಯಮ ಕ್ಷೇತ್ರಗಳನ್ನು ಒಳಗೊಂಡ ಮಲೆನಾಡಿಗೆ ವಾಯು ಸಂಪರ್ಕ ಕೇವಲ ಅನುಕೂಲದ ವಿಚಾರವಲ್ಲ, ಅದೊಂದು ಆರ್ಥಿಕ ಜೀವನಾಡಿಯಾಗಿದ್. ಈ ನಿಟ್ಟಿನಲ್ಲಿ ಸಚಿವ ಎಂ.ಬಿ.ಪಾಟೀಲ್ ಅವರು ಕೂಡಲೇ ಮಧ್ಯಪ್ರವೇಶಿಸಿ ಓಖಐಐಈಇ ಮೂಲಕ ಅಗತ್ಯ ತುರ್ತು ಕ್ರಮ ಕೈಗೊಳ್ಳುವಂತೆ ಸಂಸದರು ಒತ್ತಾಯಿಸಿದ್ದಾರೆ.

ಪ್ರಾದೇಶಿಕ ವಿಮಾನಯಾನವನ್ನು ಬಲಪಡಿಸುವ ರಾಜ್ಯ ಸರ್ಕಾರದ ಬದ್ಧತೆ ಹಾಗೂ ವಿಶ್ವಾಸಾರ್ಹತೆ ಕೂಡ ಇದರಲ್ಲಿ ಅಡಕವಾಗಿದೆ. ಕಳೆದ ಮೂರು ವರ್ಷಗಳಲ್ಲಿ ಜಿಲ್ಲೆ ಸಾಧಿಸಿದ ಪ್ರಗತಿಯನ್ನು ಸುಸ್ಥಿರವಾಗಿಸುವ ನಿಟ್ಟಿನಲ್ಲಿ ರಾಜ್ಯ ಸರ್ಕಾರ ಸೂಕ್ತವಾಗಿ ಸ್ಪಂದಿಸಬೇಕಿದೆ ಎಂದು ಸಂಸದರು ಮನವಿ ಮಾಡಿದ್ದಾರೆ.

ಈ ಕುರಿತು ಮಾತನಾಡಿದ ಸಂಸದ ಬಿ.ವೈ.ರಾಘವೇಂದ್ರ, ನಾನು, ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಅವರು ಸಾಕಷ್ಟು ಪ್ರಯತ್ನ ಮಾಡಿದೆವು. ಇಂಡಿಗೋ ಮ್ಯಾನೇಜ್ಮೆಂಟ್ ಬರೆದ ಪತ್ರದಲ್ಲಿ ವಿಮಾನ ಹಾಗೂ ಪೈಲೆಟ್‌ಗಳ ಕೊರತೆ ಅಂತ ಹೇಳಿದ್ದಾರೆ. ನನಗೆ ಸಿಕ್ಕ ಸುದ್ದಿ ಪ್ರಕಾರ, ಶಿವಮೊಗ್ಗ - ಬೆಂಗಳೂರು ಮಾರ್ಗ ಉಡಾನ್ ಯೋಜನೆಯಡಿ ಬರುವುದಿಲ್ಲ. ಆದರೆ, ಉಳಿದ ಮಾರ್ಗಗಳು ಉಡಾನ್‌ನಡಿ ಬರುತ್ತವೆ. ಹಿಂದೆ ಬಿಜೆಪಿ ಸರ್ಕಾರ ಇದ್ದಾಗ ವಿಮಾನಯಾನ ಸಂಸ್ಥೆಯವರನ್ನು ಒತ್ತಾಯ ಮಾಡಿಯೇ ಕರೆದುಕೊಂಡು ಬರಲಾಗಿದೆ. ಅಲ್ಲದೆ, ಇಂಡಿಗೋದವರಿಗೆ ಪ್ರತಿ ದಿನ ಪ್ರಯಾಣಿಕರ ಸಂಖ್ಯೆ ಶೇ.50ಕ್ಕಿಂತ ಕಡಿಮೆ ಸೀಟು ಭರ್ತಿಯಾದರೆ ಶೇ.50ರಷ್ಟು ಸೀಟಿಗೆ ಪ್ರತಿ ಸೀಟಿಗೆ 500 ರೂ. ಗಳಂತೆ ಹಣ ನೀಡುವ ಒಪ್ಪಂದ ಆಗಿತ್ತು. ಒಪ್ಪಂದವು 2025ಕ್ಕೆ ಮುಕ್ತಾಯವಾಗಿದೆ. ಆದರೂ ಬಳಿಕ ಒಂದು ವರ್ಷ ಇಂಡಿಗೋ ವಿಮಾನಗಳು ಹಾರಾಟ ಮಾಡಿವೆ. ಇದರ ಕುರಿತು ನಾನು ಸಚಿವರಾದ ಎಂ.ಬಿ.ಪಾಟೀಲರಿಗೆ ಮನವರಿಕೆ ಮಾಡಿಕೊಡುವ ಪ್ರಯತ್ನ ಮಾಡಿದ್ದೇನೆ. ಅವರು ಉಪ ಚುನಾವಣೆಯಲ್ಲಿ ಬ್ಯುಸಿಯಾಗಿದ್ದರೂ ಸಹ ಫೋನ್‌ನಲ್ಲಿ 10 ನಿಮಿಷ ಮಾತನಾಡಿದ್ದೇನೆ ಎಂದರು.

ಹಿಂದೆ ಯಡಿಯೂರಪ್ಪನವರು ಬೀದರ್ನಿಂದ ಬೆಂಗಳೂರು ಇಂಡಿಗೋ ವಿಮಾನ ಮಾರ್ಗಕ್ಕೆ ಹಣ ನೀಡಿದ್ದರು ಎಂಬ ಸುದ್ದಿ ಇದೆ. ನಾನು ಸಚಿವ ಎಂ.ಬಿ.ಪಾಟೀಲರಿಗೆ ಕೇಳಿದೆ, ಅವರು ಹಣ ಹೇಗೆ ನೀಡುವುದು ಎಂದು ಕೇಳಿದರು. ನಾನು ಹಳೇ ಅಗ್ರಿಮೆಂಟ್ ಇದೆ, ಅದನ್ನು ಮುಂದುವರೆಸಿ ಎಂದು ಮನವಿ ಮಾಡಿದ್ದೇನೆ. ಏನಾಗುತ್ತದೆ ಎಂದು ನೋಡೋಣ. ನೈಟ್ ಲ್ಯಾಂಡಿಂಗ್ ವ್ಯವಸ್ಥೆ ನಿಧಾನವಾಗುತ್ತಿದೆ. ಅಲ್ಲದೇ ವಿಮಾನ ಬಂದು ವಾಪಸ್ ಹೋಗಿರುವ ಉದಾಹರಣೆ ಸಹ ಇದೆ. ಆದರೂ ಸಹ ಕೇಂದ್ರದಿಂದ ವಿಮಾನಯಾನ ಸಂಸ್ಥೆ ಜೊತೆ ಮಾತನಾಡುವ ಕೆಲಸ ಮಾಡಲಾಗುತ್ತಿದೆ. ರಾಜ್ಯದ ಕಡೆಯಿಂದ ವಿಜಿಎಫ್ ಕೊಡಬೇಕು, ಅದನ್ನು ನೀಡಿ ಎಂದು ಮನವಿ ಮಾಡಲಾಗಿದೆ ಎಂದು ಬಿ.ವೈ.ರಾಘವೇಂದ್ರ ತಿಳಿಸಿದರು.

## ಬಿಎಸ್‌ಎಸ್‌ಎಲ್ ನಿವೃತ್ತ ನೌಕರರಿಂದ ವಿವಿಧ ಬೇಡಿಕೆಗಳಿಗೆ ಆಗ್ರಹಿಸಿ ಕಚೇರಿ ಮುಂದೆ ಪ್ರತಿಭಟನೆ

ಅನ್ವಯವಾಗುವ ಐಡಿಎ ದರಗಳನ್ನು ನಿಗದಿಪಡಿಸಲಾಗಿದೆ. 2007 ವೇತನ ಮಾಪಕಕ್ಕೆ ಅನುಗುಣವಾಗಿ ಡಿಒಟಿ (ಐಡಿಎ) ಪಿಂಚಣಿದಾರರು ಡಿಆರ್ ಹೆಚ್ಚಳಕ್ಕೆ ಅರ್ಹರಾಗಿದ್ದಾರೆ. ಈ ಆದೇಶದ ಅನುಷ್ಠಾನ ಸಂಬಂಧಿತ ಜವಾಬ್ದಾರಿ ದೂರಸಂಪರ್ಕ ಇಲಾಖೆ ಮೇಲಿದ್ದರೂ, ಇನ್ನೂ ಜಾರಿಗೊಳಿಸದಿರುವುದು ಲಕ್ಷಾಂತರ ಪಿಂಚಣಿದಾರರಲ್ಲಿ ಆತಂಕ ಹಾಗೂ ಅಸಮಾಧಾನಕ್ಕೆ ಕಾರಣವಾಗಿದೆ. ದೇಶಾದ್ಯಂತ ಸುಮಾರು 4 ಲಕ್ಷಕ್ಕೂ ಹೆಚ್ಚು ಬಿಎಸ್‌ಎನ್‌ಎಲ್, ಎಂಟಿಎನ್‌ಎಲ್ ಪಿಂಚಣಿದಾರರು ಇದರಿಂದ ಸಂಕಷ್ಟ ಅನುಭವಿಸುತ್ತಿದ್ದಾರೆ ಎಂದು ಆರೋಪಿಸಿದರು. ಕೂಡಲೇ ಫೆ.27ರ ಡಿಪಿಇ ಆದೇಶವನ್ನು ತಕ್ಷಣ ಜಾರಿಗೆ ತರಬೇಕು, ಜ.1ರಿಂದ ಅನ್ವಯವಾಗುವಂತೆ ಹೆಚ್ಚಿದ ಡಿಆರ್ ನೀಡಬೇಕು. ಆದೇಶದ ಪ್ಯಾರಾ 5 ಹಿಂತೆಗೆದುಕೊಳ್ಳಬೇಕು. ಮುಂದಿನ ದಿನಗಳಲ್ಲಿ ತುಟ್ಟಿ ಪರಿಹಾರವನ್ನು ಸ್ವಯಂಚಾಲಿತವಾಗಿ ಬಿಡುಗಡೆ ಮಾಡಬೇಕು. ಇಲ್ಲವಾದಲ್ಲಿ ಏ.30ರಂದು ದೇಶದಾದ್ಯಂತ ಸಿಸಿಎ/ಬಿಎಸ್‌ಎನ್‌ಎಲ್ ಕಚೇರಿಗಳ ಮುಂದೆ ಬೃಹತ್ ಶಾಂತಿಯುತ ಧರಣಿ ನಡೆಸಲಾಗುವುದು ಎಂದು ಪಿಂಚಣಿದಾರರು ಎಚ್ಚರಿಕೆ ನೀಡಿದರು. ಈ ಸಂದರ್ಭದಲ್ಲಿ ಸಂಘದ ವಲಯ ಉಪಾಧ್ಯಕ್ಷ ಎಸ್.ವಿ.ಅರಳಿ, ಜಿಲ್ಲಾಧ್ಯಕ್ಷ ಸಿದ್ದಪ್ಪ, ಜಿಲ್ಲಾ ಕಾರ್ಯದರ್ಶಿ ಸೈಯದ್ ಅಕ್ಬರ್ ಹುಸೇನ್, ಖಜಾಂಚಿ ಮೊಹ್ಮದ್ ಯೂನೂಸ್, ಗೌರವಾಧ್ಯಕ್ಷ ಬಸವರಾಜ, ಬಾಬುಲಾಲ್, ಮುಕ್ತಾ ಯರನಾಕರ ಸೇರಿದಂತೆ ಅನೇಕರಿದ್ದರು.

## ಮಹಿಳಾ ಸಬಲೀಕರಣಕ್ಕೆ ನರೇಂದ್ರ ಮೋದಿಯವರ ದಿಟ್ಟ ಹೆಜ್ಜೆ-ಸುಗುಣಾ

ಬೇಟಿ ಬಚಾವೋ, ಬೇಟಿ ಪಡಾವೋ ಯೋಜನೆ, ಸುಕನ್ಯಾ ಸಂಮೃದ್ಧಿ, ಮಾತೃವಂದನಾ ಪೋಷಣಾ ಅಭಿಯಾನ, ಪ್ರಧಾನ ಮಂತ್ರಿ ಜನ್ ಧನ್ ಯೋಜನೆ ಮುದ್ರಾ ಯೋಜನೆಯ ಮೂಲಕ ಮಹಿಳೆಯರನ್ನು ಸ್ವಾವಲಂಬಿಗಳನ್ನಾಗಿಸಲಾಗಿದೆ. ಲಖ್ ಪಟ್ಟಿ, ನಮೋ ಡ್ರೋನ್ ಯೋಜನೆಗಳಿಗೆ ಮಹಿಳಯರಿಗೆ ತರಬೇತಿ ನೀಡಿ ತಂತ್ರಜ್ಞಾನ, ಉದ್ಯಮಶೀಲತೆಯನ್ನು ಒದಗಿಸಲಾಗುತ್ತಿದೆ. 2047 ಗುರಿಯೊಂದಿಗೆ ದೇಶವನ್ನು ಜಗತ್ತಿನಲ್ಲಿಯೇ ನಂಬರ್ ಒನ್ ಸ್ಥಾನಕ್ಕೆ ತಂದು ನಿಲ್ಲಿಸುವ ಸಂಕಲ್ಪ ಮಾಡಿರುವ ಪ್ರಧಾನಿ ನರೇಂದ್ರ ಮೋದಿಯವರನ್ನು ಎಲ್ಲ ಮಹಿಳೆಯರು ಬೆಂಬಲಿಸಬೇಕು ಎಂದರು. ನಾರಿ ಶಕ್ತಿ ಕಾಯ್ದೆ ಕುರಿತು ಮೋರ್ಚಾದಿಂದ ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ ಎಂದರು. ಈ ಸಂದರ್ಬದಲ್ಲಿ ಜಿಲ್ಲಾ ಕಾರ್ಯದರ್ಶಿ ಸುಮಾ ಅಶೋಕ ಗಸ್ತಿ, ಆಶ್ವನಿ, ಆದಿಲಕ್ಷ್ಮಿ ಉಪಸ್ಥಿತರಿದ್ದರು.

OWNER, PUBLISHER, PRINTER BY: SHYAM SUNDER L. PUBLISHED FROM: H: NO: 5-3-6, HANUMAN TALKIES ROAD, OPP VAIKUNTAM TEMPLE, NETAJI NAGAR, RAICHUR-584101, DIST: RAICHUR, KARNATAKA AND PRINTED AT: KANNADA MATHRUBHOOMI PRINTERS, SHOP NO: 5-3-6, HANUMAN TALKIES ROAD, OPP VAIKUNTAM TEMPLE, NETAJI NAGAR, RAICHUR-584101, DIST: RAICHUR, KARNATAKA, EDITOR BY: SHYAM SUNDER L